ಸಂಪುಟ: 13 Volume | ಸಂಚಿಕೆ: 275 Issue | ಪುಟಗಳು 08 Pages | ಶುಕ್ರವಾರ 19 ಡಿಸೆಂಬರ್ 2025 | ₹6 | PRGINO.120927 (RNINO:KARKAN/2011/48371) | BDR/054/2026-2027 | mallammanudi@gmail.com | www.mallammanudi.in | 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

MN ಸತ್ಯಮೇವ ಜಯತೆ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ಮಾತುಗಳು ಪರಸ್ಪರ ಬೇರ್ಪಡಿಸಲು ಇರುವುದಲ್ಲ, ಪರಸ್ಪರ ಸೇರಿಸಲು ಇರುವುದಾಗಿದೆ.

–ಮಹಾತ್ಮ ಗಾಂಧೀಜಿ

ಬಳ್ಳಾರಿಗೆ ಮಲತಾಯಿ ಧೋರಣೆ ಅನುಸರಣೆ ಸರಿಯಲ್ಲ 6

ಮಹಾಸಭಾದ ಅಧ್ಯಕ್ಷರಾಗಿ ಖಂಡ್ರೆ ಅಧಿಕಾರ 7

ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ 8

## 100 ವಿದ್ಯುತ್ ಕೇಂದ್ರ ಸ್ಥಾಪನೆ



**ಬೆಳಗಾವಿ:** ಪ್ರಸಕ್ತ ವರ್ಷ ರಾಜ್ಯದಲ್ಲಿ 100 ವಿದ್ಯುತ್ ಕೇಂದ್ರಗಳನ್ನು ಸ್ಥಾಪಿಸಲಾಗುವುದು ಎಂದು ಇಂಧನ ಸಚಿವ ಕೆ.ಜೆ.ಜಾರ್ಜ್ ವಿಧಾನಸಭೆಗೆ ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ದೊಡ್ಡನಗೌಡ ಹನುಮಗೌಡ ಪಾಟೀಲ ಅವರ ಪ್ರಶ್ನೆಗೆ ಉತ್ತರಿಸಿದ ಸಚಿವರು, 2–3 ವರ್ಷದಲ್ಲಿ 400 ವಿದ್ಯುತ್ ಉಪಠಾಣೆಗಳನ್ನು ಮಾಡುವ ಗುರಿಯಿದ್ದು,ಜಮೀನು ಇರುವ ಕಡೆಗಳಲ್ಲಿ ಉಪಠಾಣೆಗಳನ್ನು ಮಂಜೂರು ಮಾಡಲಾಗುತ್ತಿದೆ ಎಂದಿದ್ದಾರೆ. ಬಿಸಿಲು ಇದ್ದಾಗ ಮಾತ್ರ ಸೌರ ವಿದ್ಯುತ್ ಉತ್ಪಾದನೆಯಾಗುತ್ತದೆ. ಆದರೆ ಪವನಶಕ್ತಿ ಗಾಳಿ ಬೀಸುತ್ತಿದ್ದರೆ ಹಗಲು–ರಾತ್ರಿ ಉತ್ಪಾದನೆಯಾಗುತ್ತದೆ. ರಾಜ್ಯದಲ್ಲಿ 7,300 ಮೆಗಾವ್ಯಾಟ್‌ನಷ್ಟು ಪವನಶಕ್ತಿ ವಿದ್ಯುತ್ ಉತ್ಪಾದನೆಯಾಗುತ್ತಿದೆ ಎಂದು ವಿವರಿಸಿದ್ದಾರೆ.

## ಸೀಗಲ್ ಪಕ್ಷಿಗೆ ಜಿಪಿಎಸ್ ಅಳವಡಿಕೆ

**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ಕಾರವಾರದ ಕರಾವಳಿ ಪ್ರದೇಶದ ಬಳಿ, ಸೂಕ್ಷ್ಮ ನೌಕಾ ವಲಯದ ಬಳಿ, ಸೀಗಲ್ ಪಕ್ಷಿಗೆ ಚೀನಾ ನಿರ್ಮಿತ ಜಿಪಿಎಸ್ ಟ್ರ್ಯಾಕಿಂಗ್ ಸಾಧನವೊಂದು ಜೋಡಿಸಲ್ಪಟ್ಟಿರುವುದು ಕಂಡುಬಂದ ನಂತರ ಭದ್ರತಾ ಸಂಸ್ಥೆಗಳು ಮತ್ತು ಅರಣ್ಯ ಅಧಿಕಾರಿಗಳು ತನಿಖೆಯನ್ನು ಪ್ರಾರಂಭಿಸಿದ್ದಾರೆ. ಆದಾಗ್ಯೂ, ಪ್ರಾಥಮಿಕ ಸಂಶೋಧನೆಗಳು ಬೇಹುಗಾರಿಕೆಗಿಂತ ವೈಜ್ಞಾನಿಕ ಸಂಶೋಧನೆಯನ್ನು ಸೂಚಿಸುತ್ತವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.ಆವಿಷ್ಕಾರವನ್ನು ದೃಢಪಡಿಸಿದ ಕಾರವಾರ ಪಟ್ಟಣದ ಪೊಲೀಸರು, ಸ್ಥಳೀಯ ನಿವಾಸಿಗಳು ಬೀಚ್ ಬಳಿಯ ತಿಮ್ಮಕ್ಕ ಉದ್ಯಾನ ಪ್ರದೇಶದ ಹಿಂದೆ ಅಸಾಮಾನ್ಯವಾಗಿ ಟ್ಯಾಗ್ ಮಾಡಲಾದ ಸೀಗಲ್ ವಿಶ್ರಾಂತಿ ಪಡೆಯುತ್ತಿರುವುದನ್ನು ಗಮನಿಸಿದಾಗ ಈ ಘಟನೆ ಬೆಳಕಿಗೆ ಬಂದಿದೆ ಎಂದಿದ್ದಾರೆ.

## ಚಿನ್ನಯ್ಯನಿಗೆ ಕೊನೆಗೂ ಜಾಮೀನು



**ಶಿವಮೊಗ್ಗ:** ಧರ್ಮಸ್ಥಳ ಗ್ರಾಮದಲ್ಲಿ ಈ ಹಿಂದೆ ನಡೆದಿದೆ ಎನ್ನಲಾದ ಅಪರಾಧ ಕೃತ್ಯಗಳ ಮೃತದೇಹಗಳನ್ನು ಹೂತು ಹಾಕಲಾಗಿದೆ ಎಂದು ಆರೋಪಿಸಲಾದ ಪ್ರಕರಣದ ಸಾಕ್ಷಿ ದೂರುದಾರ ಚಿನ್ನಯ್ಯ ಅವರನ್ನು ಶಿವಮೊಗ್ಗ ಜೈಲಿನಿಂದ ಷರತ್ತುಬದ್ಧ ಜಾಮೀನಿನ ಮೇಲೆ ಬಿಡುಗಡೆಗೊಳಿಸಲಾಯಿತು. ಆತನಿಗೆ ಮಂಗಳೂರಿನ ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯ ನ.24ರಂದು ಷರತ್ತುಬದ್ಧ ಜಾಮೀನು ಮಂಜೂರು ಮಾಡಿತ್ತು.

## ಮುಖ್ಯಮಂತ್ರಿಗೆ ಅನಾರೋಗ್ಯ

**ಬೆಳಗಾವಿ:** ಬೆಳಗಾವಿಯಲ್ಲಿ ನಡೆಯುತ್ತಿರುವ ಚಳಿಗಾಲ ಅಧಿವೇಶನದಲ್ಲಿ ಸಕ್ರಿಯವಾಗಿ ಭಾಗವಹಿಸುತ್ತಿದ್ದ ಸಿಎಂ ಸಿದ್ದರಾಮಯ್ಯನವರಿಗೆ ನಿನ್ನೆ ಇದ್ದಕ್ಕಿದ್ದಂತೆ ಹೊಟ್ಟೆನೋವು ಕಾಣಿಸಿಕೊಂಡಿತ್ತು. ಬೆಳಗಾವಿ ಸುವರ್ಣ ಸೌಧದ ಹೊರಗೆ ಗಾಂಧಿ ಪ್ರತಿಮೆ ಮುಂದೆ ಏರ್ಪಡಿಸಿದ್ದ ಕೇಂದ್ರಸರ್ಕಾರದ ವಿರುದ್ಧ ಪ್ರತಿಭಟನೆಯಲ್ಲಿ ಭಾಗಿಯಾಗಿದ್ದರು. ಇದ್ದಕ್ಕಿದ್ದಂತೆ ಅನಾರೋಗ್ಯ ಕಾಣಿಸಿಕೊಂಡು ನಂತರ ಸರ್ಕ್ಯೂಟ್ ಹೌಸ್‌ಗೆ ತೆರಳಿದ್ದಾರೆ. ತಂದೆಯವರ ಆರೋಗ್ಯ ವಿಚಾರಿಸಿ ಹೊರಬಂದ ನಂತರ ಮಾಧ್ಯಮ ಪ್ರತಿನಿಧಿಗಳ ಜೊತೆ ಮಾತನಾಡಿದ ಯತೀಂದ್ರ, ಈಗ ತಂದೆಯವರ ಆರೋಗ್ಯ ಚೆನ್ನಾಗಿದೆ, ವೈದ್ಯರು ಮಾತ್ರೆಗಳನ್ನು ಕೊಟ್ಟಿದ್ದಾರೆ ಎಂದು ತಿಳಿಸಿದ್ದಾರೆ.

## ಜಿ ರಾಮ್ ಜಿ ಮಸೂದೆ ಓಕೆ

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ



ಪ್ರತಿಪಕ್ಷಗಳ ತೀವ್ರ ವಿರೋಧದ ನಡುವೆಯೇ ಅಸ್ತಿತ್ವದಲ್ಲಿರುವ ನರೇಗಾ ಯೋಜನೆ(ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ)ಯಿಂದ ಮಹಾತ್ಮ ಗಾಂಧಿ ಹೆಸರನ್ನು ತೆಗೆದುಹಾಕುವ ಜಿ ರಾಮ್ ಜಿ ಮಸೂದೆಯನ್ನು ಗುರುವಾರ ಲೋಕಸಭೆಯಲ್ಲಿ ಅಂಗೀಕಾರಿಸಲಾಯಿತು.

20 ವರ್ಷಗಳಷ್ಟು ಹಳೆಯದಾದ ಎಂಜಿಎನ್‌ಆರ್‌ಇಜಿಎ ಬದಲಿಗೆ ಪ್ರತಿ ವರ್ಷ 125 ದಿನಗಳವರೆಗೆ ಗ್ರಾಮೀಣ ಉದ್ಯೋಗಗಳನ್ನು ಖಾತರಿಪಡಿಸುವ ವಿಕಸಿತ ಭಾರತ – ಉದ್ಯೋಗ ಖಾತರಿ ಮತ್ತು ಜೀವನೋಪಾಯ ಮಿಷನ್(ಗ್ರಾಮೀಣ) (ವಿಬಿ–ಜಿ ರಾಮ್ ಜಿ) ಮಸೂದೆ, 2025 ಅನ್ನು ಮಂಗಳವಾರ ಕೇಂದ್ರ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರು ಲೋಕಸಭೆಯಲ್ಲಿ ಮಂಡಿಸಿದ್ದರು.

ಇಂದು ಮಸೂದೆ ಮೇಲಿನ ಚರ್ಚೆಗೆ ಶಿವರಾಜ್ ಸಿಂಗ್ ಚೌಹಾಣ್ ಅವರು ಉತ್ತರಿಸಿದ ನಂತರ ಜಿ ರಾಮ್ ಜಿ ಮಸೂದೆಯನ್ನು ಅಂಗೀಕರಿಸಲಾಯಿತು.

## ಉಚಿತ ಪ್ರಯಾಣಕ್ಕೆ ಸಮಸ್ಯೆ ಇಲ್ಲ



**ಬೆಳಗಾವಿ:** ಮಹಿಳೆಯರಿಗೆ ಸರ್ಕಾರಿ ಬಸ್‌ಗಳಲ್ಲಿ ರಾಜ್ಯಾದ್ಯಂತ ಉಚಿತವಾಗಿ ಪ್ರಯಾಣಿಸಲು ಯಾವುದೇ ಹಣಕಾಸಿನ ಸಮಸ್ಯೆ ಎದುರಾಗಿಲ್ಲ ಎಂದು ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಅವರು ವಿಧಾನಪರಿಷತ್ನಲ್ಲಿ ಸ್ಪಷ್ಟಪಡಿಸಿದ್ದಾರೆ.

ಶೂನ್ಯವೇಳೆಯಲ್ಲಿ ಬಿಜೆಪಿಯ ಭಾರತಿ ಶೆಟ್ಟಿ ಅವರು ಪ್ರಸ್ತಾಪಿಸಿದ ವಿಷಯಕ್ಕೆ ಉತ್ತರಿಸಿದ ಸಚಿವರು, ಶಕ್ತಿ ಯೋಜನೆಯಲ್ಲಿ 625 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ. ಇದರಿಂದ ಮಹಿಳಾ ಉದ್ಯೋಗಿಗಳ ಸಂಖ್ಯೆ ಹೆಚ್ಚಾಗಿದೆ. ಶಕ್ತಿ ಯೋಜನೆಯ ಬಾಕಿ ಹಣ ಸರಕಾರದಿಂದ ಬರಬೇಕು. ಮುಂದಿನ ಬಜೆಟ್‌ನಲ್ಲಿ ಸಿಎಂ ಕೊಡುತ್ತಾರೆ. ಇಲಾಖೆಯಲ್ಲಿ ಯಾವ ಸಮಸ್ಯೆಯೂ ಇಲ್ಲ ಎಂದು ಪುನರುಚ್ಚರಿಸಿದ್ದಾರೆ.

ಇದಕ್ಕೂ ಮುನ್ನ ಬಿಜೆಪಿಯ ಭಾರತಿ ಶೆಟ್ಟಿ ಅವರು, ಶಿರಸಿ–ಹುಬ್ಬಳ್ಳಿ ನಡುವೆ ಮೂರು ಗಂಟೆ ಬಸ್ ಸಂಚರಿಸುತ್ತದೆ. ಇಷ್ಟು ತಡವಾಗಿ ಬರಬೇಕಾದರೆ ಬಸ್ಸುಗಳಿಗೆ ಸರ್ಕಾರ ಹಣ ನೀಡುತ್ತಿಲ್ಲವೇ ಎಂದು ಪ್ರಶ್ನೆ ಮಾಡಿದ್ದಾರೆ.

# ಬೆಂಕಿ ವಿಧೇಯಕಕ್ಕೆ ಮುದ್ರೆ

## ಬೈರತಿ ಹೇಳಿಕೆಗೆ ಬಿಜೆಪಿ ಕಿಡಿ | ಪರಸ್ಪರ ವಾಕ್ಸಮರ | ಕೊನೆಗೂ ಅನುಮೋದನೆ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ

ಕರಾವಳಿಗೆ ಬೆಂಕಿ ಹಾಕಿ ಇಲ್ಲಿ ಏಕೆ ಬೆಂಕಿ ಹಾಕ್ತಿದ್ದಾರೆ ಎಂಬ ಸಚಿವ ಬೈರತಿ ಸುರೇಶ್ ಹೇಳಿಕೆಯು ವಿಧಾನಸಭೆಯ ಗದ್ದಲ, ಕೋಲಾಹಲ ಸೃಷ್ಟಿಸಿದೆ. ಸಚಿವರ ಹೇಳಿಕೆ ಖಂಡಿಸಿ ಬಿಜೆಪಿ ಸದಸ್ಯರು ಸದನದ ಭಾವಿಗಿಳಿದು ಪ್ರತಿಭಟನೆ ನಡೆಸಿದ್ದಾರೆ. ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ ಪರ್ಯಾಲೋಚನೆ ಸಂದರ್ಭದಲ್ಲಿ ನಡೆದ ಚರ್ಚೆಯ ವೇಳೆ ಕರಾವಳಿ ಭಾಗದ ಬಿಜೆಪಿ ಶಾಸಕರ ವಿರುದ್ಧ ಸಚಿವ ಬೈರತಿ ಸುರೇಶ್ ಆಕ್ರೋಶ ವ್ಯಕ್ತಪಡಿಸಿದ್ದಾರೆ ಬೈರತಿ ಸುರೇಶ್ ವಿರುದ್ಧ ಕರಾವಳಿ ಭಾಗದ ಬಿಜೆಪಿ ಶಾಸಕರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಖಾದರ್ ನೀಡಿದ ಭರವಸೆ:** ಈ ವೇಳೆ ಕರಾವಳಿಗೆ ಅಪಮಾನ ಮಾಡಿದರೆ ಸಹಿಸಲ್ಲ ಎಂದು ವೇದವ್ಯಾಸ ಕಾಮತ್ ಸೇರಿದಂತೆ ಬಿಜೆಪಿ ಶಾಸಕರು ತಿರುಗೇಟು ನೀಡಿದರು. ಇದೇ ಸಂದರ್ಭದಲ್ಲಿ ಸಚಿವರು ಆಡಿರುವ ಮಾತನ್ನು ಕಡತದಿಂದ ತೆಗೆಯುವ ನಿಟ್ಟಿನಲ್ಲಿ ಪರಿಶೀಲನೆ ನಡೆಸುತ್ತೇನೆ ಎಂದು ಸ್ಪೀಕರ್ ಖಾದರ್ ಭರವಸೆ ನೀಡಿದ್ದಾರೆ.







### ಬಿಜೆಪಿ ಶಾಸಕರ ಕಟ್ಟೆ ಒಡೆದ ಆಕ್ರೋಶ

ಕರಾವಳಿಗೆ ಬೆಂಕಿ ಹಚ್ಚಿದ್ದು ಅಂದರೆ? ಕರಾವಳಿಯ ಬಗ್ಗೆ ಹಗುರವಾಗಿ ಮಾತನಾಡಲು ಆಗಲ್ಲ ಎಂದು ಬಿಜೆಪಿ ಸುನೀಲ್‌ಕುಮಾರ್ ಉಗ್ರರಾದರು. ಶಾಸಕರಾದ ವೇದವ್ಯಾಸ ಕಾಮತ್, ಭರತ್ ಶೆಟ್ಟಿ, ಹರೀಶ್ ಪೂಂಜಾ, ಯಶಪಾಲ್ ಸುವರ್ಣ ಸಾಥ್ ನೀಡಿದರು. ಬೈರತಿ ಸುರೇಶ್ ನೀಡಿರುವ ಹೇಳಿಕೆ ಕಡತದಿಂದ ವಾಪಸ್ ಪಡೆಯಬೇಕು ಎಂದು ಆಗ್ರಹಿಸಿದ್ದು, ಈ ವೇಳೆ ಬೈರತಿ– ಬಿಜೆಪಿ ಶಾಸಕರ ನಡುವೆ ಚಕಮಕಿ ನಡೆಯಿತು.

### ಮೊದಲ ಕಾನೂನು ಇದು!

ದ್ವೇಷ ಭಾಷಣ ತಡೆಯುವ ದೇಶದ ಮೊದಲ ಕಾನೂನು ಇದಾಗಿದ್ದು, ಈ ಮಸೂದೆಯು ಒಂದು ಲಕ್ಷ ರೂ.ಗಳವರೆಗೆ ದಂಡ ಮತ್ತು ಗರಿಷ್ಠ 10 ವರ್ಷಗಳವರೆಗೆ ಜೈಲು ಶಿಕ್ಷೆಗೆ ಅವಕಾಶ ನೀಡುತ್ತದೆ. ಈ ಮಸೂದೆಯನ್ನು ಡಿಸೆಂಬರ್ 4 ರಂದು ಸಭೆಯಲ್ಲಿ ಅಂಗೀಕರಿಸಲಾಗಿತ್ತು.

### ಮಸೂದೆಯ ಹೂರಣವೇನು?

ದ್ವೇಷ ಭಾಷಣ ಪ್ರಚಾರ ತಡೆಯುವ ವಿಧೇಯಕ ಇದಾಗಿದ್ದು, ಪೂರ್ವಾಗ್ರಹ ಪೀಡಿತ ಹಿತಾಸಕ್ತಿಯನ್ನು ಪೂರೈಸಲು, ಜೀವಂತ ಅಥವಾ ಸತ್ತ ವ್ಯಕ್ತಿ, ಅಥವಾ ವ್ಯಕ್ತಿಗಳ ಗುಂಪಿನ ವಿರುದ್ಧ ದ್ವೇಷ ಅಥವಾ ದ್ವೇಷದ ಭಾವನೆಗಳನ್ನು ಉಂಟುಮಾಡುವ ಭಾಷಣ ಅಭಿವ್ಯಕ್ತಿಯನ್ನು ದ್ವೇಷ ಭಾಷಣ ಎಂದು ವರ್ಗೀಕರಿಸಲಾಗಿದೆ.

### ದ್ವೇಷ ಭಾಷಣ ತಡೆ ವಿಧೇಯಕಕ್ಕೆ ಅಸ್ತು

ರಾಜ್ಯದಲ್ಲಿ ದ್ವೇಷ ಭಾಷಣಗಳಿಗೆ ಕಡಿವಾಣ ಹಾಕಲು ರಾಜ್ಯ ಸರ್ಕಾರ ಕರ್ನಾಟಕ ದ್ವೇಷ ಭಾಷಣ ಮತ್ತು ದ್ವೇಷ ಅಪರಾಧಗಳ (ಪ್ರತಿಬಂಧಕ) ವಿಧೇಯಕ–2025 ಅನ್ನು ವಿಧಾನಸಭೆಯಲ್ಲಿ ಅಂಗೀಕರಿಸಿದೆ. ಗೃಹ ಸಚಿವ ಡಾ.ಪರಮೇಶ್ವರ ಮಸೂದೆ ಮಂಡಿಸಿದ್ದರು. ಚರ್ಚೆ ಬಳಿಕ ಪಕ್ಷಗಳ ತೀವ್ರ ವಿರೋಧದ ನಡುವೆಯೇ ಮಸೂದೆ ಅಂಗೀಕರಿಸಲಾಗಿದೆ.

## ವಿಜಯೇಂದ್ರ ಕಲೆಕ್ಷನ್ ಕಿಂಗ್



**ಬೆಳಗಾವಿ:** ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿವೈ ವಿಜಯೇಂದ್ರ ವಿರುದ್ಧ, ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಗುರುತರ ಆರೋಪವನ್ನು ಮಾಡಿದ್ದಾರೆ. ವರದಿಗಾರರ ಜೊತೆ ಮಾತನಾಡಿ, ತಮ್ಮ ಇತಿಮಿತಿಯಲ್ಲಿ ಇದ್ದರೆ ಅವರಿಗೆ ಒಳ್ಳೆಯದು. ಇಲ್ಲದಿದ್ದರೆ, ಸದನದಲ್ಲಿ ಎಲ್ಲವನ್ನೂ ಬಿಚ್ಚಿಡ ಬೇಕಾಗುತ್ತದೆ ಎನ್ನುವ ಎಚ್ಚರಿಕೆಯನ್ನು ನೀಡಿದ್ದಾರೆ. ಕಲೆಕ್ಷನ್ ಕಿಂಗ್ ಎಂದು ಏನಾದರೂ ಇದ್ದರೆ ಅದು ವಿಜಯೇಂದ್ರ. ಅವರ ತಂದೆ ಹೆಸರು ಇಳಿಯಲು ವಿಜಯೇಂದ್ರ ಕಾರಣ. ಇದನ್ನ ಮರೆಯಬಾರದು ಎಂದು ಎಚ್ಚರಿಸಿದ್ದಾರೆ.

ನಾವು ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಅವರಿಗೆ ಕಿರುಕುಳ ನೀಡುತ್ತಿರುವ ವಿಚಾರ ಚರ್ಚೆ ತೆಗೆದುಕೊಳ್ಳುತ್ತೇವೆ ಎಂದು ಪ್ರತಿಪಕ್ಷಗಳು ದಾರಿ ತಪ್ಪಿಸಲು ಈ ವಿಚಾರ ಎತ್ತುಕೊಂಡಿದ್ದಾರೆ ಎಂದು ನುಡಿದಿದ್ದಾರೆ.

## ಮಕ್ಕಳಿಗೆ ಗೀತೆಯ ಪಾಠ..!

**ಬೆಂಗಳೂರು:** ಶಾಲಾ ಹಂತದಿಂದಲೇ ಭಗವದ್ಗೀತೆಯನ್ನು ಮಕ್ಕಳಿಗೆ ಬೋಧಿಸಬೇಕು. ಇದು ಅತ್ಯಂತ ಉತ್ತಮ ಶೈಕ್ಷಣಿಕ ಸುಧಾರಣಾ ಕ್ರಮವಾಗುತ್ತದೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಪುನರುಚ್ಚರಿಸಿದ್ದಾರೆ. ಮೈಸೂರಿನ ಕುವೆಂಪು ವಿಶ್ವಮಾನವ ಕ್ಷೇಮಾಭಿವೃದ್ಧಿ ಟ್ರಸ್ಟ್ ಹಾಗೂ ದೆಹಲಿ ಕರ್ನಾಟಕ ಸಂಘ ಹಮ್ಮಿಕೊಂಡಿದ್ದ ರಾಷ್ಟ್ರಕವಿ ಕುವೆಂಪು ಅವರ ಕೊಡುಗೆ ಮತ್ತು ಸಾಧನೆ ಕುರಿತ ವಿಚಾರ ಸಂಕಿರಣದ ಸಮಾರೋಪದಲ್ಲಿ ಮಾತನಾಡಿ, ಭಗವದ್ಗೀತೆಯನ್ನು ಬೋಧಿಸಬೇಕು ಎಂದು ಎಂದು ನಾನು ಹೇಳಿದ್ದು ರಾಜಕೀಯ ಉದ್ದೇಶ ಅಥವಾ ಯಾವುದೇ ಧರ್ಮ ಸಂಘರ್ಷ ಉಂಟು ಮಾಡುವುದಕ್ಕಲ್ಲ. ಉತ್ತಮ ಸಮಾಜ ನಿರ್ಮಾಣ ಮಾಡುವ ಅಗತ್ಯದ ದೃಷ್ಟಿಯಿಂದ ಹೇಳಿದ್ದೇನೆ ಎಂದು ಒತ್ತಿ ಹೇಳಿದ್ದಾರೆ.

ನಮಗೆ ಎಲ್ಲವೂ ಇದೆ, ತಾಂತ್ರಿಕವಾಗಿ ಮತ್ತು ಆರ್ಥಿಕವಾಗಿ ಬೆಳೆಯುತ್ತಿದ್ದೇವೆ. ಆದರೆ ಮೌಲ್ಯಗಳ ವಿಷಯಕ್ಕೆ ಬಂದಾಗ ಪಾತಾಳಕ್ಕೆ ಹೋಗುತ್ತಿದ್ದೇವೆ ಎಂದು ತಿಳಿಸಿದ್ದಾರೆ.

## ಕ್ರಸ್ಟ್ ಗೇಟ್ ಕಳಪೆ ಕಾಮಗಾರಿ ಬಗ್ಗೆ ದನಿ

• ವೀರೇಶ್ ಹೊಸಳ್ಳಿ ಸಿಂಧನೂರು



ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಮೂರು ದಿನಗಳಿಂದ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ಬಸನಗೌಡ ಬಾದರ್ಲಿ ಅವರು ಸಿಂಧನೂರು ರಾಷ್ಟ್ರೀಯ ಹೆದ್ದಾರಿ 150 ಎ ಹಳ್ಳದ ಕಳಪೆ ಕಾಮಗಾರಿಯಿಂದ ಕೂಡಿದೆ ಎಂದು ವಿಧಾನ ಪರಿಷತ್ ಸದಸ್ಯ ಶಾಸಕರು ಬಸನಗೌಡ ಬಾದರ್ಲಿ ಅವರು ಸದನದಲ್ಲಿ ಧ್ವನಿ ಎತ್ತಿ ಮಾತನಾಡಿ ಗುತ್ತಿಗೆದಾರರು ಹಾಗೂ ಅಧಿಕಾರಿಗಳ ವಿರುದ್ಧ ಆರೋಪಿಸಿದರು.

ಬೆಂಗಳೂರು ಟು ಚಾಮರಾಜ ನಗರದಿಂದ ಗುಲ್ಬರ್ಗ ಸಿಂಧನೂರು ಮಾರ್ಗವಾಗಿ ಹೋಗುವ ರಾಷ್ಟ್ರೀಯ ಹೆದ್ದಾರಿ 150 ಎ ಸಿಂಧನೂರು ಹಳ್ಳಕ್ಕೆ ಅಡ್ಡಲಾಗಿ ನಿರ್ಮಿಸಿರುವ ಸೇತುವೆ ಕಾಮಗಾರಿ ಗುಣಮಟ್ಟದ ಇಲ್ಲದೆ ಕಳಪೆಯಿಂದ ಕೂಡಿದ್ದು. ಅದನ್ನು ತುರ್ತಾಗಿ ಸರಿಪಡಿಸುವ ನಿಟ್ಟಿನಲ್ಲಿ ಹಾಗೂ ಇನ್ನೂ ಬಾಕಿ ಉಳಿದಿರುವ ಶೇ.10 ರಷ್ಟು ಕೆಲಸವನ್ನು ಅದೆಷ್ಟು ಬೇಗ ಪೂರ್ಣಗೊಳಿಸುವಂತೆ ಸದನದಲ್ಲಿ ಸಿಂಧನೂರು ಮಾರ್ಗದ ಮೂಲಕ ಬೆಂಗಳೂರು ಟು ಕಲಬುರ್ಗಿ ಸುಮಾರು ಒಂದು ದಿನಕ್ಕೆ ಸಾವಿರಾರು ವಾಹನಗಳು ಸಂಚರಿಸುವ ರಾಷ್ಟ್ರೀಯ ಹೆದ್ದಾರಿ 150 ಎ ಅಧಿಕಾರಿಗಳು ಹಾಗೂ ಗುತ್ತಿಗೆದಾರರು ಸೇರಿ ಪರ್ಸೆಂಟ್ ಕಮಿಷನ್ ಹೊಂದಾಣಿಕೆಯಿಂದ ಇವತ್ತು ಇಂತಹ ಕಳಪೆ ಕಾಮಗಾರಿ ನಡೆಯುವುದಕ್ಕೆ ಕಾರಣವಾಗಿದೆ ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಶಾಸಕರು ಬಸನಗೌಡ ಬಾದರ್ಲಿ ಸದನದಲ್ಲಿ ಧ್ವನಿ ಎತ್ತಿ ಮಾತನಾಡಿದ್ದಾರೆ. ಈಗಲಾದರೂ ಸರ್ಕಾರದ ಕಳಪೆ ಕಾಮಗಾರಿಗಳು ನಡೆಯದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುತ್ತದೆ ಇಲ್ಲಾ ಕಾದು ನೋಡಬೇಕಿದೆ.

## ಕೈಯಲ್ಲಿ ಆರದ ಆಂತರಿಕ ಕಲಹ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ

ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವ ಬದಲಾವಣೆ ಬಗ್ಗೆ ಆಂತರಿಕ ವಲಯದಲ್ಲಿ ಮಾತ್ರ ಹಗ್ಗಜಗ್ಗಾಟ ಸದ್ದಿಲ್ಲದೇ ನಡೆಯುತ್ತಿದೆ. ನಾಯಕರು ದಿನಕ್ಕೊಂದು ಡಿನ್ನರ್ ಮೀಟಿಂಗ್ ನಡೆಸುವ ಮೂಲಕ ತಮ್ಮ–ತಮ್ಮ ಬಣಗಳ ಶಕ್ತಿ ಪ್ರದರ್ಶನ ನಡೆಸುತ್ತಿದ್ದಾರೆ.

ಇತ್ತೀಚೆಗೆ ಡಿಸಿಎಂ ಡಿ.ಕೆ. ಶಿವಕುಮಾರ್ 40ಕ್ಕೂ ಹೆಚ್ಚು ಶಾಸಕರಿಗೆ ಔತಣ ಕೂಟ ನೀಡಿದ್ದರು. ಇದರ ಬೆನ್ನಲ್ಲೇ ಸಿದ್ದರಾಮಯ್ಯ ಅವರ ಆಪ್ತ ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಪಕ್ಷಾತೀತವಾಗಿ ದಲಿತ ಶಾಸಕರು, ಸಚಿವರು ಹಾಗೂ ಉದ್ಯಮಿಗಳ ಸಭೆ ನಡೆಸಿದ್ದು, ಈ ಬೆಳವಣಿಗೆ ರಾಜಕೀಯ ವಲಯದಲ್ಲಿ ತೀವ್ರ ಕುತೂಹಲ ಕೆರಳಿಸಿದೆ. ಬೆಳಗಾವಿ ನಗರದ ಖಾಸಗಿ ಹೋಟೆಲ್ನಲ್ಲಿ ಮಂಗಳವಾರ ರಾತ್ರಿ ಸತೀಶ್ ಜಾರಕಿಹೊಳಿಯವರು ಸಭೆ ನಡೆಸಿದ್ದು, ಈ ಸಭೆಯಲ್ಲಿ ದಲಿತ ಮುಖ್ಯಮಂತ್ರಿ ವಿಷಯ ಪ್ರಸ್ತಾಪವಾಗದಿದ್ದರೂ ದಲಿತ ರಾಜಕಾರಣಿಗಳು ಹಾಗೂ ಉದ್ಯಮಿಗಳ ಸಮಸ್ಯೆ ಆಲಿಸುವ ನೆಪದಲ್ಲಿ ದಲಿತ ಸಿಎಂ ಬೇಡಿಕೆಯನ್ನು ಮುನ್ನೆಲೆಗೆ ತಂದಿದ್ದಾರೆಂಬ ಮಾತುಗಳು ಕೇಳಿ ಬರುತ್ತಿದೆ. ಈ ಔತಣಕೂಟದಲ್ಲಿ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಎಚ್. ಮುನಿಯಪ್ಪ, ಅಬಕಾರಿ ಸಚಿವ ಆರ್.ಬಿ. ತಿಮ್ಮಾಪುರ್, ಟಿ. ರಘುಮೂರ್ತಿ, ಎ.ಆರ್. ಕೃಷ್ಣಮೂರ್ತಿ, ಸೇರಿದಂತೆ ಎಲ್ಲಾ ಪಕ್ಷಗಳ 33 ಶಾಸಕರು ಭಾಗವಹಿಸಿದ್ದರು.

## ಕೊರಳಿಗೆ ಒತ್ತುವರಿ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ/ಬೆಂಗಳೂರು

ಕಂದಾಯ ಸಚಿವರಿಂದ ಕೆರೆ ಸೇರಿದಂತೆ ಸರ್ಕಾರದ ಭೂಮಿ ಒತ್ತುವರಿಯಾಗಿದೆ ಎಂಬ ಆರೋಪ ಕುರಿತು ಸ್ಪಷ್ಟನೆ ನೀಡಬೇಕೆಂದು ಪ್ರತಿ ಪಕ್ಷಗಳು ವಿಧಾನಸಭೆಯಲ್ಲಿಂದು ಆಗ್ರಹಿಸಿದ್ದರಿಂದ ಸಣ್ಣ ಪ್ರಮಾಣದ ವಾಗ್ವಾದ ನಡೆಯಿತು.

ವಿರೋಧ ಪಕ್ಷದ ನಾಯಕ ಆರ್.ಅಶೋಕ್, ಕಂದಾಯ ಸಚಿವರಾಗಿರುವ ಕೃಷ್ಣಭೈರೇಗೌಡ ಅವರು ಕೆರೆಯನ್ನು ನುಂಗಿದ್ದಾರೆ. ಸರ್ಕಾರಿ ಆಸ್ತಿ ಒತ್ತುವರಿ ಮಾಡಿಕೊಂಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ. ಸದನ ನಡೆಯುವ ವೇಳೆ ತಪ್ಪು ಸಂದೇಶ ಹೋಗಬಾರದು. ಸಚಿವರು ಈಗಾಗಲೇ ಸದನದ ಹೊರಗೆ ಸ್ಪಷ್ಟನೆ ನೀಡಿದ್ದಾರೆ. ಸದನದಲ್ಲೂ ಹೇಳಿಕೆ ಕೊಟ್ಟು ಗೊಂದಲ ಬಗೆಹರಿಸಲಿ ಎಂದಿದ್ದಾರೆ. ಎದ್ದು ನಿಂತ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಸದನದಲ್ಲಿ ಯಾವುದೇ ಸದಸ್ಯರ ಬಗ್ಗೆ ಆರೋಪ ಮಾಡಬೇಕಾದರೆ ಒಂದು ವಾರಕ್ಕಿಂತ ಮೊದಲು ನೋಟಿಸ್ ನೀಡಬೇಕಿದೆ. ಈ ವಿಷಯದಲ್ಲಿ ನನ್ನ ಹಕ್ಕನ್ನು ಬಿಟ್ಟುಕೊಡುತ್ತೇನೆ. ವಾರಕ್ಕಿಂತ ಮೊದಲು ನೋಟೀಸ್ ಬೇಕು ಎಂದು ಒತ್ತಾಯಿಸುವುದಿಲ್ಲ. ನಾನು ಚರ್ಚೆಗೆ ಸಿದ್ಧನಿದ್ದೇನೆ, ವಿರೋಧ ಪಕ್ಷದವರು ಏನು ಬೇಕಾದರೂ ಹೇಳಲಿ, ನಾನು ಉತ್ತರ ಕೊಡುತ್ತೇನೆ ಎಂದಿದ್ದಾರೆ.

## ಅನ್ನದಲ್ಲಿ ಹುಳು..!

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

**ಬಳ್ಳಾರಿ ಗ್ರಾಮಾಂತರ ಹೊಸ ಯರಗುಡಿಯಲ್ಲಿ ಘಟನೆ**

ಬಳ್ಳಾರಿ ಗ್ರಾಮಾಂತರ ಕ್ಷೇತ್ರದಲ್ಲಿ ಹೊಸಯರಗುಡಿ ಗ್ರಾಮದ ಅಂಗನವಾಡಿ ಕೇಂದ್ರ 3 ರಲ್ಲಿ ಮಕ್ಕಳಿಗೆ ವಿತರಿಸುವ ಮಿಸ್ರಿತ ಫುಡ್ ಆಹಾರದಲ್ಲಿ ಹುಳುಗಳು ಪತ್ತೆಯಾಗಿವೆ. ಸ್ಥಳೀಯ ಸರ್ವಜನಿಕರು ಅಕ್ರೋಶ ವ್ಯಕ್ತಪಡಿಸಿದ್ದಾರೆ. ಅಂಗನವಾಡಿಯಲ್ಲಿ ಮಕ್ಕಳಿಗೆ ಮಿಶ್ರಿತ ಫುಡ್, ಗೋದಿ, ಅಕ್ಕಿಯನ್ನೇ ಮಕ್ಕಳಿಗೆ ಆಹಾರವಾಗಿ ನೀಡಲಾಗುತ್ತಿದೆ. ಈ ಆಹಾರ ಕಂಡ ಪೋಷಕರು ಆತಂಕಗೊಂಡಿದ್ದಾರೆ. ಈ ಘಟನೆ ಬಗ್ಗೆ ವಿಚಾರಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಅಂಗನವಾಡಿ ಕೇಂದ್ರದ ಕಾರ್ಯಕರ್ತೆಯನ್ನು ಸಸ್ಪೆಂಡ್ ಮಾಡಿದ್ದು, ಮೇಲ್ವಿಚಾರಕಿಯಾಗೆ ನೋಟಿಷಸ್ ಜಾರಿ ಮಾಡಿದ್ದಾರೆ ಎಂದು ಸಿ ಡಿ ಪಿ ಓ ಮೋಹನ್ ಕುಮಾರಿ ತಿಳಿಸಿದ್ದಾರೆ. ಕೇಂದ್ರದಲ್ಲಿ ಈ ಮಿಶ್ರಿತ ಫುಡ್ ಅನ್ನು ಹಳೆಯ ಸ್ಟಾಕ್ ಅನ್ನು ಇಟ್ಟುಕೊಂಡು ಮಕ್ಕಳಿಗೆ ವಿತರಿಸುವ ವ್ಯವಸ್ಥೆ ಮಾಡುತ್ತಿದ್ದಾರೆ ಎಂದು ತಿಳಿದುಬಂದಿದೆ.

**ಮಹಾತ್ಮ ಗಾಂಧಿ ಈ ದೇಶದ ಆಸ್ತಿ. ಅವರ ಹೆಸರನ್ನು ಬದಲಿಸಿದ ಬಿಜೆಪಿ ಅವರು ತಮ್ಮ ಅಸಲಿ ಮುಖ ತೋರಿದ್ದಾರೆ: ರಾಹುಲ್ ಗಾಂಧಿ**

# ನಿರಂಜನ ಸ್ವಾಮಿಜಿಯವರ ಜಾತ್ರೆಯಲ್ಲಿ ಅಹಿತಕರ ಘಟನೆ ನಡೆಯದಂತೆ ಆಚರಿಸಿ:ಆಶಾ ರಾಠೋಡ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ: ನಿರಂಜನ ಸ್ವಾಮಿಜಿಯವರ16ನೇ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ ಜಾತ್ರೆಯಲ್ಲಿ ಅಹಿತಕರ ಘಟನೆ ನಡೆಯದಂತೆ ಶಾಂತತೆ ಇಂದ ಆಚರಣೆ ಮಾಡಬೇಕೆಂದು ಕಮಲನಗರ ಪೊಲೀಸ ಠಾಣೆ ಪಿ.ಎಸ್.ಐ ಆಶಾ ರಾಠೋಡ ಹೇಳಿದರು.

ತಾಲೂಕಿನ ಸೋನಾಳ ಗ್ರಾಮದಲ್ಲಿ ಲಿಂ.ನಿರಂಜನ ಸ್ವಾಮಿಜಿಯವರ 16ನೇ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ ಕಾರ್ಯಕ್ರಮದ ನಿಮಿತ್ತ ಬುಧವಾರ ಸಂಜೆ ಹಮ್ಮಿಕೊಂಡಿದ್ದ ಶಾಂತಿ ಸಭೆಯಲ್ಲಿ ಅವರು ಮಾತನಾಡಿದರು.

ಪೂಜ್ಯ ನಿರಂಜನ ಸ್ವಾಮಿಜಿಯವರ ಅವರ ಹೆಸರಲ್ಲಿ ಪ್ರತಿ ವರ್ಷ ಬಹಳ ಒಳ್ಳೆಯ ಮತ್ತು ಆದ್ದೂರಿ ಜಾತ್ರೆಯಲ್ಲಿ ಸಾವಿರಾರು ಜನ ಸೇರುತ್ತಾರೆ. ಯಾರಿಗೂ ತೊಂದರೆ ಆಗದಂತೆ ಸಾರ್ವಜನಿಕ ಸಹಕರಿಸಬೆಂದು ನಿಮಗೆ ಸೂಕ್ತ ಪೊಲೀಸ್ ಬಂದು ಬಸ್ತ ವ್ಯವಸ್ಥೆ ಮಾಡಲಾಗುವುದು ಎಂದು ತಿಳಿಸಿದರು.

ಸೋನಾಳ ವಿರಕ್ತ ಮಠದ ಪೀಠಾಧಿಪತಿ ಚನ್ನವೀರಸ್ವಾಮಿ ಅಧ್ಯಕ್ಷತೆ ವಹಿಸಿ ಮಾತನಾಡಿರು. ಪೂಜ್ಯರು ಈ ಭಾಗದ ಪ್ರತಿ ಒಬ್ಬ ಭಕ್ತರ ಮನ ಮಾತಾಗಿದ್ದಾರೆ, ಎಲ್ಲರೂ ಒಗ್ಗೂಡಿ ಈ ವರ್ಷ ಡಿ.20 ಮತ್ತು 21 ರಂದು ನೆಡೆಯುವ ಲಿಂ. ನಿರಂಜನ ಸ್ವಾಮಿಜಿಯವರ 16ನೇ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ ಕಾರ್ಯಕ್ರಮ ಯಶಸ್ವಿ ಮಾಡುವನ ಎಂದು ಹೇಳಿದರು.

ಈ ಸಂದರ್ಭದಲ್ಲಿ ಗ್ರಾಮದ ಪ್ರಮುಖರು, ಪೊಲೀಸ್ ಸಿಬ್ಬಂದಿ ವರ್ಗದವರು, ಜಾತ್ರೆಸಮಿತಿ ಪದಾಧಿಕಾರಿಗಳು ಹಾಗೂ ಗ್ರಾಮಸ್ಥರು ಇದ್ದರು.

# ಟೋಕರಿ ಕೋಳಿ ಸಮಾಜದ ಸಭೆ :ಡಾ.ಶರಣಪ್ಪ ಅವರಿಗೆ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ:–ಜಿಲ್ಲಾ ಟೋಕರಿ–ಕೋಳಿ ಸಮಾಸ ಸಂಘ (ರಿ) ಬೀದರ್ ವತಿಯಿಂದ ಜಿಲ್ಲಾ ಅಧ್ಯಕ್ಷರಾದ ಜಗನ್ನಾಥ್ ಜಮಾದಾರ್ ಅವರ ಸಂಕೀರ್ಣ ಕಟ್ಟಡದಲ್ಲಿ ನಡೆದ ಜಿಲ್ಲಾ ಟೋಕರಿ ಕೋಳಿ ಸಮಾಜ ಸಭೆಯಲ್ಲಿ ಇತ್ತೀಚೆಗೆ ನಡೆದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ ಡಾ. ಕೆ. ಜಿ. ಶರಣಪ್ಪ ಗದ್ಲೆಗಾವ್ ಅವರಿಗೆ ಶಾಲು ಹೊದಿಸಿ ಸನ್ಮಾನಿಸಲಾಯಿತು . ಈ ಸಂದರ್ಭದಲ್ಲಿ ಜಿಲ್ಲಾ ಟೋಕರಿಕೋಳಿ ಸಮಾಜದ ಅಧ್ಯಕ್ಷರಾದ ಜಗನ್ನಾಥ ಜಮಾದಾರ. ಉಪಾಧ್ಯಕ್ಷರಾದ ಸುನಿಲ್ ಕಾಶಂಪುರ್. ಪ್ರಧಾನ ಕಾರ್ಯದರ್ಶಿಗಳಾದ ಮಾರುತಿ ಮಾಸ್ಟರ್. ಖಜಾಂಚಿ ಗಳಾದ ನಂದ್ ಕುಮಾರ್ ಜಂಬಗಿಕರ್. ಜಿಲ್ಲಾ ಸರ್ಕಾರಿ ನೌಕರರ ಸಂಘದ ಅಧ್ಯಕ್ಷರಾದ ರಾಜಕುಮಾರ್ ಕರ್ಣೆ. ಬಸವಕಲ್ಯಾಣ ತಾಲೂಕ ಮಹಿಳಾ ಅಧ್ಯಕ್ಷರಾದ ರೇಖಾ ರಾಜಕುಮಾರ್ ಹೊಸಮನಿ

ಮಾಜಿ ತಾ. ಪಂ. ಸದಸ್ಯರು ಹಾಗೂ ಸಮಾಜದ ಮುಖಂಡರಾದ ಬಿ ಸೋಮನಾಥ್ ರಾವ್ ಜಮಾದಾರ್. ಹುಮ್ನಾಬಾದ ತಾಲೂಕ ಅಧ್ಯಕ್ಷರಾದ ಬಾಬುರಾವ್ ವ ಳಖಂಡಿ. ನಿವೃತ್ತ ಪ್ರಾಚಾರ್ಯರಾದ ನರಸಪ್ಪ. ದಕ್ಷಿಣ ಕ್ಷೇತ್ರದ ಅಧ್ಯಕ್ಷರಾದ ಷಣ್ಮುಖ ಶೇಖರಪ್ಪ. ಮುಖಂಡರಾದ ಮಾಜಿ ನಗರಸಭೆ ಸದಸ್ಯರಾದ ರಾಜಕುಮಾರ ಹೊಸಮನಿ. ಮಾಜಿ ತಾಲೂಕ ಪಂಚಾಯತ್ ಸದಸ್ಯರಾದ ಗುರುನಾಥ್ ಮೈಲಾರೆ. ಚನ್ನವೀರ ಹರ್ಸುರ್ ಗದ್ಲೆಗಾವ್. ವಕೀಲರಾದ ಹೆಡಗಾಪು. ಸರ್ ತಾಲೂಕಿನ ಎಲ್ಲಾ ಅಧ್ಯಕ್ಷರುಗಳು ಹಾಗೂ ಎಲ್ಲಾ ತಾಲೂಕಿನ ಸಮಾಜದ ಮುಖಂಡರು ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಸುಸ್ಥಿರ ಜಾನುವಾರು ಉತ್ಪಾದನಾ ವ್ಯವಸ್ಥೆ,ಪ್ರಾಣಿಗಳ ಆರೋಗ್ಯ ನಿರ್ವಹಣೆಗೆ ಸಹಕಾರಿ: ಪಿ.ಟಿ.ರಮೇಶ್



ಮಲ್ಲಮ್ಮ ನುಡಿ ವಾರ್ತೆ ಬೀದರ: ಇತ್ತೀಚಿನ ನಾವೀನ್ಯತೆಗಳು, ಸುಸ್ಥಿರಜಾನುವಾರು ಉತ್ಪಾದನಾ ವ್ಯವಸ್ಥೆಗಳು, ಪ್ರಾಣಿಗಳ ಆರೋಗ್ಯ ನಿರ್ವಹಣೆ ಮತ್ತು ರೈತರಿಗೆ ಪ್ರಯೋಜನಕಾರಿಯಾದ ಹವಾಮಾನ–ಸ್ಥಿತಿಸ್ಥಾಪಕ ಅಭ್ಯಾಸಗಳ ಮೇಲೆ ಕೇಂದ್ರೀಕರಿಸಿದೆ ಎಂದು ಕರ್ನಾಟಕ ಪಶುವೈದ್ಯಕೀಯ, ಪಶು ಹಾಗು ಮೀನುಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯದ ಕುಲಸಚಿವ ಡಾ. ಪಿ. ಟಿ. ರಮೇಶ್ ಹೇಳಿದರು.

ಅವರು 2025–26 ಕೃಷಿ ಉತ್ತೇಜನ – ಕೃಷಿ ವಿಸ್ತರಣಾ ಯೋಜನೆಯಡಿಯಲ್ಲಿ ಕರ್ನಾಟಕ ಪಶುವೈದ್ಯಕೀಯ, ಪಶು ಹಾಗು ಮೀನುಗಾರಿಕೆ ವಿಜ್ಞಾನ ವಿಶ್ವವಿದ್ಯಾಲಯ, ಬೀದರನಲ್ಲಿ ಸಮೇತಿ (ಉತ್ತರ), ಕೃಷಿ ವಿಶ್ವವಿದ್ಯಾಲಯ, ಧಾರವಾಡನ ಸಹಯೋಗದೊಂದಿಗೆ ಡಿ. 16 ರಿಂದ 18 ವರೆಗೆ ಆಯೋಜಿಸಿದ "ಸುಸ್ಥಿರಜಾನುವಾರು ಉತ್ಪಾದನೆಗೆ ನವೀನ ಪದ್ಧತಿಗಳು" ಕುರಿತು ಮೂರು ದಿನಗಳ ತರಬೇತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಈ ತರಬೇತಿಯ ಮುಖಾಂತರ ಪ್ರಯೋಜನ ಪಡೆದ ಎಲ್ಲ ಶಿಬಿರಾರ್ಥಿಗಳು ರೈತಬಾಂಧವರ ಆದಾಯ ಹೆಚ್ಚಿಸುವಲ್ಲಿ ಶ್ರಮಿಸಬೇಕೆಂದು ಸಲಹೆ ನೀಡಿದರು. ಇಂತಹ ತರಬೇತಿಗಳ ಮುಖಾಂತರ ವಿಶ್ವವಿದ್ಯಾಲಯವು ಕ್ಷೇತ್ರಮಟ್ಟದ ಕಾರ್ಯಕರ್ತರಿಗೆ ನವೀನ ತಂತ್ರಜ್ಞಾನಗಳ ಪ್ರಸರಣದ ಕಡೆಗೆ ಗಮನಹರಿಸುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕ ದೇವಿಕಾ. ಆರ್. ಮಾತನಾಡಿ,

ತಮ್ಮ ಭಾಷಣದಲ್ಲಿ ಸುಸ್ಥಿರ ಜಾನುವಾರು ಮತ್ತು ಕೃಷಿ ಉತ್ಪಾದನೆಯು ರೈತರ ಆದಾಯ ಅಭಿವೃದ್ದಿಗೊಳಿಸುವಲ್ಲಿ ನಿರ್ಣಾಯಕ ಪಾತ್ರವಹಿಸುತ್ತದೆ. ರೈತಬಾಂಧವರು ಕೃಷಿ ಜೊತೆಗೆ ಪಶುಪಾಲನೆಯಂತಹ ಉಪಕಸುಬುಗಳನ್ನು ಅಳವಡಿಸಿಕೊಂಡು ಆರ್ಥಿಕವಾಗಿ ಸಧೃಢರಾಗಲು ಎಲ್ಲ ಅಧಿಕಾರಿಗಳು ಶ್ರಮಿಸಬೇಕೆಂದು ಸಲಹೆ ನೀಡಿದ ಅವರು ಕ್ಷೇತ್ರಮಟ್ಟದ ಅಧಿಕಾರಿಗಳ ಸಾಮರ್ಥ್ಯವೃದ್ಧಿಯಲ್ಲಿ ಕೃಷಿ ಮತ್ತು ಪಶುವೈದ್ಯಕೀಯ ವಿಶ್ವವಿದ್ಯಾಲಯಗಳ ಸಹಯೋಗದ ಪ್ರಯತ್ನಗಳು ಶ್ಲಾಘನಿಯವಾಗಿವೆ ಎಂದರು.

ಇನ್ನೋರ್ವ ಮುಖ್ಯ ಅತಿಥಿಗಳಾದ ಡಾ.ಬಸವರಾಜ ಅವಟಿ, ವಿಸ್ತರಣಾ ನಿರ್ದೇಶಕರು ರವರು ಮಾತನಾಡಿ ಈ ಕಾರ್ಯಕ್ರಮವು ಎಲ್ಲ ಅಧಿಕಾರಿಗಳಿಗೆ ವಿವಿಧ ರೀತಿಯ ವಿಚಾರ–ವಿನಿಮಯ ಹಾಗೂ ಸಂವಾದ ನಡೆಸಲು ಒಳ್ಳೆಯ ವೇದಿಕೆಯಾಗಿ ಕಾರ್ಯನಿರ್ವಹಿಸುವುದು. ಈ ಕಾರ್ಯಕ್ರಮವು ಅಧಿಕಾರಿ ವೃಂದದವರ ಮೂಲಕ ತಂತ್ರಜ್ಞಾನ ಹಾಗೂ ಸಲಹಾ ಸೇವೆಗಳನ್ನು ಪೋತ್ಸಾಹಿಸ್ತತ್ತದೆ ಎಂದರು.

ಸಮೇತಿ (ಉತ್ತರ), ಕೃಷಿ ವಿಶ್ವವಿದ್ಯಾಲಯ, ಧಾರವಾಡನ ಸಂಯೋಜಕರಾದ ಡಾ.ಎಸ್. ಎನ್.ಜಾಧವ್ ಪ್ರಾಸ್ತವಿಕವಾಗಿ ಮಾತನಾಡಿದರು. ಸಮೇತಿ (ಉತ್ತರ), ಕೃಷಿ ವಿಶ್ವವಿದ್ಯಾಲಯ, ಧಾರವಾಡನ ಉಪನಿರ್ದೇಶಕರಾದ ಶ್ರೀಮತಿ. ಗೀತಾ ಲೋಳಸುರಮಠ ರವರು ಸಮೇತಿ (ಉತ್ತರ)ವು ನಡೆದು ಬಂದ ದಾರಿ ಹಾಗೂ ಅದರ ಉದ್ದೇಶಗಳ ಬಗ್ಗೆ ವಿವರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪಶುವೈದ್ಯಕೀಯ ಮಹಾವಿದ್ಯಾಲಯದ ಡೀನ್ ಡಾ.ಎಮ್.ಕೆ ತಾಂದಳೆ ವಹಿಸಿದರು.

ಕಾರ್ಯಕ್ರಮದಲ್ಲಿ ಸಹಪ್ರಾಧ್ಯಾಪಕರಾದ ಡಾ. ಪ್ರಕಾಶಕುಮಾರ ರಾಠೋಡ, ಡಾ.ಚನ್ನಪ್ಪಗೌಡ ಬಿರಾದಾರ, ಸಹಾಯಕ ಪ್ರಾಧ್ಯಾಪಕರಾದ ಡಾ.ಆಕಾಶ, ಡಾ.ಕೊಟ್ರೇಶ, ಹಾಗೂ ಮಹಾವಿದ್ಯಾಲಯದ ಸಿಬ್ಬಂದಿಯವರು ಭಾಗವಹಿಸಿದ್ದರು.

# ವಿದ್ಯಾರ್ಥಿಗಳ ಜ್ಞಾನ ವೃದ್ಧಿಗೆ ಶೈಕ್ಷಣಿಕ ಪ್ರವಾಸ ಸಹಕಾರಿ: ಪ್ರೇಮಿಳಾ ರೆಡ್ಡಿ



ಮಲ್ಲಮ್ಮ ನುಡಿ ವಾರ್ತೆ ಚಿಟಗುಪ್ಪ: ವಿದ್ಯಾರ್ಥಿಗಳ ಜ್ಞಾನ ವೃದ್ಧಿಗೆ ಶೈಕ್ಷಣಿಕ ಪ್ರವಾಸ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಮುಖ್ಯ ಶಿಕ್ಷಕಿ ಪ್ರೇಮಿಳಾ ರೆಡ್ಡಿ ಹೇಳಿದರು. ಪಟ್ಟಣದ ಫಾತಿಮಾಪುರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಮಕ್ಕಳಿಗೆ ಒಂದು ದಿನದ ಪ್ರವಾಸಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಶೈಕ್ಷಣಿಕ ಪ್ರವಾಸಗಳು ಮಕ್ಕಳಲ್ಲಿ ಒಗ್ಗಟ್ಟು, ಸಹಬಾಳ್ವೆ, ಪರಸ್ಪರ ಸಹಕಾರ, ಹಂಚಿ ತಿನ್ನುವ ಮನೋಭಾವ, ಇತರರಿಗೆ ಗೌರವ ನೀಡುವುದು, ವಿವಿಧ ಸಂಸ್ಕೃತಿಗಳ ಮೆಚ್ಚುಗೆ ಹೀಗೆ ಹಲವು ಬಗೆಯ ಸೌಜನ್ಯಯುತ ನಡವಳಿಕೆಗಳನ್ನು ಮಕ್ಕಳು ಬೆಳೆಸಿಕೊಳ್ಳುವಲ್ಲಿ\ಸಹಕಾರಿಯಾಗಿದೆ. ಪಠ್ಯದಲ್ಲಿನ ಪರಿಕಲ್ಪನೆಗಳನ್ನು ಕೇಳಿ ತಿಳಿಯುವುದಕ್ಕಿಂತ ನೋಡಿ ತಿಳಿದಾಗ ಹೆಚ್ಚು ಸ್ಪಷ್ಟವಾಗಿ ನೆನಪಿನಲ್ಲಿ ಉಳಿಯುತ್ತದೆ ಎಂದರು. ಈ ಸಂದರ್ಭದಲ್ಲಿ ಎಸ್ಡಿಎಂಸಿ ಅಧ್ಯಕ್ಷ ದಿಲೀಪಕುಮಾರ್ ನರನಾಳ, ಲಲಿತಾಬಾಯಿ, ಅನ್ನಪೂರ್ಣಾ, ನಾಗೇಶ್ವರಿ, ಶೇಖರ್, ವೆಂಕಟ ಪೂಜಾರಿ, ರಮೇಶ್ ನಾಗರಾಳ, ಜಗದೀಶ ಗೋಣಗಿ ಸೇರಿದಂತೆ ವಿದ್ಯಾರ್ಥಿಗಳಿದ್ದರು.

# ವಿವಿಧ ಯೋಜನೆಗಳ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಲು ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ ಕಾರವಾರ, ಡಿ.18 (ಕರ್ನಾಟಕ ವಾರ್ತೆ):– ಪ್ರಸಕ್ತ ಸಾಲಿನಲ್ಲಿ ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಯೋಜನೆಗಳಾದ ಉದ್ಯೋಗಿನಿ, ಧನಶ್ರೀ ಯೋಜನೆ, ಲಿಗಂತ್ವ ಅಲ್ಪಸಂಖ್ಯಾತರ ಪುನರ್ವಸತಿ ಯೋಜನೆ ಹಾಗೂ ಚೇತನ ಯೋಜನೆಗಳಿಗೆ ಸೇವಾ ಸಿಂಧು ಪೋರ್ಟಲ್ನಲ್ಲಿ ಆನ್ಲೈನ್ ಅರ್ಜಿ ಆಹ್ವಾನಿಸಲಾಗಿದೆ

ಅರ್ಜಿ ಸಲ್ಲಿಸಲು ಬಯಸುವವರು ಹತ್ತಿರದ ಬಾಪೂಜಿ ಸೇವಾ ಕೇಂದ್ರ, ಗ್ರಾಮ್ ಒನ್, ಬೆಂಗಳೂರು ಒನ್, ಕರ್ನಾಟಕ ಒನ್ ಕೇಂದ್ರಗಳಲ್ಲಿ ಸೇವಾ ಸಿಂಧು ಪೋರ್ಟಲ್ನಲ್ಲಿ ಅರ್ಜಿ ಸಲ್ಲಿಸಲು ಜನವರಿ 15 ರ ವರೆಗೆ ಅವಧಿ ವಿಸ್ತರಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಕಾರವಾರ, ಜಿಲ್ಲಾ ಅಭಿವೃದ್ಧಿ ನಿರೀಕ್ಷಕರು, ಕರ್ನಾಟಕ ರಾಜ್ಯ ಅಭಿವೃದ್ಧಿ ನಿಗಮ ಕಚೇರಿ ಹಾಗೂ ಆಯಾ ತಾಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳನ್ನು –ಸಂಪರ್ಕಿಸುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಲಿಂ.ನಿರಂಜನ ಸ್ವಾಮೀಜಿಯವರ 16ನೇ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ



ಮಲ್ಲಮ್ಮ ನುಡಿ ವಾರ್ತೆ ಕಮಲನಗರ: ತಾಲೂಕಿನ ಸೋನಾಳ ಗ್ರಾಮದ ಪವಾಡ ಪುರುಷ, ನಡೆದಾಡುವ ದೇವರು, ಗಿಡ ಮೂಲಿಕೆ ಮೂಲಕ ಅನೇಕ ರೋಗ ಕಡಿಮೆ ಮಾಡಿದ ಆಯುರ್ವೇದ ತಜ್ಞ ಎಂದೇ ಪ್ರಖ್ಯಾತಿ ಗಳಿಸಿರುವ ಲಿಂ.ನಿರಂಜನ ಸ್ವಾಮೀಜಿಯವರ 16ನೇ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವ ಕಾರ್ಯಕ್ರಮದ ಡಿ. 20 ಮತ್ತು 21 ರಂದು ನೆಡೆಯಲಿದೆ ಎಂದು ಸೋನಾಳ ಮಠದ ಪೀಠಧಿಪತಿ ಶ್ರೀ ಮ.ನಿ.ಪ್ರಚನ್ನವೀರಮಹಾಸ್ವಾಮಿಗಳು ಹೇಳಿದರು. ಸೋನಾಳ ಮಠದಲ್ಲಿ ಗುರುವಾರ ಕರೆದ ಪತ್ರಿಕಾ ಗೋಷ್ಠಿ ಉದ್ದೇಶಿ ಮಾತನಾಡಿದರು,

ಪ್ರತಿ ವರ್ಷದಂತೆ ಈ ವರ್ಷ ಲಿಂ.ನಿರಂಜನ ಸ್ವಾಮೀಜಿಯವರ ಪುಣ್ಯ ಸ್ಮರಣೋತ್ಸವ ಕಾರ್ಯಕ್ರಮವನ್ನು ಮಠದ ಸರ್ವ ಭಕ್ತರ ಒಪ್ಪಿಗೆ ಮೇರೆಗೆ ಅದ್ದೂರಿಯಾಗಿ ಮಾಡಲಾಗುತ್ತದೆ.

ಈ ಸದರಿ ಕಾರ್ಯಕ್ರಮ ನಿಮಿತ್ಯ ದಿನಾಂಕ:11/12/25 ರಿಂದ 20/12/25 ವರೆಗೆ ವೀರ ವಿರಾಗಿಣಿ ಅಕ್ಕ ಮಹಾದೇವಿ ಪುರಾಣ ಪ್ರವಚನವನ್ನು ಶ್ರೀ ಶಿವಲಿಂಗ ಶಾಸ್ತ್ರೀಗಳು ನಡೆಸಿ ಕೊಡುತ್ತಿದ್ದಾರೆ.

ದಿನಾಂಕ:20/12/25 ರಂದು ಬೆಳಗ್ಗೆ ಸಾಮೋಹಿಕ ಇಷ್ಟಲಿಂಗ ದೀಕ್ಷೆ, ಮದ್ಯಾಹ್ನ 3 ಗಂಟೆಗೆ ಲಿಂ.ನಿರಂಜನಸ್ವಾಮೀಜಿಯವರ ಭಾವಚಿತ್ರ ಮೆರವಣಿಗೆ, ಸಾಯಂಕಾಲ, 7 ಗಂಟೆಗೆ ಪ್ರವಚನ ಮಹಾಮಂಗಲ ನೆರವೇರುವುದು. ದಿನಾಂಕ:21/12/25 ರಂದು ಲಿಂ.ನಿರಂಜನ ಸ್ವಾಮೀಜಿಯವರ 16ನೇ ಪುಣ್ಯ ಸ್ಮರಣೋತ್ಸವ ಹಾಗೂ ಸಂಜೆ 4 ಗಂ–ಟೆಗೆ ಭವ್ಯ ರಥೋತ್ಸವ ನಡೆಯಲಿದೆ. ಹಾಗಾಗಿ ಸೋನಾಳ ಮತ್ತು ಸುತ್ತ ಮುತ್ತಲಿನ ಸದ್ದ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಬಂದು ಕಾರ್ಯಕ್ರಮ ಯಶಸ್ವಿಗೊಳಿಸಬೇಕು ಎಂದು ಹೇಳಿದರು.

# ಗ್ರಾಮಂತರ ಪ್ರದೇಶದ ವಿದ್ಯಾರ್ಥಿಗಳಿಗೆ ಬಸ್‌ನ ಸೌಲಭ್ಯ ಒದಗಿಸಿ ಎಬಿವಿಪಿ ಆಗ್ರಹ



ಮಲ್ಲಮ್ಮ ನುಡಿ ವಾರ್ತೆ ಬೀದರ್ ಡಿ 18:–ಪ್ರಸ್ತುತ ವಿವಿಧ ಗ್ರಾಮಗಳಿಗೆ ಸಾರಿಗೆ ವ್ಯವಸ್ಥೆ ಇಲ್ಲದ ಕಾರಣ ವಿದ್ಯಾರ್ಥಿಗಳು ಶಾಲಾ ಕಾಲೇಜುಗಳಿಗೆ ದಿನಾಲೂ ಬರಲು ತೊಂದರೆ ಅನುಭವಿಸುವಂತಾಗಿದೆ.

ಸರಿಯಾದ ಸಮಯಕ್ಕೆ ಹಾಗೂ ಕೆಲ ಗ್ರಾಮಗಳಿಗೆ ಸಾರಿಗೆ ವ್ಯವಸ್ಥೆ ಇಲ್ಲದ ಕಾರಣ ಮಕ್ಕಳ ವಿದ್ಯಾಭ್ಯಾಸದ ಮೇಲೆ ವ್ಯತಿರಿಕ್ತ ಪರಿಣಾಮ ಬಿರುತ್ತದೆ.

ಅದರಿಂದ ತಾವುಗಳು ನಮ್ಮ ಈ ಮನವಿಯನ್ನು ಆಲಿಸಿ ಸಂಬಂಧಪಟ್ಟ ಅಧಿಕಾರಿಗಳಿಗೆ ನಿರ್ದೇಶನಗಳನ್ನು ನೀಡಿ ಕೆಳಗೆ ನಮೂದಿಸಿರುವ ಗ್ರಾಮಗಳಿಗೆ ಹಾಗೂ ಸಮಯಕ್ಕೆ ಸಾರಿಗೆ ವ್ಯವಸ್ಥೆ ಕಲ್ಪಿಸಬೇಕಾಗಿ ಕೆ–ಕೆಆರ್ ಟಿಸಿ ವ್ಯವಸ್ಥಾಪಕರಿಗೆ ಮನವಿಪತ್ರ ವಿತರಿಸಿದರು, ಒಂದು ವಾದಲ್ಲಿ ಈಡೇರಿಸದಿದ್ದರೆ ಮುಂದಿನ ದಿನಗಳಲ್ಲಿ ಬಹೃತ ಹೋರಾಟ ಮಾಡಲಾಗುವುದು ಎಂದು ಅಖಿಲ ಭಾರತಿಯ ವಿದ್ಯಾರ್ಥಿ ಪರಿಷತ್ ಬೀದರ ಮುನ್ನೆಚ್ಚರಿಕೆ ನೀಡುತ್ತದೆ.

ಅನೇಕ ವಿದ್ಯಾರ್ಥಿಗಳ ಬೇಡಿಕೆಗಳು ಇದ್ದು ಬಸ್ಸಿನ ಸಂಖ್ಯೆ ಹೆಚ್ಚಳ ಮಾಡಿ.ಬೀದರ ದಿಂದ ಹುಮನಾಬಾದ ಹೊರಡುವ ಪ್ರತಿಯೊಂದು ತಡೆ ಸಹಿತ ಬಸ್ಸ್‌ಗಳು ಕೋಳಾರ (ಕೆ) ಗ್ರಾಮದ ಮೇಲೆ ನಿಲಬೇಕು ಹಾಗೂ ವಿದ್ಯಾರ್ಥಿಗಳ ಬಸ್ ಪಾಸ ನಡೆಸಿಕೊಳ್ಳಬೇಕು, ನೌಬಾದ ಮಾರ್ಗವಾಗಿ ಹೋಗುವ ಬರುವ ಎಲ್ಲಾ ಬಸ್ಗಳು ಪ್ರಥಮ ದರ್ಜೆ ಕಾಲೇಜಿನ ಎದುರುಗಡೆ ನೀಲಬೇಕು. ನಿಜಾಂಪೂರ ಗ್ರಾಮಕ್ಕೆ ಹೊಸ ಬಸ್ಸಿನ ವ್ಯವಸ್ಥೆ ಮಾಡಬೇಕು

ಔರಾದ ಸಿರ್ಸಿ (ಎ) ಗ್ರಾಮಕ್ಕೆ ಹೊಸ ಬಸ್ಸಿನ ವ್ಯವಸ್ಥೆ ಮಾಡಬೇಕು, ಹುಮನಾಬಾದ ಮತ್ತು ಮನ್ನಾನಿಖೇಳ್ಳಿ ಹೋಗುವ ಬಸ್ಸಿನ ಸಂಖ್ಯೆ ಹೆಚ್ಚಳ ಮಾಡಿ ಅದೇ ರೀತಿ ಚಿಲ್ಲರ್ಗಿ ಬಸ್ಸಿನ ಸಮಸ್ಯೆ, ಮರಕಲ್ ಬಸ್ಸಿನ ಸಮಸ್ಯೆ ಸರಿಪಡಿಸಬೇಕು, ಬೀದರ ಗ್ರಾಮಂತರ ಬಸ್ಸಿನ ಸಂಖ್ಯೆ ಹೆಚ್ಚಳ ಮಾಡಬೇಕು ಎಂದು ಸದಾನಂದ ಮೇತ್ರೆ ಎಬಿವಿಪಿ ನಗರ ಕಾರ್ಯದರ್ಶಿ ಆಗ್ರಹಿಸಿದ್ದಾರೆ,

# ಹಣಮಂತವಾಡಿ(ಆರ್) ವಿಶೇಷ ಮಕ್ಕಳ ಹಕ್ಕುಗಳ ಗ್ರಾಮ ಸಭೆ.




ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ: ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ ಅವರ ಹಕ್ಕುಗಳು ಅವರಿಗೆ ಸಿಗುವಂತೆ ಮಾಡುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಪಂಚಾಯತ್ ಅಭಿವೃದ್ಧಿ ಅಧಿಕಾರಿ ಪ್ರಶಾಂತರೆಡ್ಡಿ ಮಾಲಿಪಾಟೀಲ್ ಹೇಳಿದರು.

ತಾಲ್ಲೂಕಿನ ಹಣಮಂತವಾಡಿ(ಆರ್) ಗ್ರಾಮದ ಸರಕಾರಿ ಶಾಲೆಯಲ್ಲಿ ಮಕ್ಕಳ ಹಕ್ಕುಗಳ ವಿಶೇಷ ಗ್ರಾಮ ಸಭೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿ ಮಕ್ಕಳ ಹಕ್ಕುಗಳಿಂದ ವಂಚಿತರಾಗ ಬಾರದು ಮತ್ತು ಅವರ ಸಮಸ್ಯೆಗಳನ್ನು ಮುಕ್ತವಾಗಿ ಹಂಚಿಕೊಳ್ಳುವ ಮೂಲಕ ಅವರ ಸಮಸ್ಯೆಗಳಿಗೆ

ಸ್ಪಂದಿಸುವ ಉದ್ದೇಶ ದಿಂದ ವಿಶೇಷ ಗ್ರಾಮ ಸಭೆ ನಡೆಸಲಾಗುತ್ತಿದೆ. ಆದ್ದರಿಂದ ಮಕ್ಕಳು ನಿಮ್ಮ ಸಮಸ್ಯೆಗಳನ್ನು ನಮ್ಮ ಗಮನಕ್ಕೆ ತಂದರೆ ಸಾಕು ಬಗೆ ಹರಿಸಿಕೊಡಲಾಗುವುದು ಎಂದರು. ಆರ್.ಎಲ್.ಎಚ್.ಪಿ.ಸಂಯೋಜಕ ನಾಗರಾಜ

ಶೀಲವಂತ ಅವರು ವಿಶೇಷ ಉಪನ್ಯಾಸ ನೀಡಿದ ಮಕ್ಕಳ ಹಕ್ಕುಗಳ ಜವಬ್ದಾರಿ ಮತ್ತು ಮಹತ್ವದ ಬಗ್ಗೆ ತಿಳಿಸಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯಗುರು ಹಾಗೂ ಗ್ರಾ.ಪಂ.ಸದಸ್ಯರು, ಗ್ರಾಮ ಪಂಚಾಯತ್ ಕಾರ್ಯದರ್ಶಿಗಳಾದ ರಂಜೀತ, ಬಿ. ಸಿ. ಜಗನ್ನಾಥ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಮರೆಯಾದ ಮಾಣಿಕ್ಯ - ಮಾಣಿಕಪ್ಪ ಗಾದ

ಮಣ್ಣಿನೊಳಗೆ ಮರೆಯಾದರೂ
ಮೌಲ್ಯ ಕಳೆದುಕೊಳ್ಳದ ಮಾಣಿಕ್ಯ ನೀವು,
ಹಳ್ಳಿ-ಹಳ್ಳಿಗೆ ಬೆಳಕು ಹಂಚಿದ
ಶಿಕ್ಷಣದ ದೀಪವ ಮಾಣಿಕಪ್ಪ ಗಾದ ನೀವು.

ಪಾಠ ಶಾಲೆಯ ಬಾಗಿಲು ತೆರೆಯಲು
ನಿಮ್ಮ ಹೃದಯವೇ ಕೀಲಿ ಆಯಿತು ಅಂದು
ಅಕ್ಷರವೇ ಆಯುಧವೆಂದು ನಂಬಿ ಹೆಜ್ಜೆ ಇಟ್ಟು
ಅಜ್ಞಾನಕ್ಕೆ ಸವಾಲು ಹಾಕಿದೆ ಶಿಕ್ಷಣ ಪ್ರೇಮಿ ತಾವು.

ದುಡ್ಡು ಆಸ್ತಿಯ ಹಿಂದೆ ಬೀಳದೆ ನಿಸ್ವಾರ್ಥಿ ನೀವು
ಜ್ಞಾನವೇ ಸತ್ಯವೆಂದು ಸಾರಿದೆ ಶತಾಯುಶಿಗಳು
ಬಡ ಮಕ್ಕಳ ಕಣ್ಣುಗಳಲ್ಲಿ ಭವಿಷ್ಯ ಕಟ್ಟಿದವರು
ಅವರ ಏಳಿಗೆಗಾಗಿ ಸದಾ ಸಹಯದ ಹಸ್ತ ಚಾಚಿದವರು

ಇಂದು ನಿಮ್ಮ ಹೆಸರಿಲ್ಲದ ಫಲಕಗಳು ಇಲ್ಲ,
ನಿಮ್ಮ ಮಾತಿಲ್ಲದ ನುಡಿಗಳು ಮರೆಯುವದಿಲ್ಲ
ನೀವು ಬಿತ್ತಿದ ಅಕ್ಷರ ಬೀಜಗಳು ನಾವೆಲ್ಲ
ಸಮಾಜದಲ್ಲ ಉಚ್ಚ ಸ್ಥಾನಕ್ಕೆ ಮೊಳೆತು ನಿಂತೇವಲ್ಲ

ಮರೆಯಾದರು ಜೀವಂತ ಶಿಲ್ಪಕಲೆಯ ಮಾಯವು,
ಇತಿಹಾಸದ ಮೌನ ಪುಟದಲ್ಲಿ ಹೊಳಪು ತಾವು,
ಸಾವಿರಾರು ಶಿಕ್ಷಕರ ಬಾಳು ಬೆಳಗಿದ ಜ್ಯೋತಿ ತಾವು
ಮರೆತರು ಮರೆಯದ ನಿಮ್ಮ ಪ್ರೀತಿಯ ಗುರುತು.

ನಮನಗಳು ಓ ಮಾಣಿಕಪ್ಪ ಗಾದ ಸರ್ ನಿಮಗೆ
ಶಿಕ್ಷಣದ ಶಾಶ್ವತ ಸೇವಕನಿಗೆ, ಸಾಧಕರಿಗೆ
ಮರೆಯಾದ ಮಾಣಿಕ್ಯವಾಗಿ ಹೊಂದಿರೇನು
ಯುಗಯುಗಾಂತರಕ್ಕೂ ಪ್ರಕಾಶಮಾನ ತಾರೆ ನೀವು.



ಸುನಿತಾ. ಎಸ್. ಪಾಟೀಲ
ಕಂದಗೂಳ, ಸಾಹಿತಿಗಳು ಹುಮ್ನಾಬಾದ

# ನಿರಾಶ್ರಿತರಿಗೆ ಆಶ್ರಯ: ಡೇ ನಲ್ಮ್ ಯೋಜನೆಯಡಿ ಕಲಬುರಗಿ ನಗರದಲ್ಲಿ 4 ಕೇಂದ್ರ ಕಾರ್ಯನಿರ್ವಹಣೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:

ನಿರಾಶ್ರಿತರಿಗೆ ಸೂರು ಕಲ್ಪಿಸುವ ನಿಟ್ಟಿನಲ್ಲಿ ರಾಷ್ಟ್ರೀಯ ನಗರ ಜೀವನೋಪಾಯ ಅಭಿಯಾನ (ಡೇ-ನಲ್ಮ್) ಅಭಿಯಾನದಡಿ ಕಲಬುರಗಿ ಮಹಾನಗರ ಪಾಲಿಕೆಯಿಂದ ನಗರದಲ್ಲಿ ಮೂರು ಪುರುಷ ಮತ್ತು ಒಂದು ಮಹಿಳೆ ಸೇರಿದಂತೆ 4 ನಿರಾಶ್ರಿತರ ಆಶ್ರಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಇಲ್ಲಿ ನಿರಾಶ್ರಿತರಿಗೆ ಸಕಲ ಮೂಲಸೌಕರ್ಯ ಒದಗಿಸಲಾಗುತ್ತಿದೆ.

ಮನೆ ಇಲ್ಲದೆ ಬೀದಿ ಬದಿಯಲ್ಲಿ, ಬಸ್ ನಿಲ್ದಾಣ, ರೈಲು ನಿಲ್ದಾಣದಲ್ಲಿ ವಾಸಿಸುವ ಇವರಿಗೆ ರಾತ್ರಿ ಸಮಯದಲ್ಲಿ ಸೂಕ್ತ ವಸತಿ ಸೌಲಭ್ಯ ಕಲ್ಪಿಸಲು ಕಲಬುರಗಿ ಮಹಾನಗಾರ ಪಾಲಿಕೆ ವಿವಿಧ ಸಂಸಘ-ಸಂಸ್ಥೆಗಳ ಸಹಯೋಗದೊಂದಿಗೆ ನಿರಾಶ್ರಿತರ ಆಶ್ರಯ ಕೇಂದ್ರ ತೆರೆಯಲಾಗಿದೆ.

ಈ ನಿರಾಶ್ರಿತರ ಆಶ್ರಯ ಕೇಂದ್ರದಲ್ಲಿ ಮಲಗಲು ಮೆತ್ತನೆ ಹಾಸಿಗೆ-ಹೊದಿಕೆ, ತಲೆದಿಂಬು, ಮಂಚದ ಸೌಲಭ್ಯ ಉಂಟು. ಕುಡಿಯುವ ನೀರು, ಶೌಚಾಲಯದ ವ್ಯವಸ್ಥೆ ಇದೆ. ಸ್ನಾನದ ಕೋಣೆಗಳ ಜೊತೆಗೆ ಸ್ನಾನಕ್ಕಾಗಿ ಬಿಸಿ ನೀರಿನ ವ್ಯವಸ್ಥೆ, ಸಾಬೂನು, ಕೊಬ್ಬರಿ ಎಣ್ಣೆ, ಕೋಲಗೇಟ್ ನೀಡಲಾಗುತ್ತದೆ. ಮನೋರಂಜನೆ ಟಿ.ವಿ. ಸೌಲಭ್ಯ ಸಹ ಇಲ್ಲಿದೆ. ಓದಲು ದಿನಪತ್ರಿಕೆಗಳು ಇರಲಿವೆ. ನಿರಾಶ್ರಿತರಿಗೆ ಆಪ್ತ ಸಮಾಲೋಚನೆ, ಉಚಿತ ಆರೋಗ್ಯ ತಪಾಸಣೆ, ಪ್ರಾಥಮಿಕ ಆರೋಗ್ಯ ಚಿಕಿತ್ಸೆ ಸಹ ಇಲ್ಲಿ ನೀಡಲಾಗುತ್ತಿದ್ದು, ಅವಶ್ಯಕವಿದ್ದವರಿಗೆ ದಾನಿಗಳು



ನೀಡಿರುವ ರಾತ್ರಿ ಊಟ ಸಹ ಪೂರೈಸಲಾಗುತ್ತದೆ.

ಡಿ.ಸಿ. ಸೂಚನೆ ಹಿನ್ನೆಲೆ, ಕೇಂದ್ರಕ್ಕೆ ನಿರಾಶ್ರಿತರು ಶಿಫ್ಟ್: ಕಳೆದ ಒಂದು ವಾರದಿಂದ ಜಿಲ್ಲೆಯಾದ್ಯಂತ ಕೊರೆಯುವ ಚಳಿ ಹೆಚ್ಚಾಗಿರುವುದರಿಂದ ವಸತಿ ರಹಿತ ನಿರಾಶ್ರಿತರಿಗೆ ವಸತಿ ಕಲ್ಪಿಸುವ ನಿಟ್ಟಿನಲ್ಲಿ ರೈಲು ನಿಲ್ದಾಣ, ಬಸ್ ನಿಲ್ದಾಣ, ಪ್ರಮುಖ ವೃತ್ತದಲ್ಲಿ ರಾತ್ರಿ ವಾಸಿಸುವ ನಿರಾಶ್ರಿತರನ್ನು ಆಶ್ರಯ ಕೇಂದ್ರಕ್ಕೆ ಸ್ಥಳಾಂತರಿಸಬೇಕೆಂದು ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮತ್ತು ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ ಅವರ ಸೂಚನೆ ಹಿನ್ನೆಲೆಯಲ್ಲಿ ಪಾಲಿಕೆಯ ಡೇ-ನಲ್ಮ್ ಸಿಬ್ಬಂದಿಗಳು ರಾತ್ರಿ 12 ಗಂಟೆ ವರೆಗೂ ನಗರ ಸುತ್ತಾಡಿ ನಿರಾಶ್ರಿತರನ್ನು ಆಶ್ರಯ ಕೇಂದ್ರಕ್ಕೆ ಸ್ಥಳಾಂತರ ಮಾಡುತ್ತಿದ್ದಾರೆ. ಪ್ರಸ್ತುತ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ 4 ಕೇಂದ್ರದಲ್ಲಿ ಸುಮಾರು 200 ಜನ ನಿರಾಶ್ರಿತರಿಗೆ ಇರಲು ಅವಕಾಶ ಕಲ್ಪಿಸಲಾಗಿದೆ. ಇನ್ನು ಈ ಕುರಿತು ನಿರಾಶ್ರಿತರ ಗಮ ಸೆಳೆಯಲು ಪ್ರಮುಖ ವೃತ್ತಗಳಲ್ಲಿ ಫ್ಲೆಕ್ಸ್, ಬ್ಯಾನರ್ ಅಳವಡಿಸಿ ಜಾಗೃತಿ ಮೂಡಿಸಲಾಗುತ್ತಿದೆ.

ಎಲ್ಲೆಲ್ಲಿ ನಿರಾಶ್ರಿತ ಆಶ್ರಯ ಕೇಂದ್ರಗಳು?: ಕಲಬುರಗಿ ನಗರದ ಜಗತ್ ಪ್ರದೇಶದ ಬಿಗ್ ಬಜಾರ ರಸ್ತೆ ಹಿಂದಿ ಪ್ರಚಾರ ಸಭಾ ಹಿಂದುಗಡೆ ಭಾಗ್ಯ ಸಂಸ್ಥೆಯ ಸಂಚಾಲಿತ ಕೇಂದ್ರ (ಪುರುಷ) ಮತ್ತು (ಮಹಿಳೆ)-9632035607, ರೋಜಾ(ಬಿ) ಪ್ರದೇಶದ ಭೋಟಿ ದೇವಡಿ (ದರ್ಗಾ ಹತ್ತಿರ) ಸಹರಾ ಸಂಸ್ಥೆ ಸಂಚಾಲಿತ ಕೇಂದ್ರ (ಪುರುಷ)-9844067193 ಹಾಗೂ ನೆಹರು ಗಂಜ್ ಪ್ರದೇಶದ ನಗರೇಶ್ವರ ಶಾಲೆ ಹತ್ತಿರ ಮಾರ್ಗದರ್ಶಿ ಸಂಸ್ಥೆ ಸಂಚಾಲಿತ ನಿರಾಶ್ರಿತರ ಆಶ್ರಯ ಕೇಂದ್ರ (ಪುರುಷ)-9449310489 & 7975748766.

ಹೆಚ್ಚಿನ ಮಾಹಿತಿಗೆ ನಾಗಮ್ಮ ಸಿ. ಬೆನಕನಳ್ಳಿ -91100445489, ಮಾಣಿಕ ಅ. ಬಾಳುವಾಲೆ-9886409292 ಹಾಗೂ ಶಕೀಲ ಅ. ಗುನ್ನಾಪೂರ- 9632230692 ಅವರನ್ನು ಸಂಪರ್ಕಿಸಬಹುದಾಗಿದೆ

# ತಾಂತ್ರಿಕ ಸಮಸ್ಯೆ ಬಗೆಹರಿಸಿಕೊಳ್ಳಲು ರೈತರಲ್ಲಿ ಡಿ.ಸಿ. ಮನವಿ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಪ್ರಸಕ್ತ 2025-26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅತಿವೃಷ್ಠಿ ಹಾನಿಯಿಂದ ಹಾಳಾದ ಬೆಳೆಗಳಿಗೆ ರಾಜ್ಯ ಸರ್ಕಾರ ಪರಿಹಾರ ಹಣ ಘೋಷಿಸಿದ್ದು, ವಿವಿಧ ತಾಂತ್ರಿಕ ಕಾರಣದಿಂದ ಪರಿಹಾರ ಹಣ ಪಾವತಿ ವಿಫಲಗೊಂಡಿದ ಪ್ರಕರಣಗಳಲ್ಲಿ ಸಂಬಂಧಪಟ್ಟ ರೈತರು ರೈತ ಸಂಪರ್ಕ ಕೇಂದ್ರ ಮತ್ತು ಬ್ಯಾಂಕ್‌ಗಳಿಗೆ ಭೇಟಿ ನೀಡಿ ತಾಂತ್ರಿಕ ಸಮಸ್ಯೆ ಬಗೆಹರಿಸಿಕೊಳ್ಳುವಂತೆ ಡಿ.ಸಿ. ಬಿ.ಫೌಜಿಯಾ ತರನ್ನುಮ್ ಮನವಿ ಮಾಡಿದ್ದಾರೆ.

ಜಿಲ್ಲೆಯಾದ್ಯಂತ ವಿವಿಧ ಕಾರಣಗಳಿಂದ 12,313 ಪ್ರಕರಣದಲ್ಲಿ ಪರಿಹಾರ ಹಣ ಪಾವತಿ ವೈಫಲ್ಯವಾಗಿದ್ದು, ಇಂತಹ ರೈತರ ಪಟ್ಟಿಯನ್ನು ಸಂಬಂಧಪಟ್ಟ ಗ್ರಾಮಗಳ ಕೃಷಿ ಅಧಿಕಾರಿ, ಸಹಾಯಕ ಕೃಷಿ ಅಧಿಕಾರಿಗಳು ಮತ್ತು ಗ್ರಾಮ ಲೆಕ್ಕಾಧಿಕಾರಿಗಳು ಮತ್ತು ಗ್ರಾಮ ಪಂಚಾಯತಿ ಕಚೇರಿಗಳ ಸೂಚನಾ ಫಲಕಗಳಲ್ಲಿ ಪಟ್ಟಿ ಪ್ರಕಟಿಸಿದ್ದ ಪರಿಣಾಮ ಇದೂವರೆಗೆ 3,860 ರೈತರು ಸಮಸ್ಯೆ ಸರಿಪಡಿಸಿಕೊಂಡಿದ್ದು,

ಇನ್ನುಳಿದಂತೆ 8,464 ರೈತರು ಸಮಸ್ಯೆ ಸರಿಪಡಿಸಿಕೊಂಡಿರುದಿಲ್ಲ.

ಫ್ರೂಟ್ಸ್ ತಂತ್ರಾಂಶ ಹಾಗೂ ಆಧಾರ್‌ನಲ್ಲಿ ಹೆಸರು ಹೊಂದಾಣಿಕೆಯಲ್ಲಿ ಸಮಸ್ಯೆಯಿಂದ 1,549 ರೈತರಿಗೆ ಪರಿಹಾರ ಹಣ ಪಡೆಯಲು ಸಾಧ್ಯವಾಗಿಲ್ಲ. ಇಂತಹ ರೈತರು ಕೂಡಲೇ ಸಂಬಂಧಪಟ್ಟ ರೈತಸಂಪರ್ಕ ಕೇಂದ್ರಗಳಿಗೆ ಭೇಟಿ ನೀಡಿ ಸಮಸ್ಯೆ ಬಗೆಹರಿಸಿಕೊಳ್ಳಬೇಕು. ಅದೇ ರೀತಿ 10,544 ಪ್ರಕರಣಗಳಲ್ಲಿ ಆಧಾರ್-ಎನ್.ಪಿ.ಸಿ.ಐ ಮ್ಯಾಪಿಂಗ್ ಆಗದ ಕಾರಣ ಪರಿಹಾರ ಪಾವತಿ ಹಣ ಖಾತೆಗೆ ಜಮೆಯಾಗಿರುವುದಿಲ್ಲ. ಇಂತಹ ರೈತರು ಬ್ಯಾಂಕ್‌ಗೆ ಭೇಟಿ ನೀಡಬೇಕು ಎಂದು ಡಿ.ಸಿ. ತಿಳಿಸಿದ್ದಾರೆ.

ಇದಲ್ಲದೆ ಕೆ.ವೈ.ಸಿ. ಪೆಂಡಿಂಗ್, ನಿಷ್ಕ್ರೀಯ ಬ್ಯಾಂಕ್ ಖಾತೆ, ಖಾತೆ ರದ್ದು, ನಿಖರವಲ್ಲದ ಬ್ಯಾಂಕ್ ಖಾತೆ, ನಿಷ್ಕ್ರೀಯ ಆಧಾರ್ ಸಂಖ್ಯೆ ಜೋಡಣೆದಂತಹ ಅನೇಕ ತಾಂತ್ರಿಕ ಸಮಸ್ಯೆಗಳ ಕಾರಣದಿಂದ ಪರಿಹಾರ ಹಣ ಪಡೆಯಲು ವಿಫಲರಾಗಿರುವ ರೈತರು ಕೂಡಲೆ ಈ ಎಲ್ಲಾ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಪರಿಹಾರ ಹಣ ಪಡೆಯುವಂತೆ ಜಿಲ್ಲಾಧಿಕಾರಿಗಳು ರೈತರಲ್ಲಿ ಮನವಿ ಮಾಡಿದ್ದಾರೆ.

# ಕಲಬುರಗಿಯಲ್ಲಿ ಡಿ. 21ಕ್ಕೆ ಬನ್ನಂಜೆ ೯೦ ರ ವಿಶ್ವ ನಮನ ಉಪನ್ಯಾಸ ಸಂಗೀತ ಸಾಂಸ್ಕೃತಿ ಕಾರ್ಯಕ್ರಮ ವೈವಿಧ್ಯ




ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಬೆಂಗಳೂರಿನ ಬನ್ನಂಜೆ ಗೋವಿಂದಾಚಾರ್ಯ ಪ್ರತಿಷ್ಠಾನ ಮತ್ತು ಕಲಬುರಗಿಯ ಶ್ರೀ ಹನುಮಾನ್ ಸೇವಾ ಸಂಘ ಟ್ರಸ್ಟ್ ಇವುಗಳ ಜಂಟಿ ಆಶ್ರಯದಲ್ಲಿ ಡಿ.21 ರಂದು ನಗರದ ನೂತನ ವಿದ್ಯಾಲಯದ ಸಂಗಮೇಶ್ವರ ಸಭಾಗೃಹದಲ್ಲಿ ನಾಡಿನ ಹಿರಿಯ ವಿದ್ವಾಂಸ ವಿದ್ಯಾ ವಾಚಸ್ಪತಿ ಬನ್ನಂಜೆ ಗೋವಿಂದಾಚಾರ್ಯರ ಸ್ಮರಣಾರ್ಥ "ಬನ್ನಂಜೆ 90 ರ ವಿಶ್ವ ನಮನ" ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಬನ್ನಂಜೆ ಗೋವಿಂದಾಚಾರ್ಯ ವಿಶ್ವ ನಮನ ಕಾರ್ಯಕ್ರಮದ ಸ್ವಾಗತ ಸಮಿತಿಯ ಸದಸ್ಯರಾದ ಡಾ. ಸದಾನಂದ ಪೆರ್ಲ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ( ಡಿ18ರಂದು) ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬನ್ನಂಜೆ ವಿಶ್ವನಾಮನ ಕಾರ್ಯಕ್ರಮವನ್ನು ಅಂದು ಬೆಳಿಗ್ಗೆ 10.30 ಕ್ಕೆ ಅಸ್ಸಾಂನ ಕುಮಾರಭಾಸ್ಕರ ವರ್ಮಾ ಸಂಸ್ಕೃತ ಮತ್ತು ಪುರಾತನಾಧ್ಯಯನ ವಿಶ್ವವಿದ್ಯಾಲಯದ ಕುಲಪತಿ ಡಾ. ಪ್ರಹ್ಲಾದ್ ಜೋಶಿ ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ವಿಶ್ರಾಂತ ಕುಲಪತಿ ಡಾ. ಮಲ್ಲೆಪುರಂ ಜಿ. ವೆಂಕಟೇಶ್, ಪ್ರತಿಷ್ಠಾನದ ವಿಶ್ವಸ್ಥರಾದ ಡಾ. ವೀಣಾ ಬನ್ನಂಜೆ ಅವರು ಆಗಮಿಸುವರು.

ಅತಿಥಿಗಳಾಗಿ ಪಾಲಿಕೆ ಸದಸ್ಯ ಡಾ. ಶಂಭುಲಿಂಗ ಬಳಬಟ್ಟಿ ಅವರು ಆಗಮಿಸುವರು. ಅಧ್ಯಕ್ಷತೆಯನ್ನು ಹಿರಿಯ ಸಾಹಿತಿ ಹಾಗೂ ಪತ್ರಕರ್ತ ಡಾ. ಶ್ರೀನಿವಾಸ್ ಸಿರನೂರಕರ್ ವಹಿಸುವರು ಎಂದು ಅವರು ಹೇಳಿದರು. ಗೋಷ್ಠಿ ಒಂದರಲ್ಲಿ "ಬನ್ನಂಜೆ ಚಿಂತನೆಯಲ್ಲಿ ದ್ವೈತ" ಕುರಿತು ರೋಹಿತ್ ಚಕ್ರತೀರ್ಥ, ಬನ್ನಂಜೆಯವರ ಭಾಗವತ (ಭಾಷೆ ಮತ್ತು ಶೈಲಿ) ಕುರಿತು ಡಾ. ವಾಸುದೇವ್ ಅಗ್ನಿಹೋತ್ರಿ ಉಪನ್ಯಾಸ ನೀಡುವರು. ಹಿರಿಯ ಪತ್ರಕರ್ತ ವಾದಿರಾಜ್ ವ್ಯಾಸಮುದ್ರ ಅಧ್ಯಕ್ಷತೆ ವಹಿಸುವರು ಎಂದು ತಿಳಿಸಿದರು. ಗೋಷ್ಠಿ ಎರಡರಲ್ಲಿ ಗೋವಿಂದ ಪಂಡಿತಾಚಾರ್ಯರು ಕುರಿತು ಸಿ.ಜೆ. ವಿಜಯಸಿಂಹಾಚಾರ್ಯರು, ಪ್ರಾಚೀನತೆ ಮತ್ತು ಸಮಕಾಲೀನತೆಯ ಸೇತು ಕುರಿತು ಡಾ. ಸದಾನಂದ ಪೆರ್ಲ ಅವರು ಉಪನ್ಯಾಸ ನೀಡುವರು. ಪತ್ರಕರ್ತ ಶೇಷಮೂರ್ತಿ ಅವಧಾನಿ ಮತ್ತು ಉದ್ಯಮಿ ರಂಗನಾಥ ದೇಸಾಯಿ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಅಧ್ಯಕ್ಷತೆಯನ್ನು ಪತ್ರಕರ್ತ ಪ್ರಭಾಕರ್ ಜೋಶಿ ವಹಿಸುವರು ಎಂದು ತಿಳಿಸಿದರು.

ಗೋಷ್ಠಿ ಮೂರರಲ್ಲಿ "ಅಷ್ಟಾಂಗ ಯೋಗ ಮತ್ತು ಪಂಚಕೋಶಗಳು" ಕುರಿತು ಡಾ. ರಮೇಶ ವಾಸುದೇವರಾವ್, ರಾಮಾಯಣ ಮತ್ತು ಮಹಾಭಾರತ-ಬನ್ನಂಜೆಯವರ ದೃಷ್ಟಿಯಲ್ಲಿ ಕುರಿತು ಡಾ. ಶೈಲಜಾ ಕೊಪ್ಪರ್ ಉಪನ್ಯಾಸ ನೀಡಲಿದ್ದಾರೆ. ಮುಖ್ಯ ಅತಿಥಿಗಳಾಗಿ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಬಾಬುರಾವ್ ಯಡ್ರಾಮಿ, ಉದ್ಯಮಿ ಡಾ. ಕೃಷ್ಣಾಜಿ ಕುಲಕರ್ಣಿ, ರಾಜೀವ ಕುಲಕರ್ಣಿ ಅವರು ಆಗಮಿಸುವರು. ಅಧ್ಯಕ್ಷತೆಯನ್ನು ಹಿರಿಯ ಪತ್ರಕರ್ತ ಶ್ರೀಕಾಂತಾಚಾರ್ಯ ಮಣ್ಣೂರ್ ಅವರು ವಹಿಸುವರು ಎಂದು ಡಾ. ಪೆರ್ಲ ತಿಳಿಸಿದರು.

ಬನ್ನಂಜೆಯವರ ಹಾಡುಗಬ್ಬ, ನೃತ್ಯ ಹಾಗೂ "ನನ್ನ ಪಿತಾಮಹ " ನಾಟಕ ಜರುಗಲಿವೆ. ಬನ್ನಂಜೆ ಗೋವಿಂದಾಚಾರ್ಯರು ವಾಂಙ್ಮಯ ಪ್ರಪಂಚಕ್ಕೆ ನೀಡಿದ ಮಹಾನ್ ಕೊಡುಗೆಗಳು ಹಾಗೂ ಅವರ ಸಾಹಿತ್ಯಿಕ ಕೊಡುಗೆಗಳ ಬಗ್ಗೆ ಮುಂದಿನ ಜನಾಂಗಕ್ಕೆ ತಿಳಿಸುವ ಹಾಗೂ ಪುರಾಣ ಆಗಮ ಶಾಸ್ತ್ರ ವೇದ ಉಪನಿಷತ್ತುಗಳನ್ನು ವೈಜ್ಞಾನಿಕ ದೃಷ್ಟಿಕೋನದಲ್ಲಿ ಜನಮಾನಸಕ್ಕೆ ಮುಟ್ಟಿಸಿದ ಕಾರ್ಯಗಳನ್ನು ಚಿರಸ್ಥಾಯಿಗೊಳಿಸಲು ಈ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ವಿಠಲ ಕುಲಕರ್ಣಿ ಆಂದೋಲಾ, ಶ್ರೀಕಾಂತರಾವ್ ಎಸ್. ಕುಲಕರ್ಣಿ, ಸತೀಶ ಜಾಗೀರದಾರ್, ರಾಘವೇಂದ್ರ ಆರ್ ಜೋಶಿ ಮುಂತಾದವರು ಉಪಸ್ಥಿತರಿದ್ದರು.

# ದಾಖಲೆ ರಹಿತ ಜನವಸತಿ ಪ್ರದೇಶಗಳ ಜನರ ಮನೆಗಳಿಗೆ ಖಾತಾ ನೀಡಿಕೆ

ಬಳ್ಳಾರಿ,ಡಿ.18(ಕರ್ನಾಟಕ ವಾರ್ತೆ):

ಗ್ರಾಮೀಣ ಪ್ರದೇಶಗಳಲ್ಲಿನ ಕಂದಾಯ ಜಮೀನಿನಲ್ಲಿ ನಿವೇಶನವನ್ನು ಕೇವಲ ಕರಾರು ಒಪ್ಪಂದ ಪತ್ರದಲ್ಲಿ ಖರೀದಿಸಿ, ಮನೆ ನಿರ್ಮಿಸಿಕೊಂಡವರಿಗೆ ಹಕ್ಕುಪತ್ರ ನೀಡಿ, ಖಾತಾ ಒದಗಿಸುವುದಕ್ಕೆ ನಿಯಮಗಳನ್ನು ರೂಪಿಸಲು ಕಾಲಾವಕಾಶ ಬೇಕಾಗುತ್ತದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಭರವಸೆ ಹೇಳಿದರು.

ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ವೇಳೆಯಲ್ಲಿ ಕಂಪ್ಲಿ ವಿಧಾನಸಭಾ ಕ್ಷೇತ್ರದ ಶಾಸಕ ಜೆ.ಎನ್. ಗಣೇಶ್ ಅವರ ಪ್ರಶ್ನೆಗೆ ಉತ್ತರಿಸಿದರು.

ಗ್ರಾಮೀಣ ಪ್ರದೇಶಗಳಲ್ಲಿ ಬಡ ಕುಟುಂಬಗಳು ಕಂಪ್ಲಿ ಗ್ರಾಮೀಣ ಪ್ರದೇಶಗಳಲ್ಲಿ ಕಡಿಮೆ ಬೆಲೆಗೆ ನಿವೇಶನಗಳು ದೊರಕುತ್ತದೆ ಎಂದು ಈ ಹಿಂದೆ ಕಂದಾಯ ಜಮೀನಿನ ನಿವೇಶನಗಳಲ್ಲಿ ಜಮೀನಿನ ಮಾಲೀಕರೊಂದಿಗೆ ಅಗ್ರೀಮೆಂಟ್ ಪತ್ರ ಮಾಡಿಕೊಂಡು ಖರೀದಿಸಿ, ಈಗಾಗಲೇ ವಸತಿ ಮನೆಗಳನ್ನು ನಿರ್ಮಿಸಿಕೊಂಡು ವಾಸವಿದ್ದಾರೆ, ಇಂತಹ ಪ್ರಕರಣಗಳು ರಾಜ್ಯಾದ್ಯಂತ ಇವೆ. ಹೀಗಾಗಿ ಇಂತಹವರಿಗೆ ದಾಖಲೆಗಳನ್ನು ಪರಿಶೀಲಿಸಿ, ಹಕ್ಕುಪತ್ರ ಕೊಡಿಸಿ, ಇವರಿಗೆ ನ್ಯಾಯ ಒದಗಿಸಿಕೊಡಬೇಕಿದೆ ಎಂದು ಕಂಪ್ಲಿ ಶಾಸಕ ಜೆ.ಎನ್. ಗಣೇಶ್ ಮನವಿ ಮಾಡಿದರು.

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಅವರು ಮಾತನಾಡಿ, ಈಗಾಗಲೇ ಕಂದಾಯ ನಿವೇಶನಗಳಿಗೆ ಖರೀದಿಯ ಕ್ರಯಪತ್ರ ಮುಂತಾದ ದಾಖಲೆಗಳನ್ನು ಪರಿಶೀಲಿಸಿ, ಇ-ಸ್ವತ್ತು ನೀಡಿ, ಅವುಗಳನ್ನು ತೆರಿಗೆ ವ್ಯಾಪ್ತಿಗೆ ಸೇರಿಸಲು ಕ್ರಮ ವಹಿಸಿದ್ದು, ಈವರೆಗೆ 2,936 ಅರ್ಜಿಗಳು ಸ್ವೀಕೃತವಾಗಿವೆ.

ಖಾಸಗಿ ಜಮೀನುಗಳಲ್ಲಿ ನೆಲೆಸಿರುವ ದಾಖಲೆ ರಹಿತ ಜನವಸತಿಗಳನ್ನು ಕಂದಾಯ ಗ್ರಾಮ ಅಥವಾ ಗ್ರಾಮದ ಭಾಗವಾಗಿ ಪರಿವರ್ತಿಸಿ, ಅಲ್ಲಿನ ನಿವಾಸಿಗಳಿಗೆ ಭೂಸುಧಾರಣಾ ಕಾಯ್ದೆ ಅನ್ವಯ ಹಕ್ಕುಪತ್ರಗಳನ್ನು ಕಂದಾಯ ಇಲಾಖೆಯಿಂದ ವಿತರಿಸಲು ಅವಕಾಶ ಕಲ್ಪಿಸಲಾಗಿದ್ದು, ಕಂದಾಯ ಇಲಾಖೆಯಿಂದ ಹಕ್ಕುಪತ್ರ ಒದಗಿಸಿದಲ್ಲಿ, ಗ್ರಾಮ ಪಂಚಾಯತಿಗಳಿಗೆ ಖಾತೆ ವಿತರಣೆ ಮಾಡಲು ಅವಕಾಶವಿರುತ್ತದೆ. ಆದರೆ ಕೇವಲ ಅಗ್ರೀಮೆಂಟ್ ಪತ್ರದ ಆಧಾರದಲ್ಲಿ ನಿವೇಶನ ಖರೀದಿಸಿ, ವಸತಿ ನಿರ್ಮಿಸಿದವರಿಗೆ, ಒಂದು ಬಾರಿಯ ಪರಿಹಾರವಾಗಿ ಖಾತಾ ಮಾಡಿಕೊಡಲು ನಿಯಮಗಳನ್ನು ರೂಪಿಸಬೇಕಾಗುತ್ತದೆ. ಇದು ತಕ್ಷಣಕ್ಕೆ

**ನಿಯಮಾವಳಿ ರೂಪಿಸಲು ಕಾಲಾವಕಾಶದ ಅಗತ್ಯವಿದೆ: ಸಚಿವ ಪ್ರಿಯಾಂಕ್ ಖರ್ಗೆ**

ಆಗುವ ಕೆಲಸವಲ್ಲ, ಇದಕ್ಕೆ ಸಾಕಷ್ಟು ಕಾಲಾವಕಾಶ ಬೇಕಾಗುತ್ತದೆ. ಹೀಗಾಗಿ ಕಂದಾಯ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಉನ್ನತ ಅಧಿಕಾರಿಗಳೊಂದಿಗೆ ಈ ಕುರಿತು ಚರ್ಚಿಸಿ ಇದಕ್ಕೆ ಪರಿಹಾರ ಕಲ್ಪಿಸುವ ಪ್ರಾಮಾಣಿಕ ಯತ್ನ ಮಾಡಲಾಗುವುದು ಎಂದು ಸಚಿವ ಪ್ರಿಯಾಂಕ್ ಖರ್ಗೆ ಭರವಸೆ ನೀಡಿದರು.

# ಜಿಲ್ಲೆಯಲ್ಲಿ ಮಕ್ಕಳಲ್ಲಿ ಅಪೌಷ್ಠಿಕತೆ ಪ್ರಮಾಣ ಶೇ.೦.೦೦೨ಕ್ಕೆ ಇಳಿಕೆ : ಬಿ.ಫೌಜಿಯಾ ತರನ್ನುಮ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ರಾಷ್ಟ್ರೀಯ ಬಾಲ ಸ್ವಾಸ್ಥ್ಯ ಕಾರ್ಯಕ್ರಮ (ಆರ್.ಬಿ.ಎಸ್.ಕೆ.) ಸಮರ್ಪಕ ಅನುಷ್ಠಾನದ ಫಲವಾಗಿ ಜಿಲ್ಲೆಯಾದ್ಯಂತ ಕಳೆದ ಮೂರು ವರ್ಷದಲ್ಲಿ ತೀವ್ರ ಮತ್ತು ಮಧ್ಯಮ ಅಪೌಷ್ಠಿಕತೆಯಿಂದ ಬಳಲುತ್ತಿದ್ದ 30,882 ಮಕ್ಕಳ ಪೈಕಿ 27,466 ಮಕ್ಕಳು ಗುಣಮುಖರಾಗಿದ್ದರಿಂದ ಮಕ್ಕಳಲ್ಲಿ ಅಪೌಷ್ಠಿಕತೆ ಪ್ರಮಾಣ ಶೇ.0.003 ರಿಂದ ಶೇ.0.002ಕ್ಕೆ ಇಳಿಕೆಯಾಗಿದೆ ಎಂದು ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ತಿಳಿಸಿದ್ದಾರೆ.

2023-24ರಿಂದ 2025-26ನೇ ಸಾಲಿನ ಇಂದಿನ ವರೆಗೆ ಜಿಲ್ಲೆಯಾದ್ಯಂತ ತೀವ್ರ ಅಪೌಷ್ಠಿಕತೆಯ 2,372 ಮಕ್ಕಳನ್ನು ಗುರುತಿಸಿ 1,848 ಮಕ್ಕಳನ್ನು ಗುಣಪಡಿಸಿದ್ದು, 1,824 ಮಕ್ಕಳನ್ನು ಪೌಷ್ಠಿಕ ಪುನಶ್ಚೇತನ ಕೇಂದ್ರದಲ್ಲಿ ದಾಖಲಿಸಿದೆ. ಅದೇ ರೀತಿ ಮಧ್ಯಮ ಅಪೌಷ್ಠಿಕತೆ ಹೊಂದಿದ್ದ 28,510 ಮಕ್ಕಳನ್ನು ಗುರುತಿಸಿ 25,618 ಮಕ್ಕಳನ್ನು ಗುಣಪಡಿಸಲಾಗಿದೆ. ಪರಿಣಾಮ ಜಿಲ್ಲೆಯಲ್ಲಿ ಕಳೆದ ಮೂರು ವರ್ಷದ ಹಿಂದಿನ ಅಂಕಿ-ಸಂಖೆ ಗಮನಿಸಿದಾಗ ಮಕ್ಕಳಲ್ಲಿ ಅಪೌಷ್ಠಿಕತೆ ಪ್ರಮಾಣ ಶೇ.0.003 ರಿಂದ ಶೇ.0.002ಕ್ಕೆ ಇಳಿಕೆಯಾಗಿದ್ದು, ಇದು ಕೇಂದ್ರೀಕೃತ ಮಧ್ಯಸ್ಥಿಕೆಗಳ ಸಕಾರಾತ್ಮಕ ಪರಿಣಾಮವನ್ನು ಪ್ರತಿಬಿಂಬಿಸುತ್ತದೆ ಎಂದು ಅವರು ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ ರಾಷ್ಟ್ರೀಯ ಮಕ್ಕಳ ಆರೋಗ್ಯ ಕಾರ್ಯಕ್ರಮದಡಿ ಆರ್.ಬಿ.ಎಸ್.ಕೆ. ಪ್ರಮುಖ ಕಾರ್ಯಕ್ರಮವಾಗಿದ್ದು, ರಾಜ್ಯ ಸರ್ಕಾರದಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಮೂಲಕ ಅನುಷ್ಠಾನ ಮಾಡಲಾಗುತ್ತಿದೆ. ಆರಂಭಿಕ ಹಂತದಲ್ಲಿಯೇ 0-18 ವರ್ಷ ವಯಸ್ಸಿನ ಮಕ್ಕಳಲ್ಲಿ ವಿಶೇಷವಾಗಿ ಅಪೌಷ್ಟಿಕತೆ ಮತ್ತು ಜನ್ಮಜಾತ ಕಾಯಿಲೆಗಳ ಮೇಲೆ ಜನನದಲ್ಲಿನ ದೋಷಗಳು, ಕೊರತೆಗಳು, ರೋಗಗಳು, ಬೆಳವಣಿಗೆಯ ವಿಳಂಬಗಳು ಹಾಗೂ ಅಂಗವೈಕಲ್ಯಗಳು ಗುರುತಿಸಿ ಚಿಕಿತ್ಸೆ ನೀಡುವುದು ಯೋಜನೆ ಮುಖ್ಯ ಗುರಿಯಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಮಕ್ಕಳ ಆರೋಗ್ಯ ಸೂಚಕಗಳನ್ನು ಬಲಪಡಿಸುವ ಮೂಲಕ ಮಕ್ಕಳಲ್ಲಿನ ಆರಂಭಿಕ ಆರೋಗ್ಯ ಸಮಸ್ಯೆಯನ್ನು ಪತ್ತೆ ಹಚ್ಚಿ ಪರಿಣಾಮಕಾರಿ ಚಿಕಿತ್ಸೆ ಮತ್ತು ಸಮಗ್ರ ಆರೈಕೆಯನ್ನು ಖಚಿತಪಡಿಸಿಕೊಳ್ಳುವ ನಿಟ್ಟಿನಲ್ಲಿ ಜಿಲ್ಲಾಡಳಿತ ಮತ್ತು ಆರೋಗ್ಯ ಇಲಾಖೆ ಬದ್ಧವಾಗಿದ್ದು, ಕಳೆದ ಮೂರು ವರ್ಷದಲ್ಲಿ ಆರ್.ಬಿ.ಎಸ್.ಕೆ. ವೈದ್ಯರ ತಂಡದ ನಿಯಮಿತ ತಪಾಸಣೆ ಮತ್ತು ಸಕಾಲದಲ್ಲಿ ಚಿಕಿತ್ಸೆಯ ಪರಿಣಾಮ ಅಪೌಷ್ಠಿಕತೆ ಪ್ರಮಾಣದಲ್ಲಿ ಇಳಿಕೆ ಕಂಡಿದೆ ಎಂದು ಡಿ.ಸಿ. ತಿಳಿಸಿದ್ದಾರೆ.

ಇನ್ನು ಜಿಲ್ಲೆಯ ಎಲ್ಲಾ ಆರೋಗ್ಯ ಉಪಕೇಂದ್ರಗಳಲ್ಲಿ ಹಾಗೂ ಕಂದಾಯ ಗ್ರಾಮಗಳಲ್ಲಿ "ಗ್ರಾಮ ಆರೋಗ್ಯ ಪೌಷ್ಟಿಕ ದಿನಾಚರಣೆ"ಯನ್ನು ಆಚರಿಸಲಾಗುತ್ತಿದೆ. ಗರ್ಭಿಣಿಯರಿಗೆ, ಹಾಲುಣಿಸುವ ತಾಯಂದಿಯರಿಗೆ ಹಾಗೂ ಅಪೌಷ್ಟಿಕತೆವುಳ್ಳ ಮಕ್ಕಳ ತಾಯಂದಿರ ಸಭೆ ಮಾಡಿ ಪೌಷ್ಟಿಕತೆ, ನೈರ್ಮಲ್ಯತೆಯ ಬಗ್ಗೆ ಮಾಹಿತಿಯನ್ನು ನೀಡುವುದರ ವಿಶೇಷವಾಗಿ ಆಹಾರ ಪದ್ಧತಿ ಮತ್ತು ಮಕ್ಕಳ ಲಾಲನೆ-ಪಾಲನೆ ಬಗ್ಗೆ ತಿಳಿ ಹೇಳಲಾಗುತ್ತಿದೆ.

247 ಜನರಿಗೆ ಉಚಿತ ಶಸ್ತ್ರಚಿಕಿತ್ಸೆ: ರಾಷ್ಟ್ರೀಯ ಮಕ್ಕಳ ಆರೋಗ್ಯ ಕಾರ್ಯಕ್ರಮದಡಿಯಲ್ಲಿ ನೋಂದಾಯಿತ ಖಾಸಗಿ ಆಸ್ಪತ್ರೆಗಳ ಸಹಯೋಗದೊಂದಿಗೆ ಸೀಳು ತುಟಿ ಮತ್ತು ಸೀಳು ಅಂಗುಳ, ಜನ್ಮಜಾತ ಹೃದಯ ಕಾಯಿಲೆಗಳು ಮತ್ತು ಸ್ಕೋಲಿಯೋಸಿಸ್‌ನಂತಹ ಸಮಸ್ಯೆ ಪತ್ತೆ ಹಚ್ಚಲು ಆರೋಗ್ಯ ತಪಾಸಣಾ ಶಿಬಿರಗಳನ್ನು ನಡೆಸಿ ಕಳೆದ ಮೂರು ವರ್ಷದಲ್ಲಿ 96 ಜನ ಮಕ್ಕಳಿಗೆ ಸೀಳು ತುಟಿ & ಸೀಳು ಅಂಗುಳ, 146 ಮಕ್ಕಳಿಗೆ ಹೃದಯ ರೋಗಗಳಿಗೆ ಸಂಬಂಧಿಸಿದ ಚಿಕಿತ್ಸೆ ಹಾಗೂ 5 ಜನ ಮಕ್ಕಳಿಗೆ ಡೊಂಕು ಬೆನ್ನುಮೂಳೆಗಳ ಉಚಿತ ಶಸ್ತ್ರಚಿಕಿತ್ಸೆ ಮಾಡಿದಲ್ಲದೆ ಆರ್.ಬಿ.ಎಸ್.ಕೆ. ವೈದ್ಯರ ತಂಡ ಇವರ ನಿರಂತರ ಆರೋಗ್ಯ ಮೇಲುಸ್ತುವಾರಿ ವಹಿಸಿದೆ.

ಜಿಲ್ಲೆಯಾದ್ಯಂತ 8 ಪೌಷ್ಠಿಕ ಕೇಂದ್ರಗಳು: ಜಿಲ್ಲೆಯಾದ್ಯಂತ ಒಟ್ಟು 8 ಪೌಷ್ಠಿಕಾಂಶ ಪುನರ್ವಸತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿದ್ದು, ಎಲ್ಲಾ ತಾಲ್ಲೂಕುಗಳನ್ನು ಒಳಗೊಂಡಿದೆ. ತೀವ್ರ ಅಪೌಷ್ಟಿಕತೆಯಿಂದ ಬಳಲುತ್ತಿರುವ ಮಕ್ಕಳನ್ನು ಇಲ್ಲಿಗೆ ದಾಖಲಿಸಿ ತರಬೇತಿ ಪಡೆದ ಮಕ್ಕಳ ವೈದ್ಯರಿಂದ ನಿರಂತರ ವೈದ್ಯಕೀಯ ಚಿಕಿತ್ಸೆ ಮತ್ತು ಪೌಷ್ಠಿಕ ಆಹಾರ ಒದಗಿಸಲಾಗುತ್ತಿದೆ.

# ಮಹಿಳೆಯರ, ಮಕ್ಕಳ ಅನೈತಿಕ ಸಾಗಾಣೆ ತಡೆಗಟ್ಟಲು ಜವಾಬ್ದಾರಿ ಹೊಂದಬೇಕು

ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:

ಮಕ್ಕಳು ಮತ್ತು ಮಹಿಳೆಯರು ಅನೈತಿಕ ಸಾಗಾಣಿಕೆಗೆ ಒಳಗಾಗದಂತೆ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಮೂಲಕ ಅವರನ್ನು ರಕ್ಷಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದಿ ಇಲಾಖೆಯ ಉಪನಿರ್ದೇಶಕ ರಾಮಕೃಷ್ಣನಾಯಕ. ಎಂ ಅವರು ಹೇಳಿದರು.



ಮಕ್ಕಳು, ಮಹಿಳೆಯರು ಮತ್ತು ಹಿರಿಯ ನಾಗರಿಕರು ಈ ಜಾಲಕ್ಕೆ ಬೇಗನೇ ಜಾರುತ್ತಾರೆ. ಜೀತ ಕಾರ್ಮಿಕ ಪದ್ಧತಿ, ಅಂಗಾಂಗ ಕಸಿ, ಹೊರದೇಶಗಳಿಗೆ ಮಾರಾಟ, ಭಿಕ್ಷಾಟನೆ ಸೇರಿದಂತೆ ಹಲವಾರು ಅನಧೀಕೃತ ಚಟುವಟಿಕೆಗಳಿಗೆ ಬಳಸಿಕೊಳ್ಳಲಾಗುತ್ತದೆ. ಇದಕ್ಕೆ ಕಡಿವಾಣ ಹಾಕಲು ಗ್ರಾಪಂ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ಅಧಿಕಾರಿಗಳನ್ನೊಳಗೊಂಡ ಸಮಿತಿಗಳಿದ್ದು, ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಸಮನ್ವಯತೆ ಅತ್ಯಾವಶ್ಯಕವಾಗಿದೆ ಎಂದರು.

ಮಾನವ ಕಳ್ಳಸಾಗಾಣಿಕೆ ಮತ್ತು ಕೋರ್ ಕಮಿಟಿಯ ರಾಜ್ಯ ಉನ್ನತಾಧಿಕಾರಿಗಳ ಸಮಿತಿಯ ಸದಸ್ಯ ವಿಲಿಯಂ ಕ್ರಿಸ್ಟೋಫರ್ ಅವರು ಸಂಪನ್ಮೂಲ ವ್ಯಕ್ತಿಗಳಾಗಿ ಭಾಗವಹಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾನವ ಸಾಗಾಣಿಕೆಯು ಬಲವಾಗಿ ಹಾಗೂ ಮಿತಿ ಮೀರಿದ ರೀತಿಯಲ್ಲಿ ನಡೆಯುತ್ತಿರುವುದು ಕಂಡುಬರುತ್ತಿದ್ದು, ಈ ಪಿಡುಗು ಮಕ್ಕಳು, ಅಪ್ರಾಪ್ತ ವಯಸ್ಕರು, ಕಾರ್ಮಿಕ ವರ್ಗ, ಮಹಿಳೆಯರು, ಯುವ ಜನರನ್ನು ಸಹ ಸಮಸ್ಯೆಗೆ ತಳ್ಳುತ್ತಿದೆ. ಮಹಿಳೆಯರು ಮತ್ತು ಮಕ್ಕಳು ದುರ್ಬಲ ವರ್ಗದವರಾಗಿದ್ದು, ಅವರು ಮೋಸದ ಬಲೆಗೆ ಸುಲಭವಾಗಿ ಬೀಳುವ ಸಾಧ್ಯತೆಯಿರುವುದರಿಂದ ಅವರನ್ನು ರಕ್ಷಿಸುವುದು ಅವಶ್ಯಕವಾಗಿದೆ ಎಂದು ಹೇಳಿದರು. ಬಳಿಕ “ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಣಿಕೆ ತಡೆಗಟ್ಟುವಿಕೆ ಹಾಗೂ ಐಟಿಪಿಎ, 1956ರ ಕಾಯ್ದೆ” ಕುರಿತು ಅರಿವು ಮೂಡಿಸಿದರು.

ಕಾರ್ಯಾಗಾರದಲ್ಲಿ ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಯೋಜನಾಧಿಕಾರಿ ಎ.ಮೌನೇಶ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರಿವೀಕ್ಷಣಾಧಿಕಾರಿ ಈಶ್ವರ್ ರಾವ್ ಸೇರಿದಂತೆ ವಿವಿಧ ತಾಲ್ಲೂಕುಗಳ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಸಹಭಾಗಿದಾರರ ಇಲಾಖೆಯ ಅಧಿಕಾರಿ-ಸಿಬ್ಬಂದಿ, ಎನ್.ಜಿ.ಓ ಸಂಸ್ಥೆಗಳ ಪದಾಧಿಕಾರಿಗಳು ಇದ್ದರು

## ಅದ್ದೂರಿಯಾಗಿ ಜರುಗಿದ ಗೋಮರ್ಸಿ ಶಂಶುದ್ದೀನ್ ಖಾದ್ರಿ ಉರುಸು

ಮಲ್ಲಮ್ಮ ನುಡಿ ವಾರ್ತೆ ಸಿಂಧನೂರು: ತಾಲ್ಲೂಕಿನ ಗೋಮರ್ಸಿ ಗ್ರಾಮದಲ್ಲಿ ಹಿಂದೂ-ಮುಸ್ಲಿಂರ ಭಾವೈಕ್ಯತೆ ಸಂಕೇತವಾದ ಹಜರತ್ ಮೀರಾಂ ಸೈಯದ್ ಶಾಹ ಶಂಶುದ್ದೀನ್ ಖಾದ್ರಿ ಅವರ ಉರುಸು ಸೋಮವಾರ ಅದ್ದೂರಿಯಾಗಿ ನಡೆಯಿತು.



ಉರುಸಿನ ಪ್ರಯುಕ್ತ ಧ್ವಜಾರೋಹಣ ನೆರವೇರಿಸುವ ಕಾರ್ಯಕ್ರಮ ಸೇರಿದಂತೆ ಇನ್ನಿತರ ಧಾರ್ಮಿಕ ಕಾರ್ಯಕ್ರಮಗಳು ಜರುಗಿದವು. ಬೆಳಗಿನ ಜಾವ 5ಗಂಟೆಯಿಂದ ಸೈಯದ್ ಖಾಸೀಂ ಖಾದ್ರಿ ಉರ್ಫ್ ಸರ್ಕಾರ್ ಪಾಷಾ ಸಾಹೇಬ್ ನೇತೃತ್ವದಲ್ಲಿ ಗಂಧ ಮೆರವಣಿಗೆ ನಡೆಯಿತು. ಬಳಿಕ ಧಾರ್ಮಿಕ ವಿಧಾನಗಳ ಪ್ರಕಾರ ಪೂಜಾ-ಪ್ರಾರ್ಥನೆಗಳು ನಡೆದವು. ಗೋಮರ್ಸಿ ಸೇರಿ ಸುತ್ತಮುತ್ತಲಿನ ಹಳ್ಳಿಗಳಿಂದ ಎಲ್ಲಾ ಜಾತಿ ಜನಾಂಗದ ಜನರು ದರ್ಗಾದಲ್ಲಿ ಸಕ್ಕರೆ ಒದಿಸಿ, ಭಕ್ತಿ ಸಮರ್ಪಿಸಿದರು.

ಈ ಸಂದರ್ಭದಲ್ಲಿ ಸೈಯದ್ ಇಸ್ಮಾಯಿಲ್ ಖಾದ್ರಿ ಅತರ್‌ಬಾಬಾ ಜಾಗೀರ್‌ದಾರ್ ಗೋಮರ್ಸಿ, ಸೈಯದ್ ಮೈನುದ್ದೀನ್ ಖಾದ್ರಿ ತೆಕ್ಕಲಕೋಟೆ, ಸೈಯದ್ ಷಾ ತಾಹೇರ್‌ಖಾದ್ರಿ ಜಂತಕಲ್, ಸೈಯದ್ ಹಾಜಂಖಾದ್ರಿ ಕಂಪ್ಲಿ, ಸೈಯದ್ ತುರಾಬ್ ಖಾದ್ರಿ ಕಂಪ್ಲಿ, ಸೈಯದ್ ಮತೀನ್ ಖಾದ್ರಿ ಕಂಪ್ಲಿ, ಖಾದರ್‌ಭಾಷಾ ತಾತನವರು ಗೋಮರ್ಸಿ, ಸೈಯದ್ ಸಜ್ಜಾದ್ ಖಾದ್ರಿ, ಸೈಯದ್ ಬಾಬಾ ಖಾದ್ರಿ, ಮುಖಂಡರಾದ ಸೈಯದ್ ಸಜ್ಜಾದ್‌ಖಾದ್ರಿ, ಸೈಯದ್ ಯುನೂಸ್‌ಪಾಷಾ ಖಾದ್ರಿ, ಮರೇಗೌಡ, ಬಸನಗೌಡ, ದೊಡ್ಡಬಸನಗೌಡ, ಶ್ರೀನಿವಾಸ, ಖಲೀಲ್‌ಪಾಷಾ, ಮಹ್ಮದ್‌ಸಾಬ್, ರಸೂಲ್‌ಸಾಬ್, ಬುಡ್ಡಾಸಾಬ್ ಮುಜಾವಾರ್, ಶಾಮೀದ್, ಶಾಹೀದ್ ಸೇರಿದಂತೆ ಮಾಡಶಿರವಾರ ಹಾಗೂ ಗೋಮರ್ಸಿ ಗ್ರಾ.ಪಂ. ಸದಸ್ಯರು, ಗ್ರಾಮಸ್ಥರು ಇತರರು ಇದ್ದರು. ಉರುಸಿನ ಅಂಗವಾಗಿ ರಾತ್ರಿ ಖವ್ವಾಲಿ ಕಾರ್ಯಕ್ರಮದಲ್ಲಿ ಭಕ್ತರ ಮನಸೂರೆಗೊಂಡಿತು.

# ಸೌಲಭ್ಯ ಕಲ್ಪಿಸಲು ವಿಳಂಬ ಧೋರಣೆ ಅನುಸರಿಸದಿರಲು ಅಧಿಕಾರಿಗಳಿಗೆ ಸೂಚನೆ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:

:ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಜನಾಂಗಕ್ಕೆ ಸಂಬಂಧಿಸಿದಂತೆ ಸೌಲಭ್ಯ ಕಲ್ಪಿಸಲು ವಿಳಂಬ ಧೋರಣೆ ಅನುಸರಿಸದೇ ,ಆದ್ಯತೆ ಮೇಲೆ ಸಮಸ್ಯೆ ಗಳಿಗೆ ಪರಿಹಾರ ಕಲ್ಪಿಸುವಂತೆ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಅನುಸೂಚಿತ ಜಾತಿ, ಅನುಸೂಚಿತ ಪಂಗಡ (ದೌರ್ಜನ್ಯ ನಿಯಂತ್ರಣ ಕಾಯ್ದೆ 1995ರಡಿ ನಿಯಮ 17ರ ರೀತ್ಯ ನಾಲ್ಕನೇ ತ್ರೈಮಾಸಿಕ ಜಿಲ್ಲಾ ಜಾಗೃತಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸ್ಮಶಾನ ಭೂಮಿ, ಡಾ.ಬಿ.ಆರ್. ಅಂಬೇಡ್ಕರ್ ಭವನ, ವಿವಿಧ ಭವನಗಳ, ಅಭಿವೃದ್ಧಿ ಕಾಮಗಾರಿಗಳಿಗೆ ಸಂಬಂಧಿಸಿದ ಹಾಗೂ ಇತರ ವಿಷಯಗಳ ಕುರಿತು ಸೂಚಿಸಲಾಗುವ ನಿರ್ದೇಶನಗಳನ್ನು ಕಡ್ಡಾಯವಾಗಿ ಪಾಲಿಸಿ, ಅನುಪಾಲನಾ ವರದಿಯನ್ನು ಸಲ್ಲಿಸಬೇಕು ಎಂದು ಹೇಳಿದರು.

ಹುಣಸಗಿ ತಾಲೂಕಿನ ಪರಿಶಿಷ್ಟ ಜಾತಿ ಅಲೆಮಾರಿ ಜನಾಂಗದ ಮಕ್ಕಳು ಶಿಕ್ಷಣದಿಂದ ವಂಚಿತರಾಗಿದ್ದಾರೆ ನಿಗಾವಹಿಸಬೇಕು.ಮಕ್ಕಳ ಶಾಲಾ ಹಾಜರಾತಿ ,ಶಾಲೆಯಿಂದ ಹೊರಗುಳಿದ ಬಗ್ಗೆ ಸಮೀಕ್ಷೆ ಮಾಡಿ ವರದಿ ಸಲ್ಲಿಸಬೇಕು. ಸಾಧ್ಯವಾದಲ್ಲಿ ಅವರಿಗೆ ಉತ್ತಮ ವಸತಿ ಶಾಲೆಗಳಲ್ಲಿ ಸೇರಿಸಿ, ಪ್ರೋತ್ಸಾಹಿಸಿ ಶಾಲೆಗಳಿಗೆ ಸೇರಿಸಬೇಕು. ಮಕ್ಕಳ ಶಿಕ್ಷಣ ವಿಷಯದಲ್ಲಿ ಎಲ್ಲಾ ಸಮುದಾಯಗಳ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ನಿಗಾವಹಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸುರಪುರ ತಾಲೂಕಿನ ನಗರ ವ್ಯಾಪ್ತಿಯ ಹುಲಕಲ್ ವಾರ್ಡ್‌ನ ಪರಿಶಿಷ್ಟ ಜಾತಿ ಜನಾಂಗ ಕ್ಕೆ ಸ್ಮಶಾನ ಭೂಮಿ ಬಗ್ಗೆ ನಿವೇಶನ ಗುರುತಿಸಬೇಕು.ಯಾದಗರಿ ನಗರದ ಲುಂಬಿನಿ ಗಾರ್ಡನ್‌ಗೆ ಚಾಲ್ತಿಯಲ್ಲಿರುವ ಬೋರವೆಲ್ಲಿಂದ ಕುಡಿಯುವ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ವಿವಿಧ ಇಲಾಖೆಗಳ ವ್ಯಾಪ್ತಿಯಲ್ಲಿ ಹೊರಗುತ್ತಿಗೆ ನೌಕರರಿಗೆ ವೇತನ, ಪಿಎಫ್, ಸೇರಿದಂತೆ ಇನ್ನಿತರ ಸವಲತ್ತುಗಳ ಬಗ್ಗೆ ಜಿ.ಪಂ,ಕಾರ್ಮಿಕ ಇಲಾಖೆಗಳ ಸಹಯೋಗದೊಂದಿಗೆ ಪರಿಶೀಲಿಸಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಜಿಲ್ಲೆಯಲ್ಲಿ ವಾಣಿಜ್ಯ ಮಳಿಗೆಗಳಿಗೆ ರೋಸ್ಟರ್ ರಂತೆ ಆಯ್ಕೆ ನಡೆಯಬೇಕು. ಕಾನೂನು ಪಾಲನೆಯಾಗಬೇಕು. ಈ ಸಭೆಗೆ ಗಾಂಭಿರ್ಯತೆ ಇರುವುದರಿಂದ ಅಧಿಕಾರಿಗಳು ನಿರ್ಲಕ್ಷ್ಯ ತೋರಿದೆ ತಕ್ಷಣ ಕ್ರಮಗಳನ್ನು ಕೈಗೊಳ್ಳಬೇಕು.ನಿಗಧಿತ ಸಮಯದೊಳಗೆ ಅನುಪಾಲನಾ ವರದಿಯನ್ನು ಸಲ್ಲಿಸಬೇಕು. ಸಮಿತಿ ಸದಸ್ಯರಿಗೆ ಸಮಯಕ್ಕೆ ಸರಿಯಾಗಿ ಸ್ಪಂದಿಸಬೇಕು. ಅಧಿಕಾರಿಗಳು ಸಮಾಜ ಕಲ್ಯಾಣಯೊಂದಿಗೆ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಸಕಾಲಕ್ಕೆ ಸ್ಪಂದಿಸಬೇಕು. ತಾ.ಪಂ.ಕಾರ್ಯನಿರ್ವಹಣಾಧಿಕಾರಿಗಳು,ಪಿಡಿಓ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಸಮಸ್ಯೆಗಳಿಗೆ ಸಂಬಂಧಿಸಿದಂತೆ ದೂರವಾಣಿ ಮೂಲಕ ಕೋರಲಾಗುವ ಸಾರ್ವಜನಿಕ ಸಮಸ್ಯೆಗಳಿಗೆ ಸ್ಪಂದಿಸಬೇಕು.

ಈ ಸಭೆಗೆ ಗೈರು ಹಾಜರಾದವರಿಗೆ ಕಾರಣ ಕೇಳಿ ನೋಟಿಸ್ ಜಾರಿಗೊಳಿಸಲು ಅವರು ಸೂಚಿಸಿದರು.

ಸಭೆಯಲ್ಲಿ, ದೌರ್ಜನ್ಯ ಪ್ರಕರಣಗಳಲ್ಲಿ ನೊಂದ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ, ಸುಮಾರು 20 ಸಂತ್ರಸ್ಥರಿಗೆ 75 ಲಕ್ಷ ರೂ. ಗಳ ಪರಿಹಾರ ಧನ ವಿತರಿಸಲಾಗಿದೆ ಎಂದು ತಿಳಿಸಲಾಯಿತು.

ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿ ಚನ್ನಬಸಪ್ಪ ಅವರು ವಿವರ ನೀಡಿ ಸ್ವಾಗತಿಸಿದರು. ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ವಿಜಯಕುಮಾರ್ ಮಡ್ಡೆ, ಸಮಿತಿ ಸದಸ್ಯರಾದ ಮರೆಪ್ಪ ಚಟ್ಟರ್ಕರ್, ನಿಂಗಪ್ಪ, ಮಲ್ಲಪ್ಪ ಗೋಗಿ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ಡಿಸೆಂಬರ್ 21 ರಿಂದ 24 ರವರೆಗೆ ಪಲ್ಸ್ ಪೋಲಿಯೊ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆ

ಬೀದರ:ತಾಲ್ಲೂಕಿನ ಪ್ರಾ.ಆ.ಕೇಂದ್ರ ಕಮಠಾಣದ ವ್ಯಾಪ್ತಿಯ ಸಂಗೋಳಗಿ ಅಂಗನವಾಡಿ ಕೇಂದ್ರ 2 ರಲ್ಲಿ ಪಲ್ಸ್ ಪೋಲಿಯೊ ಪೂರ್ವ ಚಟುವಟಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದು ಡಾ.ವರುಣ, ಶ್ರೀಮತಿ ಜಗದೇವಿ ಚನ್ನಶೆಟ್ಟಿ ಅಂಗನವಾಡಿ ಶಿಕ್ಷಕಿ,ಶ್ರೀಮತಿ ಸಂಗೀತಾ ಆಶಾ ಕಾರ್ಯಕರ್ತೆ ಯವರು ಸೇರಿದಂತೆ ಗ್ರಾಮದ ಮಹಿಳೆಯರು ಮತ್ತು ಮಕ್ಕಳು

## ಶಿಕ್ಷಕನೆಂದರೆ ಸಾಧ್ಯತೆಗಳ ಕೃಷಿಕ : ಹಾರಕೂಡ ಶ್ರೀ



ಮಲ್ಲಮ್ಮನುಡಿವಾರ್ತೆ.ಬಸವಕಲ್ಯಾಣ;

ಮಕ್ಕಳ ಮನಸ್ಸಿನಲ್ಲಿ ರಚನಾತ್ಮಕ ಕನಸುಗಳನ್ನು ಬಿತ್ತುವುದರ ಮೂಲಕ ರಾಷ್ಟ್ರಕ್ಕೆ ಅದ್ಭುತ ಪ್ರತಿಭೆಗಳನ್ನು ನೀಡುವ ಶಿಕ್ಷಕ ನಿಜವಾಗಿಯೂ ಸಾಧ್ಯತೆಗಳ ಕೃಷಿಕನೇ ಹೌದು ಎಂದು ಹಾರಕೂಡದ ಪೂಜ್ಯ ಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ನಗರದಲ್ಲಿ ಶ್ರೀಮತಿ ಉಷಾದೇವಿ ಪಂಚಾಕ್ಷರಿ ಹಿರೇಮಠ ರವರ ವಯೋನಿವೃತ್ತಿ ಅಂಗವಾಗಿ ಆಯೋಜಿಸಿದ ಬೀಳ್ಕೊಡುಗೆ ಸಮಾರಂಭ ಹಾಗೂ ತುಲಾಭಾರ ಕಾರ್ಯಕ್ರಮದ ಪಾವನ ಸನ್ನಿಧಾನ ವಹಿಸಿ ಮಾತನಾಡಿದ ಪೂಜ್ಯರು, ಬೇರೆ ಬೇರೆ ಕೌಟುಂಬಿಕ ಹಿನ್ನೆಲೆಯಿಂದ ಬರುವ ಮುಗ್ಧ ಮಕ್ಕಳ ಮನಸ್ಸನ್ನು ಅರಿತು ಅವರ ಭದ್ರ ಭವಿಷ್ಯಕ್ಕೆ ಸೂಕ್ತ ತಳಪಾಯ ಒದಗಿಸಿಕೊಟ್ಟು ಈ ರಾಷ್ಟ್ರದ ಸತ್ಪ್ರಜೆಗಳನ್ನಾಗಿ ರೂಪಿಸುವ ಶಿಕ್ಷಕರ ಜವಾಬ್ದಾರಿಯುತ ಕಾರ್ಯ ಶ್ಲಾಘನೀಯವಾಗಿದೆ.

ಸತತವಾಗಿ 36 ವರ್ಷಗಳ ಕಾಲ ಗಣಿತ ಶಿಕ್ಷಕರಾಗಿ ನಿಷ್ಠೆಯಿಂದ ಸೇವೆ ಸಲ್ಲಿಸಿ ಸಾವಿರಾರು ಮಕ್ಕಳ ಉಜ್ವಲ ಭವಿಷ್ಯ ರೂಪಿಸುವಲ್ಲಿ ತಮ್ಮ ವಿಶೇಷ ಕೊಡುಗೆಯನ್ನು ನೀಡಿರುವ ಶ್ರೀಮತಿ ಉಷಾದೇವಿ ಪಿ. ಹಿರೇಮಠ ರವರು ಆದರ್ಶ ಗುರುಮಾತೆಯರ ಸಾಲಿನಲ್ಲಿ ನಿಲ್ಲುವಂತಹವರು.

ಶ್ರೀಮತಿ ಉಷಾದೇವಿ ಹಿರೇಮಠ ರವರ ಸೇವಾ ದಕ್ಷತೆಗೆ ಅವರ ಇಂದಿನ ಸು:ಖಿ ಕುಟುಂಬವೇ ದೊಡ್ಡ ನಿದರ್ಶನವಾಗಿದೆ.

ಅವರ ನಿವೃತ್ತಿ ಜೀವನ ಹಾಗೂ ಇಡೀ ಪರಿವಾರ ಯಾವತ್ತೂ ಸೌಖ್ಯದಿಂದ ಬಾಳುವಂತೆ ಹಾರಕೂಡಧೀಶ ಅನುಗ್ರಹಿಸಲಿ ಮತ್ತು ಸರ್ವರಿಗೂ ಒಳಿತಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಪಂಚಾಕ್ಷರಿ ಹಿರೇಮಠಹಾರಕೂಡ,ಜಿಲ್ಲಾಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿಗಳಾದ ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ, ಎಪಿಎಂಸಿ ಮಾಜಿ ಅಧ್ಯಕ್ಷ ಸಿದ್ರಾಮಪ್ಪ ಗುದಗೆ, ಶಿವಶರಣಯ್ಯ ಕಂಬಳಿಮಠ, ರೇವಣಸಿದ್ಧ ಹಿರೇಮಠ ಹೈದರಾಬಾದ, ಶ್ರೀದೇವಿ ಹಿರೇಮಠ, ಹೇಮಲತಾ ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಕುಮಾರಿ ವರ್ಚನಶ್ರೀ ಮಡಿವಾಳೇಶ್ವರ ಸ್ವಾಗತಿಸಿದರು.

ಚನ್ನಬಸಪ್ಪ ಮೀನ ಹಾಬಾಳ ಪ್ರಾರ್ಥನಾ ಗೀತೆ ಹಾಡಿದರು.

ಕುಮಾರಿ ಆರಾಧ್ಯ ಚಂದ್ರಮೌಳೇಶ್ವರ ಭಕ್ತಿ ಗೀತೆ ಪ್ರಸ್ತುತಪಡಿಸಿದರು.

ನವಲಿಂಗ ಪಾಟೀಲ ನಿರೂಪಿಸಿದರು.

## ಸಿರಿಧಾನ್ಯಗಳ ಸಾರ, ಜೀವನಕ್ಕೆ ಆಧಾರ ಸಿರಿಧಾನ್ಯಗಳ ಸಂಕ್ರಾಂತಿ ಕಾರ್ಯಕ್ರಮ



ಮಲ್ಲಮ್ಮ ನುಡಿ ವಾರ್ತೆಕೊಪ್ಪಳ :

ತಾಪಂ ಕೃಷಿ ಇಲಾಖೆ ಹಾಗೂ ಐ.ಸಿ.ಎ.ಆರ್ ಕೃಷಿ ವಿಜ್ಞಾನ ಕೇಂದ್ರ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಅಂತರಾಷ್ಟ್ರೀಯ ವಾಣಿಜ್ಯಮೇಳ 2026 ರ ಅಂಗವಾಗಿ ದಿನಾಂಕ: 18-12-2025 ರಂದು ಕೊಪ್ಪಳ ತಾಲೂಕಿನ ಪಂಚಾಯತ ಆವರಣದಲ್ಲಿರುವ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದಲ್ಲಿ ಜಿಲ್ಲಾ ಮಟ್ಟದ ಸಿರಿಧಾನ್ಯಗಳ ಸಂಕ್ರಾಂತಿ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆ ಯನ್ನು ಆಯೋಜಿಸಲಾಗಿತ್ತು.

ಸದರಿ ಸ್ಪರ್ಧೆಯಲ್ಲಿ ಕೊಪ್ಪಳ ತಾಲೂಕಿನ ಸಂಜೀವಿನಿ ಯೋಜನೆಯ ಮುನಿರಾಬಾದ್ ಗ್ರಾಮ ಪಂಚಾಯತ ಸ್ವಸಹಾಯ ಗುಂಪಿನ ಸದಸ್ಯರು ಹಾಗೂ ಬಿಸರಳ್ಳಿ ಗ್ರಾಮ ಪಂಚಾಯತಿಯ ಸ್ವಸಹಾಯ ಗುಂಪಿನ ಸದಸ್ಯರು ಭಾಗವಹಿಸಿ, ಸಿರಿಧಾನ್ಯಗಳಿಂದ ಉತ್ಕೃಷ್ಟ ಗುಣಮಟ್ಟದ ಸಿಹಿ ಮತ್ತು ಖಾರ ಖಾದ್ಯಗಳನ್ನು ತಯಾರಿಸಿ, ಮುನಿರಾಬಾದನ ಶ್ರೀಮತಿ ಹುಲಿಗೆಮ್ಮ ಕೃಷ್ಣಕಾಂತ ಇವರಿಗೆ ಪ್ರಥಮ ಸ್ಥಾನದ ಬಹುಮಾನ ಪಡೆದಿರುತ್ತಾರೆ.

ಮತ್ತು ಬಿಸರಳ್ಳಿಯ ಶ್ರೀಮತಿ ಕೊಟ್ರಮ್ಮ ಹಿಡಕಿಮಠ ರವರು ದ್ವಿತೀಯ ಸ್ಥಾನದ ಬಹುಮಾನ ಪಡೆದಿರುತ್ತಾರೆ.

ಸದರಿ ಸ್ಪರ್ಧೆಯಲ್ಲಿ ಭಾಗವಹಿಸಿ, ಪ್ರಶಸ್ತಿ ಪಡೆದುದ್ದಕ್ಕಾಗಿ ಇವರನ್ನು ಸಂಜೀವಿನಿ ಯೋಜನೆಯಿಂದ ಹೃತ್ಪೂರ್ವಕವಾಗಿ ಅಭಿನಂದಿಸಿದೆ.

# ಶಿಕ್ಷಣ ಪ್ರೇಮಿ ಮಾಣಿಕಪ್ಪಾ ಗಾದಾ ಇನ್ನಿಲ್ಲ

ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ್:

ಹುಮನಾಬಾದ್ ತಾಲೂಕಿನ ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆಯೊಂದಿಗೆ ದೀರ್ಘಕಾಲ ಗುರುತಿಸಿಕೊಂಡಿದ್ದ, ಶಿಕ್ಷಣ ಪ್ರೇಮಿ, ಅಜಾತಶತ್ರು ಎಂದು ಹೆಸರುಪಡೆದಿದ್ದ ಶ್ರೀ ಮಾಣಿಕಪ್ಪಾ ಗಾದಾ ರವರು ಗುರುವಾರ ನಿಧನರಾದರು.

ಶ್ರೀ ಮಾಣಿಕಪ್ಪಾ ಗಾದಾ ಅವರು ತಮ್ಮ ಸಂಪೂರ್ಣ ಜೀವನವನ್ನು ಶಿಕ್ಷಣ ಕ್ಷೇತ್ರದ ಅಭಿವೃದ್ಧಿಗೆ ಸಮರ್ಪಿಸಿಕೊಂಡ ಮಹನೀಯರು. ಗ್ರಾಮೀಣ ಭಾಗದ ಮಕ್ಕಳಿಗೂ ಗುಣಮಟ್ಟದ ಶಿಕ್ಷಣ ಸಿಗಬೇಕು ಎಂಬ ಉದ್ದೇಶದಿಂದ ಅವರು ಶಿಕ್ಷಣ ಸಂಸ್ಥೆಗಳ ಬಲವರ್ಧನೆಗೆ ಶ್ರಮಿಸಿದರು. ಅವರ ಸೇವಾ ಮನೋಭಾವದಿಂದ ಸಾವಿರಾರು ವಿದ್ಯಾರ್ಥಿಗಳ ಬದುಕು ಬೆಳಕಿನ ದಾರಿಗೆ ಬಂದಿತು.



ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆಯ ಬೆಳವಣಿಗೆಯಲ್ಲಿ ಅವರ ಪಾತ್ರ ಮಹತ್ವದಾಗಿದ್ದು, ಶಿಕ್ಷಣದ ಜೊತೆಗೆ ಶಿಸ್ತು, ಮೌಲ್ಯಗಳು ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವತ್ತ ಅವರು ವಿಶೇಷ ಗಮನ ಹರಿಸುತ್ತಿದ್ದರು.ಸರಳಜೀವನ, ಸೌಮ್ಯ ನಡತೆ ಹಾಗೂ ಎಲ್ಲರೊಂದಿಗೆ ಆತ್ಮೀಯವಾಗಿ ನಡೆದುಕೊಳ್ಳುವ ಗುಣಗಳಿಂದ ಅವರು "ಅಜಾತಶತ್ರು" ಎಂಬ ಗೌರವಕ್ಕೆ ಪಾತ್ರರಾಗಿದ್ದರು.

ಅವರ ನಿಧನಕ್ಕೆ ಶಿಕ್ಷಣ ವಲಯ, ಸಾರ್ವಜನಿಕರು ಹಾಗೂ ಶಿಷ್ಯವೃಂದದಲ್ಲಿ ತೀವ್ರ ಸಂತಾಪ ವ್ಯಕ್ತವಾಗಿದ್ದು, ಅನೇಕ ಗಣ್ಯರು ಹಾಗೂ ಶಿಕ್ಷಣ ಪ್ರೇಮಿಗಳು ಶ್ರದ್ಧಾಂಜಲಿ ಸಲ್ಲಿಸಿದ್ದಾರೆ. ಮಾಣಿಕಪ್ಪಾ ಗಾದಾ ರವರ ಅಗಲಿಕೆ ಹುಮನಾಬಾದ್ ಭಾಗದ ಶಿಕ್ಷಣ ಕ್ಷೇತ್ರಕ್ಕೆ ತುಂಬಲಾರದ ನಷ್ಟ ಎಂದು ಸಾರ್ವಜನಿಕರು ಅಭಿಪ್ರಾಯಪಟ್ಟಿದ್ದಾರೆ.

### ಮಾಣಿಕಪ್ಪಾ ಗಾದಾ – ಬಸವರಾಜ ಪಾಟೀಲರ ನಡುವಿನ ಸಂಬಂಧ



ಶ್ರೀ ಮಾಣಿಕಪ್ಪಾ ಗಾದಾ ಅವರು ಶಿಕ್ಷಣ ಪ್ರೇಮಿ, ಸಮಾಜಮುಖಿ ಚಿಂತನೆಯ ಹಿರಿಯರು ಆಗಿದ್ದು,ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆ, ಹುಮನಾಬಾದ್ ಮೂಲಕ ಅನೇಕ ವಿದ್ಯಾರ್ಥಿಗಳ ಭವಿಷ್ಯಕ್ಕೆ ದಿಕ್ಕು ನೀಡಿದವರು.ಶ್ರೀ ಬಸವರಾಜ ಪಾಟೀಲ ಅವರು ಕೂಡಾ ಶಿಕ್ಷಣ, ಸಾಮಾಜಿಕ ಅಭಿವೃದ್ಧಿ ಹಾಗೂ ಸಾರ್ವಜನಿಕ ಜೀವನದಲ್ಲಿ ಸಕ್ರಿಯ ವ್ಯಕ್ತಿಯಾಗಿ ಗುರುತಿಸಿಕೊಂಡಿದ್ದಾರೆ.

* **ಇವರಿಬ್ಬರ ನಡುವಿನ ಸಂಬಂಧ** ರಕ್ತ ಸಂಬಂಧಕ್ಕಿಂತಲೂ ಮೀರಿದ, ಪರಸ್ಪರ ಗೌರವ, ವಿಶ್ವಾಸ ಮತ್ತು ಶಿಕ್ಷಣ ಕ್ಷೇತ್ರದ ಸಹಕಾರದ ಸಂಬಂಧವಾಗಿತ್ತು.

* **ಶಿಕ್ಷಣ ಕ್ಷೇತ್ರದಲ್ಲಿ ಸಹಯೋಗ:** ಮಾಣಿಕಪ್ಪಾ ಗಾದಾ ಅವರ ಶಿಕ್ಷಣದ ಕನಸುಗಳನ್ನು ಸಾಕಾರಗೊಳಿಸಲು ಬಸವರಾಜ ಪಾಟೀಲರು ಸದಾ ಬೆಂಬಲವಾಗಿ ನಿಂತಿದ್ದರು.

* **ಪರಸ್ಪರ ಗೌರವ:** ಹಿರಿಯ-ಕಿರಿಯ ಭೇದವಿಲ್ಲದೆ, ಪರಸ್ಪರ ಅಭಿಪ್ರಾಯಗಳಿಗೆ ಗೌರವ ನೀಡುವ ಆತ್ಮೀಯ ಸಂಬಂಧ ಇತ್ತು.

* **ಸಾಮಾಜಿಕ ವಿಚಾರಗಳಲ್ಲಿ ಏಕಮನಸ್ಕತೆ:** ಸಮಾಜದ ಹಿತ, ವಿದ್ಯಾರ್ಥಿಗಳ ಭವಿಷ್ಯ, ಗ್ರಾಮೀಣ ಭಾಗದ ಅಭಿವೃದ್ಧಿ ವಿಷಯಗಳಲ್ಲಿ ಇಬ್ಬರೂ ಒಂದೇ ಮನೋಭಾವ ಹೊಂದಿದ್ದರು.

* **ಮಾರ್ಗದರ್ಶನ ಮತ್ತು ಸಹಕಾರ:** ಮಾಣಿಕಪ್ಪಾ ಗಾದಾ ಅವರು ಹಿರಿಯರಾಗಿ ನೀಡಿದ ಅನುಭವಾಧಾರಿತ ಸಲಹೆಗಳಿಗೆ ಬಸವರಾಜ ಪಾಟೀಲರು ಸದಾ ಮೌಲ್ಯ ನೀಡುತ್ತಿದ್ದರು.

* **ಒಟ್ಟಾರೆ:** * ಮಾಣಿಕಪ್ಪಾ ಗಾದಾ ಹಾಗೂ ಬಸವರಾಜ ಪಾಟೀಲರ ಸಂಬಂಧ ಒಂದು ಶುದ್ಧ, ನಿಸ್ವಾರ್ಥ, ಶಿಕ್ಷಣ ಮತ್ತು ಸಮಾಜ ಸೇವೆಗೆ ಅರ್ಪಿತವಾದ ಆತ್ಮೀಯ ಬಂಧವಾಗಿದ್ದು, ಹುಮನಾಬಾದ್‌ನ ಶೈಕ್ಷಣಿಕ ವಲಯದಲ್ಲಿ ಇದು ಆದರ್ಶ ಸಂಬಂಧವಾಗಿ ಗುರುತಿಸಿಕೊಂಡಿದೆ.

## ಕಾಂಗ್ರೇಸ್ ಕಾರ್ಯಕರ್ತರಿಂದ ಬಿಜೆಪಿ ಕಚೇರಿ ಮುತ್ತಿಗೆ



ಮಲ್ಲಮ್ಮ ನುಡಿ ವಾರ್ತೆಕೊಪ್ಪಳ : ನ್ಯಾಷನಲ್ ಹೆರಾಲ್ಡ್ ಆಂಗ್ಲ ಪತ್ರಿಕೆ ಸುಳ್ಳು ಪ್ರಕರಣದಲ್ಲಿ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ವರಿಷ್ಠರಾದ ಸೋನಿಯಾ ಗಾಂಧಿಯವರನ್ನು ಸಿಲುಕಿಸಿ, ಅವರಿಗೆ ಅನಾವಶ್ಯಕವಾಗಿ ಕೇಂದ್ರ ತನಿಖಾ ಸಂಸ್ಥೆಗಳ ದುರುಪಯೋಗ ಪಡಿಸಿಕೊಳ್ಳುವ ಮೂಲಕ ನಿರಂತರ ಕಿರುಕುಳ ನೀಡಲಾಗುತ್ತಿದೆ ಎಂದು ಆರೋಪಿಸಿ ಕಾಂಗ್ರೆಸ್ ಕಾರ್ಯಕರ್ತರು ಕೊಪ್ಪಳದ ಬಿಜೆಪಿ ಜಿಲ್ಲಾ ಕಚೇರಿಯನ್ನು ಮುತ್ತಿಗೆ ಹಾಕಿ ಪ್ರತಿಭಟಿಸಿದರು.

ಜಿಲ್ಲಾ ಕಾಂಗ್ರೆಸ್ ಪಕ್ಷದ ಕಚೇರಿಯಿಂದ ಕಾಲ್ನಡಿಗೆಯಲ್ಲಿ ಬಂದರು, ದಾರಿಯುದ್ದಕ್ಕೂ ಬಿಜೆಪಿ, ಮೋದಿ ಶಾ ವಿರುದ್ಧ ಘೋಷಣೆ ಕೂಗಿದರು. ನಗರದಲ್ಲಿರುವ ಕಚೇರಿಗೆ ಮುತ್ತಿಗೆ ಹಾಕಿದ ಕಾಂಗ್ರೇಸ್ ಕಾರ್ಯಕರ್ತನ್ನು ಪೊಲೀಸರು ತಡೆದು ನಿಲ್ಲಿಸಿದರು. ಇದರಿಂದ ಕಾರ್ಯಕರ್ತರು ಬಿಜೆಪಿ ಕಚೇ-ರಿಯ ಮುಂದೆ ಪ್ರತಿಭಟಿಸಿ ಬಿಜೆಪಿ ವಿರುದ್ಧ ಧಿಕ್ಕಾರ ಕೂಗಿ ಪ್ರತಿಭಟಿಸಿದರು. ಇದರ ಬಗ್ಗೆ ಮಾಹಿತಿ ಇದ್ದ ಕಾರಣ ಬಿಜೆಪಿ ಕಚೇರಿಗೆ ಬೀಗ ಹಾಕಲಾಗಿತ್ತು.

ಈ ಸಂದರ್ಭದಲ್ಲಿ ಮಾಜಿ ಜಿ. ಪಂ. ಉಪಾಧ್ಯಕ್ಷ ಯಂಕಣ್ಣ ಯರಾಶಿ ಕೊಪ್ಪಳ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿಗಳಾದ ಕೃಷ್ಣಾ ಇಟ್ಟಂಗಿ ಮತ್ತು ಅಕ್ಬರ್ ಪಾಶಾ, ಹನುಮಂತಗೌಡ ಚಂಡೂರು, ಸೋಮಲಿಂಗಪ್ಪ ಹುಡೇದ,

ಕಾಂಗ್ರೆಸ್ ವಕ್ತಾರೆ ಶೈಲಾಜಾ ಹಿರೇಮಠ್,

ಜಿಲ್ಲಾ ಗ್ಯಾರಂಟಿ ಅನುಷ್ಠಾನ ಪ್ರಾಧಿಕಾರ ಉಪಾಧ್ಯಕ್ಷ ಮಂಜುನಾಥ ಜಿ. ಗೊಂಡಬಾಳ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಕೃಷ್ಣಾ ಗಲಿಬಿ ಮತ್ತು ಶಾಮೀದ್ ಮನಿಯಾರ್, ಮಾಜಿ ಜಿ.ಪಂ. ಸದಸ್ಯ ಪ್ರಸನ್ನ ಗಡಾದ, ಮುತ್ತುರಾಜ್ ಕುಷ್ಟಗಿ, ಗಾಳೆಪ್ಪ ಪೂಜಾರ್, ಗುರುರಾಜ ಹಲಗೇರಿ, ಕಿಶೋರಿ ಬೂದನೂರು, ಮಲ್ಲು ಪೂಜಾರ್, ಸುರೇಶ ದಾಸರಡ್ಡಿ, ಗವಿಸಿದ್ದನಗೌಡ ಪಾಟೀಲ್, ಚಾಂದಪಾಶಾ ಕಿಲ್ಲೆದಾರ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

## ಸದನದಲ್ಲಿ ಶಾಸಕ ಕಂದಕೂರ ನೇರ ಆರೋಪ.



**ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ದುಡ್ಡಿನ ರೇಟ್ ಬೋರ್ಡ್ ಇಟ್ಟುಕೊಂಡಿದ್ದಾರೆ.**

**ಅಲ್ಲಿನ ಅವ್ಯವಹಾರಗಳಿಗೆ ನಾನು ಹೊಣೆ ಅಲ್ಲ: ಗೃಹ ಸಚಿವರಿಗೆ ಸ್ಪಷ್ಟನೆ**

ಮಲ್ಲಮ್ಮನುಡಿವಾರ್ತೆ ಯಾದಗಿರಿ:

ನನ್ನ ಗುರುಮಠಕಲ್ ಮತಕ್ಷೇತ್ರದಲ್ಲಿ ನಡೆಯುತ್ತಿರುವ ಅವ್ಯವಹಾರಗಳಿಗೆ ನಾನು ಹೊಣೆಗಾರನಲ್ಲ.ಅದೇನೇ ಇದ್ದರೂ ಗುರುಮಠಕಲ್ ಪೊಲೀಸ್ ಠಾಣೆಯ ಸರ್ಕಲ್ ಇನ್ಸೆಕ್ಟರ್ ಮತ್ತು ಯಾದಗಿರಿ ಗ್ರಾಮೀಣ ಪೊಲೀಸ್ ಠಾಣೆ ಪೊಲೀಸ್ ಅಧಿಕಾರಿಗಳೇ ನೇರ ಹೊಣೆ ಎಂದು ಶಾಸಕ ಶರಣಗೌಡ ಕಂದಕೂರ ಹೇಳಿದರು ಬುಧವಾರ ಸದನದಲ್ಲಿ ಮಾತನಾಡಿ,ಗೃಹ ಸಚಿವರಿಗೆ ಮತ್ತು ನನ್ನ ಮತಕ್ಷೇತ್ರದ ಜನತೆಗೆ ಈ ಸ್ಪಷ್ಟನೆ ನೀಡುವುದಾರೇ ಗುರುಮಠಕಲ್ ಪೊಲೀಸ್ ಠಾಣೆಯಲ್ಲಿ ದುಡ್ಡಿನ ರೇಟ್ ಬೋರ್ಡೇ ( ಔಟ್ ಲೇಟ್ ಬೋರ್ಡ್) ಇಟ್ಟುಕೊಂಡು ವ್ಯವಹಾರ ಮಾಡುತ್ತಿದ್ದಾರೆ. ಈ ಬಗ್ಗೆ ಯಾದಗಿರಿ ಎಸ್ ಪಿ ಅವರಿಗೆ ಹೇಳಿದರೂ ಅವರು ಅಸಹಾಯಕರಾಗಿದ್ದಾರೆ.ಆರಂಭದ ಆರು ತಿಂಗಳು ಎಲ್ಲವೂ ಟೈಟ್ ಇಟ್ಟಿದ್ದರು. ಎಲ್ಲಿ ವರ್ಗವಾಗುತ್ತದೆ ಎಂಬ ಕಾರಣ-ಕ್ಕೆ ಅವರಿಂದಲ್ಲೂ ಏನು ಮಾಡಲು ಆಗುತ್ತಿಲ್ಲ. ಅದಕ್ಕೆ ನೇರವಾಗಿ ಈ ಸದನ ಮೂಲಕ ಸರ್ಕಾರ, ಗೃಹ ಸಚಿವರ ಗಮನಕ್ಕೆ ತರುತ್ತಿದ್ದೆನೆಂದು ಕಂದಕೂರ ಹೇಳಿದರು.

## ಬೀದಿ ನಾಯಿಗಳ ಪಾಲನೆ ಮತ್ತು ಪೋಷಣೆ: ಸಂರಕ್ಷಣೆಗೆ ದರಪಟ್ಟಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ: ಜಿಲ್ಲೆಯ ಅಫಜಲಪೂರ, ಜೇವರ್ಗಿ, ಚಿಂಚೋಳಿ ಹಾಗೂ ಚಿತ್ತಾಪುರ ತಾಲೂಕಿನ ವಾಡಿ(ಜಂ) ಪುರಸಭೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಪಾಲನೆ ಮತ್ತು ಪ್ರಾಣಿ ಸಂರಕ್ಷಣಾ ಸೇವೆಗಳನ್ನು ನೀಡಲು ಅನುಭವ ಹೊಂದಿರುವ ಅರ್ಹ ಸರ್ಕಾರೇತರ ಸಂಸ್ಥೆಗಳಿಂದ ಮುಚ್ಚಿದ ಲಕೋಟೆಯಲ್ಲಿ ದರಪಟ್ಟಿ ಅಹ್ವಾನಿಸಲಾಗಿದೆ.

ಬೀದಿ ನಾಯಿಗಳಿಗೆ ಪ್ರತಿನಿತ್ಯ ಆಹಾರ ಮತ್ತು ನೀರು ಪೂರೈಕೆ, ಬೀದಿ ನಾಯಿಗಳ ಲಸಿಕೆ, ನಿಯಮಿತ ಆರೋಗ್ಯ ಪರಿಶೀಲನೆ ಮತ್ತು ಪ್ರಾಥಮಿಕ ಚಿಕಿತ್ಸಾ ವ್ಯವಸ್ಥೆ, ಎ.ಬಿ.ಸಿ ನಿಯಮಾವಳಿಗಳ ಪ್ರಕಾರ ಸಂತಾನಹರಣ ಶಸ್ತ್ರಚಿಕಿತ್ಸೆಯ ಕಾರ್ಯಕ್ಕೆ ಸಮನ್ವಯತೆ ಸಾಧಿಸುವುದು, ಆಶ್ರಯ ಕೇಂದ್ರದ ನಿರ್ವಹಣೆ ಹಾಗೂ ದಾಖಲಾತಿ ಸಂರಕ್ಷಿಸಿ ಪುರಸಭೆಯ ಆರೋಗ್ಯ ವಿಭಾಗಕ್ಕೆ ದೈನಂದಿನ ವರದಿ ನೀಡುವುದು ಸೇವಾ ಕಾರ್ಯ ವ್ಯಾಪ್ತಿ ಹೊಂದಿದೆ.ಪ್ರಾಣಿ ಪಾಲನೆ ಮತ್ತು ಎ.ಬಿ.ಸಿ. ಕಾರ್ಯಕ್ರಮಗಳಲ್ಲಿ ಕನಿಷ್ಠ ವರ್ಷದ ಅನುಭವ ಹೊಂದಿರುವ ಭಾರತೀಯ ಪ್ರಾಣಿ ಕಲ್ಯಾಣ ಮಂಡಳಿಯಿಂದ ಪ್ರಮಾಣಪತ್ರ ಹೊಂದಿರುವ ನೋಂದಾಯಿತ ಸರ್ಕಾರೇತ ಸಂಸ್ಥೆಗಳು ಅಫಜಲಪೂರ, ಚಿಂಚೋಳಿ ಹಾಗೂ ವಾಡಿ(ಜಂ) ಪುರಸಭೆಯ ಮುಖ್ಯಾಧಿಕಾರಿಗಳ ಕಚೇರಿಗೆ ಈ ಪ್ರಕಟಣೆ ಹೊರಡಿಸಿದ 15 ದಿನದೊಳಗೆ ಮತ್ತು ಜೇವರ್ಗಿ ಪುರಸಭೆ ಕಚೇರಿಗೆ ಡಿ.31 ರೊಳಗೆ ದರಪಟ್ಟಿಯನ್ನು ಸಲ್ಲಿಸಬೇಕೆಂದು ಆಯಾ ಪುರಸಭೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಹಿರಿತನದ ಅಧಾರದ ಮೇಲೆ ಹುದ್ದೆಗೆ ನೇಮಕ ಮಾಡಿ: ಕೆ.ಎಸ್.ನಾಡಗೌಡ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಕೆಲವು ತಿಂಗಳುಗಳಿಂದೆ ಕಂಪ್ಯೂಟರ್ ಅಪರೇಟರ್ ಎಂದು ತೆಗೆದುಕೊಂಡಿದ್ದವರಿಗೆ ಮುಖ್ಯ ಕಾರ್ಯನಿರ್ವಾಹಕ ಹುದ್ದೆಗೆ ನೇಮಕ ಮಾಡಿದ ಆದೇಶವನ್ನು ಕೂಡಲೇ ರದ್ದು ಮಾಡಿ, ಹದಿಮೂರು ವರ್ಷಗಳಿಂದ ಕೆಲಸ ಮಾಡುವವರಿಗೆ ಹಿರಿತನದ ಅಧಾರದ ಮೇಲೆ ಮುಖ್ಯ ಕಾರ್ಯನಿರ್ವಾಹಕ ಹುದ್ದೆಗೆ ನೇಮಕ ಮಾಡುವಂತೆ ರಾಯಚೂರಿನ ಸಹಕಾರ ಸಂಘದ ಉಪ ನಿಬಂಧಕರಿಗೆ ಜಾಲಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷರು ಹಾಗೂ ಮಾಜಿ ನಿರ್ದೇಶಕರು ಮನವಿ ಸಲ್ಲಿಸಿ ಒತ್ತಾಯಿಸಿದರು.

ಈ ವೇಳೆ ಜಾಲಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ಅಧ್ಯಕ್ಷರಾದ ಕೆ.ಎಸ್.ನಾಡಗೌಡ ಅವರು ಮಾತನಾಡಿ, ಜಾಲಹಳ್ಳಿ ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದಲ್ಲಿ ಶರಣಬಸವ ತಂದೆ ಶಿವಣ್ಣ ಹಂಪರಗುಂದಿ ಇವರು ಗುಮಾಸ್ತನಾಗಿ ನೇಮಕಗೊಂಡು ಸುಮಾರು 13 ವರ್ಷಗಳಿಂದ ಕೇವಲ 3 ಸಾವಿರ ರೂ. ಹಣ ಸಂಭಾವನೆಗೆ ದುಡಿಯುತ್ತಾ ಬಂದಿದ್ದಾನೆ. ಪ್ರಭಾರಿ ಕಾರ್ಯದರ್ಶಿಯಾಗಿದ್ದ ರವಿಕುಮಾರ ಕೋರಿ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಆಡಳಿತಾಧಿಕಾರಿಗಳು ಸಹಕಾರ ಇಲಾಖೆಯ ಕಾನೂನಿನಂತೆ ಹಿರಿತನದ ಆದರದ ಮೇಲೆ ಶರಣಬಸವ ತಂದೆ ಶಿವಣ್ಣ ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯನ್ನಾಗಿ ಆದೇಶ ನೀಡಿದ್ದರು. ಆದರೆ ಉದ್ದೇಶ ಪೂರ್ವಕವಾಗಿ ಸೂಪರ್ವೈಸರ್ ಮಹೀಬೂಬ್



ಅವರನ್ನು ತೆಗೆದುಕೊಳ್ಳುವ ಸಲುವಾಗಿ ರಾಯಚೂರಿನ ಆರ್.ಡಿ.ಸಿ.ಸಿ ಬ್ಯಾಂಕ್ ಅಧಿಕಾರಿಗಳಿಂದ ಪತ್ರ ಬರೆದು ಶರಣಬಸವ ತಂದೆ ಶಿವಣ್ಣ ಅವರ ಆದೇಶವನ್ನು ರದ್ದು ಮಾಡಲಾಗಿದೆ ಎಂದರು.

ಕೇವಲ ಒಂದು ವರ್ಷದ ಹಿಂದೆ ಕಂಪ್ಯೂಟರ್ ಆಪರೇಟರ್ ಎಂದು ತೆಗೆದು ಕೊಂಡವರಿಗೆ ಕಾನೂನನ್ನು ಗಾಳಿಗೆತೂರಿ ಮುಖ್ಯ ಕಾರ್ಯನಿರ್ವಾಹಕ ಹುದ್ದೆಗೆ ನೇಮಕ ಆದೇಶ ನೀಡಿದ್ದಾರೆ. ಇದರಿಂದ 13 ವರ್ಷಗಳಿಂದ ಕೆಲಸ ಮಾಡುತ್ತಿದ್ದವರಿಗೆ ಅನ್ಯಾಯ ಮಾಡಲಾಗಿದೆ. ಶರಣಬಸವ ಪದವಿದರರಾಗಿದ್ದು, ಅವರು ಸಹಕಾರ ಇಲಾಖೆ ನೀಡುವ ತರಬೇತಿಯನ್ನು ಸಹ ಪಡೆದು ಉತ್ತೀರ್ಣನಾಗಿದ್ದಾನೆ. ಅಲ್ಲದೆ ಶರಣಬಸವ ಅವರು ಕಡು ಬಡವನ್ನಾಗಿರ್ದ್ದೇನೆ. ಶರಣಬಸವ ತಂದೆ ಶಿವಣ್ಣ ಇವರಿಗೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯನ್ನಾಗಿ ಮುಂದುವಸಬೇಕು. ಒಂದು ವೇಳೆ ಮುಂದು ವರ್ಷದಿದ್ದರೆ ಜಾಲಹಳ್ಳಿ ಕೃಷಿ ದಿನ ಸಹಕಾರ ಸಂಘದ ಮುಂದೆ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗುವುದು. ಅಲ್ಲದೆ ಮುಂದೆ ಆಗುವ ಅನಾಹುತಗಳಿಗೆ ಅಧಿಕಾರಿಗಳೇ ಆಗುತ್ತಾರೆ ಎಂದು ಅವರು ಹೇಳಿದರು.

25-09-2025 ರಂದು ಶರಣಬಸವ ಇವರನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಯನ್ನಾಗಿ ನೇಮಿಸುವಂತೆ ಸರ್ವಾನುಮತಿಯಿಂದ ತೀರ್ಮಾನ ಕೈಗೊಂಡರು ವೃತ್ತ ವೀಕ್ಷಕರು ಸಭೆಯ ನಡುವಳಿಕೆ ಪುಸ್ತಕದಲ್ಲಿ ಬರೆಯದೆ ಸಭೆಯಿಂದ ಪಲಾಯನ ಮಾಡಿದರು. ಹೀಗೆ ಉದ್ದೇಶ ಪೂರ್ವಕವಾಗಿ ಯಾವುದೇ ಒತ್ತಡಕ್ಕೆ ಮಣಿದು ಕಾನೂನು ಬಾಹಿರವಾಗಿ ಆದೇಶ ಮಾಡಿದ್ದಾರೆ. ಅವರ ಅವ್ಯವಹಾರಗಳು ರುಜುವಾಗಿದ್ದು, ಅಡಿಟ್ ವರದಿಯಲ್ಲಿ ಹಣ ಕಟ್ಟುವಂತೆ ಆದೇಶವಾಗಿದೆ. ಅವರನ್ನು ರಕ್ಷಿಸಲು ಯಾವುದೇ ಅನುಭವ ಇಲ್ಲದವರಿಗೆ ಆದೇಶ ನೀಡಿದ್ದಾರೆ. ತಕ್ಷಣ ಈ ಆದೇಶ ಹಿಂಪಡೆದು ಸೇವಾ ಹಿರಿತನದ ಅದರದ ಮೇಲೆ ಶರಣಬಸವನಿಗೆ ಆದೇಶ ನೀಡಬೇಕು. ಇಲ್ಲದಿದ್ದರೆ ತಮ್ಮ ಕಾನೂನುಬಾಹಿರ ನಿರ್ಧಾರದ ವಿರುದ್ಧ ಹೋರಾಟ ಮಾಡಲಾಗುವುದು. ಅಲ್ಲದೆ ಕಾನೂನು ಹೋರಾಟಕ್ಕಾಗಿ ನ್ಯಾಯಲಯದಲ್ಲಿ ಹೋರಾಟ ಮಾಡಲಾಗುವುದು ತಾವು ಅದಕ್ಕೆ ಅವಕಾಶ ನೀಡದೆ ಸೂಕ್ತ ತೀರ್ಮಾನ ಕೈಗೊಳ್ಳಬೇಕು ಎಂದರು. ಇದೇ ಸಂದರ್ಭದಲ್ಲಿ ಜಾಲಹಳ್ಳಿ ಕೃಷಿ ಪತ್ತಿನ ಸಹಕಾರ ಸಂಘದ ಮಾಜಿ ನಿರ್ದೇಶಕರಾದ ಬಸನಗೌಡ ಸಿದ್ನಕಲ್, ಚನ್ನಮ್ಮ ಇರಗಂಡ, ಯಕಂಪ್ಪ ಯರಕಮಟ್ಟಿ, ಡಿಎಸ್.ಎಸ್. ಸಂಘಟನೆಯ ಮುಖಂಡರಾದ ಎನ್.ಲಿಂಗಪ್ಪ, ಅಮರೇಶ ಚಲವಾಧಿ, ರಾಚಪ್ಪ ಸೌದ್ರಿ, ಸಾಬಣ್ಣ ರಾಂಪಳಿ, ಶಿವಣ್ಣ ಹಂಪರಗುಂದಿ, ಬಸವರಾಜ ಅಯ್ಯಾಳ, ಬಸವರಾಜ ದೊಡ್ಡಳಿ, ರಂಗಪ್ಪ ಜಂಪಿ ಸೇರಿದಂತೆ ಇತರರು ಇದ್ದರು.

## ಅಮರಶಿಲ್ಪಿ ಜಕಣಾಚಾರಿ ದಿನಾಚರಣೆ: ಪೂರ್ವಭಾವಿ ಸಿದ್ಧತಾ ಸಭೆ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆಯು ಅರ್ಥಪೂರ್ಣವಾಗಿ ನಡೆಯಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಡಿಸೆಂಬರ್ 17ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಪೂರ್ವಭಾವಿ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ 2026ರ ಜನವರಿ 3ರ ಬೆಳಗ್ಗೆ 11:30ಕ್ಕೆ ದಿನಾಚರಣೆ ನಿಗದಿಯಾಗಿದೆ. ಅಂದು 9 ಗಂಟೆಗೆ ನಗರದ ಬೇರೂನ್ ಕಿಲ್ಲಾದ ಶ್ರೀ ಕಾಳಿಕಾದೇವಿ ದೇವಸ್ಥಾನದಿಂದ ರಂಗಮಂದಿರದವರೆಗೂ ಮೆರವಣಿಗೆ ನಡೆಯಲಿದೆ.

ಶಿಷ್ಟಾಚಾರದಂತೆ ಕಾರ್ಯಕ್ರಮ ನಡೆಯಬೇಕು. ಕಾರ್ಯಕ್ರಮದ ಸ್ಥಳದಲ್ಲಿ ಸ್ವಚ್ಛತೆ, ತಳಿರು ತೋರಣ, ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು ಎಂದು ಅವರು ಸೂಚನೆ ನೀಡಿದರು.

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಈರಣ್ಣ ಬಡಿಗೇರ, ಸಮಾಜದ ಮುಖಂಡರಾದ ಬ್ರಹ್ಮ ಗಣೇಶ್ ವಕೀಲರು, ಕೆ.ರಾಮು ಗಾಣಧಾಳ, ಗಿರೀಶ್ ಆಚಾರಿ, ಡಾ.ವೆಂಕಟೇಶ್ ಅನ್ವರಿ, ಹಿರಿಯ ಪತ್ರಕರ್ತರಾದ ಮಾರುತಿ ಬಡಿಗೇರ, ಬ್ರಹ್ಮಯ್ಯ, ನಾಗರಾಜ ಪತ್ತಾರ, ಕೆ.ನರಸಪ್ಪ, ರಾಮುಲು, ಸುರೇಶ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಸಂಘಟನೆಗಳ ಮುಖಂಡರು ಸಭೆಯಲ್ಲಿ ಇದ್ದರು.

## ಧರ್ಮಸ್ಥಳ ಕ್ಷೇತ್ರದಿಂದ ವಿವಿಧ ಸಮಾಜಮುಖಿ ಕಾರ್ಯ: ಅಲೂರ



**ಮಲ್ಲಮ್ಮ ನುಡಿ ವಾರ್ತೆ ವಿಜಯಪುರ :**

ಶ್ರೀಕ್ಷೇತ್ರಧರ್ಮಸ್ಥಳಗ್ರಾಮಾಭಿವೃದ್ಧಿ ಸಂಸ್ಥೆಯು ಸಮಾಜಮುಖಿ ಕಾರ್ಯಗಳನ್ನು ಮಾಡುವ ಮೂಲಕ ಸೇವೆ ಸಲ್ಲಿಸುತ್ತಿದೆ ಎಂದು ಯೋಗ ಶಿಕ್ಷಕರು ಮತ್ತು ನಿವೃತ್ತ ಎಲ್.ಆಯ್.ಸಿ ಅಧಿಕಾರಿಗಳಾದ ಬಸವರಾಜ ಆಲೂರ ಹೇಳಿದರು.

ನಗರದ ಗ್ಯಾಂಗ್ ಬಾವಡಿಯ ದೊಡಮನಿ ಫಂಕ್ಷನ್ ಹಾಲನಲ್ಲಿ ಬುಧವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವಿಜಯಪುರ 2 ತಾಲ್ಲೂಕಿನ ವತಿಯಿಂದ ಆಯೋಜಿಸಿದ್ದ ಸಾಮೂಹಿಕ ಶ್ರೀ ವರ ಮಹಾಲಕ್ಷ್ಮಿ ಪೂಜೆ ಹಾಗೂ ಧಾರ್ಮಿಕ ಸಭೆಯನ್ನು ದೀಪ ಬೆಳಗಿಸುವುದರ ಮೂಲಕ

ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಧರ್ಮಾಧಿಕಾರಿ ಡಿ.ವೀರೇಂದ್ರ ಹೆಗ್ಗಡೆ ಅವರು ಮಹಿಳಾ ಸಬಲೀಕರಣ, ಗ್ರಾಮೀಣ ಅಭಿವೃದ್ಧಿಗೆ ಯೋಜನೆಗಳನ್ನು ನೀಡಿ ಸಮಾಜ ಸೇವೆ ಮಾಡುತ್ತಿದ್ದಾರೆ ಎಂದರು. ಯೋಜನೆಯ ವಿಜಯಪುರ ಜಿಲ್ಲಾ ನಿರ್ದೇಶಕರಾದ ಸಂತೋಷ ಕುಮಾರ ಮಾತನಾಡಿ, 'ದೇವರ ಆರಾಧನೆಯೊಂದಿಗೆ ನಾವು ಒಳ್ಳೆಯ ಗುಣಗಳನ್ನು ಅಳವಡಿಸಿಕೊಳ್ಳಬೇಕು. ಗ್ರಾಮಾಭಿವೃದ್ಧಿ ಸಂಸ್ಥೆ ರಾಜ್ಯದ ಸುಮಾರು ಎಪ್ಪತ್ತೈದು ಸಾವಿರ ಶಾಲೆಗಳಿಗೆ ಪೀಠೋಪಕರಣ, ಹೈನುಗಾರಿಕೆಯನ್ನು ಉತ್ತೇಜಿಸಲು 5 ಸಾವಿರ ಹಾಲಿನ ಉತ್ಪಾದಕರ ಸಹಕಾರ ಸಂಘಗಳಿಗೆ ಕಟ್ಟಡ ನಿರ್ಮಾಣಕ್ಕೆ ಧನ ಸಹಾಯ ಹಸ್ತಾಂತರ ಮಾಡಲಾಗಿದೆ. ಸಾವಿರಕ್ಕೂ ಹೆಚ್ಚು ಕೆರೆಗಳ ಅಭಿವೃದ್ಧಿ, ಸ್ವಸಹಾಯ ಸಂಘದ ಸದಸ್ಯರ ಮಕ್ಕಳ ವಿದ್ಯಾಭ್ಯಾಸಕ್ಕೆ ವಿದ್ಯಾರ್ಥಿ ವೇತನ , ಆರೋಗ್ಯ ರಕ್ಷಣೆಗೆ ವಿಶೇಷ ವಿಮಾ ಯೋಜನೆಗಳನ್ನು ನೀಡಿದೆ ಎಂದರು. ನಗರದಲ್ಲಿ ಆಯೋಜಿಸಿದ ಧಾರ್ಮಿಕ ಸಭೆಯಲ್ಲಿ ವರಮಹಾಲಕ್ಷ್ಮಿ ದೇವಿ ಮೂರ್ತಿಯನ್ನು ಪ್ರತಿಷ್ಠಾಪನೆ ಮಾಡಲಾಗಿತ್ತು. ಮಂಜುನಾಥ ಸ್ವಾಮಿ ಭಾವಚಿತ್ರವನ್ನು ಇರಿಸಿ ಪೂಜೆ ಸಲ್ಲಿಸಿ ಭಕ್ತರಿಗೆ ಪ್ರಸಾದ ನೀಡಲಾಯಿತು.

ಈ ಕಾರ್ಯಕ್ರಮದಲ್ಲಿ ದಿವ್ಯ ಸಾನಿಧ್ಯವನ್ನು ಪೂಜೆ ಶ್ರೀ ಬಸವಲಿಂಗಯ್ಯ ಸ್ವಾಮಿಗಳು ವಹಿಸಿದರು. ಅಧ್ಯಕ್ಷತೆಯನ್ನು ಉಮೇಶ ವಂದಾಲ ವಹಿಸಿದರು, ಮುಖ್ಯ ಅತಿಥಿಗಳಾಗಿ ಜಿಲ್ಲೆಯ ನಿರ್ದೇಶಕರಾದ ಸಂತೋಷಕಮಾರ, ಅರ್ಜುನ ಕೌಟೆಕರ, ಮಹೇಶ ಒಡೆಯರ್, ಶ್ರೀಕಾಂತ ಜಳಕೆ, ವಿಶ್ವನಾಥ

ಮದ್ದಿನಮಠ, ಯೋಜನಾಧಿಕಾರಿ ಸತೀಶ್, ದಿವ್ಯಾ ಗುಡ್ಡಾಪುರ, ಶಾಂತಾ ಉತ್ನಾಲಕರ, ಭಾಗ್ಯಶ್ರೀ ಹಳ್ಳದಕರ್, ಕವಿತಾ

ಮದ್ದಿನಮಠ, ಪಲ್ಲವಿ ಗುಡ್ಡಾಪೂರ, ನಾಗಮ್ಮ ಚೌಡಾಯ, ಕಾವ್ಯ ಹಿರೇಮಠ, ಲಕ್ಷ್ಮೀ ಗಾಯಕವಾಡ, ಗೀತಾ ಕಾರಪುರ, ಲಲಿತಾ ಬೂಸನೂರ, ಮತ್ತು ಯೋಜನೆಯ ಮೇಲ್ವಿಚಾರಕ ಶ್ರೇಣಿಯ ಸಿಬ್ಬಂದಿಗಳು ಸೇವಾ ಪ್ರತಿನಿಧಿಗಳು ಮತ್ತು ಸ್ವಸಹಾಯ ಸಂಘದ ನೂರಾರು ಮಹಿಳೆಯರು ಉಪಸ್ಥಿತರಿದ್ದರು.

## ಸಾಹಿತ್ಯ ಸಮ್ಮೇಳನ : ಪ್ರಶಸ್ತಿ ಪ್ರದಾನ



**ಮಲ್ಲಮ್ಮ ನುಡಿ ವಾರ್ತೆ ಸಿರವಾರ :**

ರಾಯಚೂರು ನಗರದ ಡಿಸೆಂಬರ್ 20 ಹಾಗೂ 21 ರಂದು ಪಟ್ಟಣದ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ನಡೆಯುವ ಆಖಿಲ ಭಾರತ ದಲಿತ ಸಾಹಿತ್ಯ ಸಮ್ಮೇಳನವು ಅತ್ಯಂತ ಅದ್ದೂರಿಯಾಗಿ ಕಾರ್ಯಕ್ರಮವು ನಡೆಯಲಿದ್ದು. ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ ಸನ್ಮಾನ ಕಾರ್ಯಕ್ರಮ ನಡೆಲಿದ್ದು.

ಸಮಾಜ ಸೇವೆಯಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿರುವ ಬಹುಜನ ಸಂಘರ್ಷ ಸಮಿತಿ ರಾಯಚೂರು ಸಂಸ್ಥಾಪಕ ಹಾಗೂ ಅಧ್ಯಕ್ಷರಾದ ಶರಣಪ್ಪ ಬಲ್ಲಟಗಿ ಹಾಗೂ ಚಿತ್ರಕಲೆ ಕ್ಷೇತ್ರದಲ್ಲಿ ಸಾಧನೆ ಮಾಡಿದ ನಾಗರಾಜ ಸಿರವಾರ ಅವರಿಗೆ ಸನ್ಮಾನ ಗೌರವಿಸಲಾಗುವುದು ಎಂದು ದಲಿತ ಸಾಹಿತ್ಯ ಪರಿಷತ್ತಿನ ಯುವ ಘಟಕದ ಜಿಲ್ಲಾಧ್ಯಕ್ಷರಾದ ಪಾರ್ಥ ಸಿರವಾರ ಹೇಳಿದರು.

ರಾಯಚೂರು ನಗರದಲ್ಲಿ ನಡೆಯುವ ಆಖಿಲ ಭಾರತ ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಡಾ.ಜಯದೇವಿ ಸಾಹಿತಿಗಳು ಗಾಯಕವಾಡ ಯಾದಗಿರಿ , ದಲಿತ ಸಾಹಿತ್ಯ ಪರಿಷತ್ತಿನ ರಾಜ್ಯಾಧ್ಯಕ್ಷರಾದ ಅರ್ಜುನ ಗೊಳಸಂಗಿ ಹಾಗೂ ರಾಜ್ಯಾದ್ಯಂತ ಎಲ್ಲಾ ಜಿಲ್ಲಾಧ್ಯಕ್ಷರು, ತಾಲೂಕು ಅಧ್ಯಕ್ಷರು ಭಾಗವಹಿಸಲಿದ್ದಾರೆ ಎಂದು ಹೇಳಿದರು.

## ಅಂಚೆ ಜೀವ ವಿಮೆ ಉತ್ಪನ್ನಗಳ ಮಾರಾಟ ಪ್ರತಿನಿಧಿಗಳ ಆಯ್ಕೆಗೆ ನೇರ ಸಂದರ್ಶನ



**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:**

ಇಲ್ಲಿನ ಅಂಚೆ ಇಲಾಖೆಯಿಂದ ರಾಯಚೂರು ವಿಭಾಗದಲ್ಲಿ ಅಂಚೆ ಜೀವ ವಿಮೆ ಹಾಗೂ ಗ್ರಾಮೀಣ ಅಂಚೆ ಜೀವ ವಿಮೆ ಉತ್ಪನ್ನಗಳನ್ನು ಮಾರಾಟ ಮಾಡಲು ನೇರ ಪ್ರತಿನಿಧಿಗಳ ಆಯ್ಕೆಗಾಗಿ ನೇರ ಸಂದರ್ಶನಕ್ಕೆ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಡಿಸೆಂಬರ್ 29ರಂದು ಬೆಳಿಗ್ಗೆ 11ಗಂಟೆಗೆ ರಾಯಚೂರಿನ ಗಂಜ್ ವೃತ್ತದ ಬಳಿರುವ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ನೇರ ಸಂದರ್ಶನ ಹಮ್ಮಿಕೊಳ್ಳಲಾಗಿದೆ.

ಸಂದರ್ಶನಕ್ಕೆ ಹಾಜರಾಗುವ ಅಭ್ಯರ್ಥಿಗಳು 10ನೇ ತರಗತಿ ಪಾಸಾಗಿರಬೇಕು. ವಯಸು ಕನಿಷ್ಠ 18 ಆಗಿರಬೇಕು. ನಿರುದ್ಯೋಗಿ, ಸ್ವಯಂ ಉದ್ಯೋಗ ನಿರತ ಯುವಕರು, ವಿಮಾ ಕಂಪನಿಗಳ ಮಾಜಿ ಏಜೆಂಟರು, ಸಲಹೆಗಾರರು, ಮಾಜಿ ಸೈನಿಕರು, ಅಂಗನವಾಡಿ ಕಾರ್ಯಕರ್ತೆಯರು, ಮಹಿಳಾ ಮಂಡಳದ ಕಾರ್ಯಕರ್ತೆಯರು, ನಿವೃತ್ತ ಪ್ರಧಾನ ಮತ್ತು ಗ್ರಾಮ ಪಂಚಾಯತ್ ಸದಸ್ಯರು ಹಾಗೂ ಅಂಚೆ ವಿಭಾಗದ ಮುಖ್ಯಸ್ಥರಿಗೆ ಸಮಂಜಸವೆಂದು ಕಂಡುಬಂದ ಯಾವುದೇ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ.

ನುರಿತ, ಸಂವಹನಾ ಕಲೆ ಹಾಗೂ ವಿಮಾ ಮಾರಾಟ ಕ್ಷೇತ್ರದಲ್ಲಿ ಪೂರ್ವಾನುಭವ ಹೊಂದಿರುವವರಿಗೆ ಆದ್ಯತೆ ನೀಡಲಾಗುತ್ತಿದೆ. ಆಯ್ಕೆಯಾದ ಅಭ್ಯರ್ಥಿಗಳು 5 ಸಾವಿರ ರೂ.ಗಳ ರಾಷ್ಟ್ರೀಯ ಉಳಿತಾಯ ಪತ್ರ ಅಥವಾ ಕಿಸಾನ್ ವಿಕಾಸ ಪತ್ರದ ರೂಪದಲ್ಲಿ ಭದ್ರತಾ ಠೇವಣಿ ಇಡಬೇಕು. ಆಯ್ಕೆಯಾದ ಪ್ರತಿನಿಧಿಗಳಿಗೆ ವ್ಯವಹಾರಕ್ಕೆ ತಕ್ಕಂತೆ ಸೂಕ್ತ ಕಮಿಷನ್ ನೀಡಲಾಗುತ್ತದೆ. ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ ಎಂದು ರಾಯಚೂರು ವಿಭಾಗದ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಿ.ಯು.ಸಿ ಫಲಿತಾಂಶ ಬಲವರ್ಧನೆ ಹಾಗೂ ವೃತ್ತಿ ಮಾರ್ಗದರ್ಶನ ಕುರಿತು ಕಾರ್ಯಾಗಾರ

ಸಿರವಾರ: ತಾಲ್ಲೂಕಿನ ಸರಕಾರಿ ಪ.ಪೂ. ಕಾಲೇಜ್, ಕುರಕುಂದದಲ್ಲಿ ನೀತಿ ಆಯೋಗದ ಮಹತ್ವಾಕಾಂಕ್ಷಿ ಜಿಲ್ಲಾ ಮತ್ತು ತಾಲ್ಲೂಕ ಅಭಿವೃದ್ಧಿ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮೀಣ ಭಾಗದಲ್ಲಿ ಉತ್ತಮ ಅಭಿವೃದ್ಧಿಯನ್ನು ಸಾಧಿಸುವ ನಿಟ್ಟಿನಲ್ಲಿ ಶೈಕ್ಷಣಿಕ ವಿಷಯಕ್ಕೆ ಸಂಬಂಧಿಸಿದಂತೆ ಹುಡುಗರು ಮತ್ತು ಹುಡುಗಿಯರು ವಾರ್ಷಿಕ ಪರೀಕ್ಷೆಯಲ್ಲಿ ಶೇಕಡಾವಾರು 60% ಮತ್ತು ಅದಕ್ಕಿಂತ ಹೆಚ್ಚಿನ ಅಂಕಗಳನ್ನು ಪಡೆಯುವ ಸೂಚಾಂಕಗಳ ಬಲವರ್ಧನೆಗಾಗಿ ಒತ್ತು ನೀಡುತ್ತಾ ಈ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮದ ಸಂಯೋಜಕರಾದ ಡಾ.ಜ್ಞಾನಸುಂದರಿ ಎ.ಬಿ.ಎಫ್ ತಾಲ್ಲೂಕ ಪಂಚಾಯತಿ, ಸಿರವಾರರವರು ಈ ಕಾರ್ಯಾಗಾರದ ಕುರಿತು ಕುರಿತು ಗುರಿ, ಉದ್ದೇಶ, ನಿರೀಕ್ಷೆಯ ಫಲಿತಅಂಶದ ಕುರಿತು ಪ್ರಾಸ್ತಾವಿಕ ನುಡಿಗಳನ್ನು ಹೇಳಿದರು, ಈ ಕಾರ್ಯಾಗಾರಕ್ಕೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿದ ಶ್ರೀ. ತಿಮ್ಮಣ ನಾರಿ ಕಿಲ್ಪ್ ತಾಲ್ಲೂಕ ಸಂಯೋಜಕರು ಪ್ರತಿಯೊಬ್ಬರ ಜೀವನದಲ್ಲಿ ಶಿಕ್ಷಣದ ಪ್ರಾಮುಖ್ಯತೆ, ಗ್ರಾಮೀಣ ಭಾಗದಲ್ಲಿನ ವಿದ್ಯಾರ್ಥಿಗಳಿಗೆ ವೃತ್ತಿ ಜೀವನ ಕೌಶಲ್ಯಗಳ ಅಗತ್ಯತೆ,





ಜೀವನದಲ್ಲಿ ಉತ್ತಮ ಉದ್ದೇಶ ಹಾಗೂ ಮಾನವೀಯತೆಯನ್ನು ಮೈಗೂಡಿಸಿಕೊಳ್ಳುವಿಕೆ ಕುರಿತು ಪ್ರಥಮ ಹಾಗೂ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಗೆ ಪ್ರೇರೆಪಣೆ ನೀಡುತ್ತಾ, ಪದವಿ ಪೂರ್ವ ಶಿಕ್ಷಣದ ನಂತರ ಲಭ್ಯವಿರುವ ಉತ್ತಮ ಕೋರ್ಸ್‌ಗಳ ಮತ್ತು ಅವುಗಳ ಆಯ್ಕೆಯ ಪ್ರಕಾರ ಮತ್ತು ಅವಧಿ, ಕೋರ್ಸುಗಳ ಖರ್ಚು-ವೆಚ್ಚ ಹಾಗೂ ವೃತ್ತಿ ಕೋರ್ಸಗಳ ಆಯ್ಕೆ ಇನ್ನಿತರ ವಿಚಾರಗಳಿಗೆ ಸಂಬಂಧಿಸಿದಂತೆ ವಿವರವನ್ನು ಹಂಚಿಕೊಳ್ಳುತ್ತಾ ಮಕ್ಕಳಲ್ಲಿ ಓದಿನ ಏಕಾಗ್ರತೆಯನ್ನು ಹೆಚ್ಚಿಸಲು ಡಾ. ಗುರುರಾಜ್ ಕರಜಗಿ ಇವರ ಪ್ರೋತ್ಸಹದಾಯಕ ವಿಡಿಯೋ ತುಣುಕುಗಳನ್ನು ಪ್ರದರ್ಶನ ಮಾಡಲಾಯಿತು ನಂತರ ಮಕ್ಕಳೊಂದಿಗೆ ಪ್ರಶ್ನೋತ್ತರ ಪ್ರಕ್ರೀಯೆಯ ಮೂಲಕ ಸಂವಾದ ನಡೆಸುವ ಪ್ರೇರೆಪಣೆ ನೀಡಿದರು. ಕಾರ್ಯಕ್ರಮದ ಅಧ್ಯಕತಾ ಸ್ಥಾನವನ್ನು ವಹಿಸಿಕೊಂಡ ಶ್ರೀ. ಮಲ್ಲಪ್ಪ ಪ್ರಾಂಶುಪಾಲರು, ಮಾತನಾಡಿ ಮಕ್ಕಳಲ್ಲಿ ಕಲಿಕೆಯ ಬೆಳವಣಿಗೆ ವೃದ್ಧಿ, ಕಂಪ್ಯೂಟರ್ ಯುಗದಲ್ಲಿ ವೃತ್ತಿ ಜೀವನದ ಸವಾಲುಗಳ ಕುರಿತು ಚರ್ಚಿಸುವ ಮೂಲಕ ಮಕ್ಕಳಲ್ಲಿ ಶಿಕ್ಷಣ ಜೀವನದಲ್ಲಿ ಏಕಾಗ್ರತೆ, ಧೃಢನಿರ್ಧಾರ, ಜೀವನ ಆಯ್ಕೆ ಎಲ್ಲವೂ ಪ್ರಮುಖ ಮೆಟ್ಟಿಲುಗಳು ಎಂದು ಉತ್ತೇಜನ ತುಂಬುವಂತೆ ಮಾತನಾಡಿದರು. ಈ ಸಂದರ್ಭದಲ್ಲಿ ಪ. ಪೂ. ಕಾಲೇಜ್, ಕುರಕುಂದದ ಎಲ್ಲಾ ಉಪನ್ಯಾಸಕರು ಬಳಗವಾದ ಶ್ರೀ. ತನಜ, ಶ್ರೀ. ಹನುಮಂತ, ಶ್ರೀ. ಮುದುಕಪ್ಪರವರು ಕಾರ್ಯಾಗಾರದಲ್ಲಿ ಉಪಸ್ಥಿತರಿದ್ದರು

## ಡಿಸೆಂಬರ್ 20ರಂದು ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ ರಾಯಚೂರು:** ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗದ ನೋಡಲ್ ಆಫೀಸರ್ 220ಕೆವಿ ಸ್ವೀಕರಣ ಕೇಂದ್ರ ಕೆಪಿಟಿಸಿಎಲ್ ನಲ್ಲಿ ಮೂರನೇ ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಕೈಗೊಳ್ಳುತ್ತಿರುವುದರಿಂದ ಡಿಸೆಂಬರ್ 20ರ ಬೆಳಿಗ್ಗೆ 10ರಿಂದ ಸಂಜೆ 6 ಗಂಟೆವರೆಗೂ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಕೋರಲಾಗಿದೆ.

ಸಿಇಓ ಆಫೀಸ್, ಶ್ರೀರಾಮ ನಗರ, ಉದಯ ನಗರ, ಆಜಾದ್ ನಗರ, ಸ್ಟೇಶನ್ ಏರಿಯಾ, ಇಂದಿರಾನಗರ, ಅಶೋಕ್ ಡಿಪೋ, ಗೋಲ್ ಮಾರ್ಕೆಟ್, ಚಾರಾ ಬಜಾರ್, ಮಚ್ಚಿ ಬಜಾರ್, ಕಮೇಲಾ, ಅರಬ್ ಮೊಲ್ಲಾ, ಆಟೋ ನಗರ, ಸಿಯಾತ ಲಾಬ್, ಗಂಜ್ ಸರ್ಕಲ್, ಗೋಶಾಲ ರೋಡ್, ಡಿಸ್ಟಿಕ್ಟ್ ಕೋರ್ಟ್, ಜಿಲ್ಲಾ ಪಂಚಾಯತ್ ಆಫೀಸ್, ಪಿಡ್ಲೂಡಿ, ಬಸವೇಶ್ವರ ಸರ್ಕಲ್, ಫಾರೆಸ್ಟ್ ಆಫೀಸ್, ಫೈರ್ ಸ್ಟೇಶನ್, ವೆರ್ನರಿ ಆಸ್ಪತ್ರೆ, ಕಾಂಗ್ರೆಸ್ ಆಫೀಸ್, ಮಂಚಲಾಪುರ ಕ್ರಾಸ್, ಹೊಸ ಶಿವಂ ಆಸ್ಪತ್ರೆ, ಕ್ಲಾರಿಟಿ ಆಸ್ಪತ್ರೆ, ಭಂಡಾರಿ ಆಸ್ಪತ್ರೆ, ಸುದ್ದಿಮೂಲ, ಹಿಂದಿ ವರ್ಧಮಾನ, ಬಿಎಸ್‌ಎನ್‌ಎಲ್ ಕಚೇರಿ, ಹೊಂಡಾ ಶೋರೂಮ್, ಅಹ್ಮದ್ ಫಂಕ್ಷನ್ ಹಾಲ್, ಸುಣ್ಣಭಟ್ಟಿ, ರೈಲ್ವೆ ಸ್ಟೇಷನ್, ಆಫೀಸರ್ಸ ಕಾಲೋನಿ,

ಆಶಾಪುರ ರಸ್ತೆ, ಗುಡ್ ಶೆಡ್ ರಸ್ತೆ, ಐಡಿಎಸ್‌ಎಮ್‌ಟಿ ಲೇಔಟ್, ಪವನ್ ಲೇಔಟ್, ಗ್ಯಾನ್ ಮಂದಿರ, ಆಫಿಸರ್ಸ ಕಾಲೋನಿ, ಮೆಥಡಿಸ್ಟ್ ಚರ್ಚ್, ಜಂಡಕಟ್ಟ, ನವರಂಗ ದರ್ವಾಜ, ಟಿಪ್ಪು ಸುಲ್ತಾನ್‌ರೋಡ್, ಡಿ.ಸಿ. ಆಫೀಸ್ ಮುಂದುಗಡೆ, ಹಾಜಿ ಕಾಲೋನಿ, ಕೋಟ್‌ತಲಾರ್, ಹೊಸ ಸಿಎಮ್‌ಸಿ ಕಚೇರಿ, ಡ್ಯಾಡಿ ಕಾಲೋನಿ, ಆಶ್ರಫೀಯಾ ಕಾಲೋನಿ, ಕಾಕತೀಯ ಕಾಲೋನಿ, ಶಾಂತಿ ಕಾಲೋನಿ, ಡಾಲರ್ಸ್ ಕಾಲೋನಿ, ಪಿಸಿಬಿ ಕಾಲೋನಿ, ಪಾರ್ವತಿ ಕಾಲೋನಿ, ರಾಘವೇಂದ್ರ ಕಾಲೋನಿ, ಸಾರಾ ಟೀವರ್ಸ ಕಾಲೋನಿ, ಒಳ ಚರಂಡಿ ಸಂಸ್ಕರಣ ಘಟಕ ಮಂಚಲಾಪೂರ ರೋಡ್, ಬಸವೇಶ್ವರ ಕಾಲೋನಿ, ಬಂದೇನವಾಜ್ ಕಾಲೋನಿ, ಭಾರತಿ ನಗರ, ಚೆಕ್ಪೋಸ್ಟ್, ಎನ್‌ಜಿಒ ಕಾಲೋನಿ,

ಗೌಸಿಯಾ ಕಾಲೋನಿ, ಎಸ್.ಟಿ ನಿಜಾಮುದ್ದೀನ್ ಕಾಲೋನಿ, ದೇವರಾಜ್ ಅರಸ್ ಕಾಲೋನಿ. ಗಾಂಧಿ ಲೇಔಟ್, ಅಶೋಕ್ ಕುಮಾರ್ ಲೇಔಟ್, ಲಿಂಗಸುಗೂರು ರಸ್ತೆ, ಕೃಷಿವಿಶ್ವವಿದ್ಯಾಲಯ ಎದುರುಗಡೆ, ಶಿವಂ ಆಸ್ಪತ್ರೆ, ಎಸ್.ಎನ್.ಟಿ. ಟಾಕೀಸ, ಲೋಹಾರವಾಡಿ, ಗಾಂಧಿ ಚೌಕ, ಬಂದರ್ ಗಲ್ಲಿ, ಎಂ.ಜಿ.ರಸ್ತೆ, ಹರಿಹರ ರಸ್ತೆ, ಮಕ್ತಲ ಪೇಟೆ.

ಪಿಂಜರವಾಡಿ, ಶರಣಬಸವೇಶ್ವರ ಆಸ್ಪತ್ರೆ. ಬೆಟ್ಟದೂರ ಆಸ್ಪತ್ರೆ. ಪ್ಯಾರಸ್ ಗಾರ್ಡನ್, ವಡ್ಡಪ್ಪ ಜೀನ್ ಕುಂಬಾರಓಣಿ, ಮಡ್ಡಿ ಪೇಟೆ, ಬ್ರೆಸ್ತಾವಾರ ಪೇಟೆ, ಚಂದ್ರಮಾಲೇಶ್ವರ ಚೌಕ ಬಟ್ಟೆ ಬಜಾರ್ ತರಕಾರಿ ಮಾರ್ಕೆಟ್, ಮೇದರವಾಡಿ ಹೊಸ ಅಮೃತ ಆಸ್ಪತ್ರೆ, ಸಂತೋಷಿ ನೊವಿತಾಲ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ.

ಹೆಚ್ಚಿನ ಮಾಹಿತಿಗಾಗಿ 24*7 ಗ್ರಾಹಕರ ಸೇವಾ ಕೇಂದ್ರದ ದೂರವಾಣಿ ಸಂಖ್ಯೆ: 08532-226386, 08532-231999ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜೆಸ್ಕಾಂ ಕಾರ್ಯ ಮತ್ತು ಪಾಲನೆ ನಗರ ಉಪ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರ್ನಾಟಕ ರಾಜ್ಯ ನದಾಫ್/ಪಿಂಜಾರ ಸಂಘ ಕಲಬುರಗಿ ವಿಭಾಗ ಮಟ್ಟದ ಸಮಾವೇಶ ಡಿ.21ಕ್ಕೆ

**ಮಲ್ಲಮ್ಮ ನುಡಿ ವಾರ್ತೆ ಲಿಂಗಸುಗೂರು:**

ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿದ ಅವರು, ಪ್ರವಾದಿ ಮೊಹಮ್ಮದ್ ಪೈಗಂಬರ್ (ಸ್ವ)ರ 1500ನೇ ಜನ್ಮ ದಿನೋತ್ಸವ ನಿಮಿತ್ಯ ಹಮ್ಮಿಕೊಂಡಿರುವ ಸಮಾವೇಶದಲ್ಲಿ ನದಾಫ್ ಸಮಾಜದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ, ಕಲ್ಯಾಣ ಕರ್ನಾಟಕ ಸಾಧಕರಿಗೆ ಸನ್ಮಾನ, ತಾಲೂಕಿನ ಸರಕಾರಿ ನೌಕರರಿಗೆ,





ಹಾಫಿಜ್, ಆಲಿಂ, ಹಾಜಿಗಳಿಗೆ, ಚಿನ್ನದಗಣಿ ನೌಕರರಿಗೆ, ವೈದ್ಯರು, ಇಂಜಿನಿಯರುಗಳಿಗೆ ಸನ್ಮಾನಿಸಿ ಗೌರವಿಸಲಾಗುವುದು. ಹಟ್ಟಿ ಚಿನ್ನದಗಣಿ ಸ್ವರ್ಣಭವನದ ಹತ್ತಿರ ಸಮಾವೇಶ ಜರುಗಲಿದ್ದು. ಇದರಲ್ಲಿ ಸಚಿವರಾದ ಎನ್.ಎಸ್ ಬೋಸರಾಜು, ಸಂಸದರು, ಶಾಸಕರುಗಳು, ವಿಧಾನಪರಿಷತ್ ಸದಸ್ಯರುಗಳು, ಮಾಜಿ ಶಾಸಕರು, ಸಂಸದರು, ಕೇಂದ್ರ ಸಚಿವರು ಸೇರಿ ಸಂಘದ ರಾಜ್ಯಾಧ್ಯಕ್ಷರು, ರಾಜ್ಯ ಸಮಿತಿ ಮುಖಂಡರು ಪಾಲ್ಗೊಳ್ಳಲಿದ್ದಾರೆ. ನದಾಫ್ /ಪಿಂಜಾರ ಸಮಾಜದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಸಮಾವೇಶವನ್ನು ಯಶಸ್ವಿಗೊಳಿಸಬೇಕು. ಎಂದು ಕೋರಿದರು ಕರ್ನಾಟಕ ರಾಜ್ಯ ನದಾಫ್/ಪಿಂಜಾರ ಸಂಘ ಕಲಬುರಗಿ ವಿಭಾಗ ಮಟ್ಟದ ಸಮಾವೇಶವನ್ನು ಡಿ.21ಕ್ಕೆ ಹಟ್ಟಿ ಚಿನ್ನದಗಣಿಯಲ್ಲಿ ಹಮ್ಮಿಕೊಳ್ಳಲಾಗಿದೆ. ಎಂದು ಸಂಘದ ಜಿಲ್ಲಾಧ್ಯಕ್ಷ ಮೌಲಾಸಾಬ ಗಣದಿನ್ನಿ ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಮುಖಂಡರು ಕರಪತ್ರಗಳನ್ನು ಬಿಡುಗಡೆ ಮಾಡಿದರು. ಈ ಸಂದರ್ಭದಲ್ಲಿ ಕಲಬುರಗಿ ವಿಭಾಗದ ಉಪಾಧ್ಯಕ್ಷ ಮಹೆಬೂಬಸಾಬ ಸಂತೆಕೆಲ್ಲೂರು, ರಾಜ್ಯ ಸಮಿತಿ ಸದಸ್ಯರಾದ ಖಾದರಸಾಬ ಅಂಗಡಿ ಆನೆಹೊಸೂರು, ಮಹ್ಮದ್ ಖಾಜಾಹುಸೇನ್ ಪತ್ರಕರ್ತರು, ಮೌನುದ್ದೀನ್ ಬೂದಿಹಾಳ, ಯಮನೂರ ನದಾಪ್, ತಾಲೂಕು ಅಧ್ಯಕ್ಷ ಟಿ.ಅಮೀನುದ್ದೀನ್ ಚಾಂತಾಪೂರ, ಉಪಾಧ್ಯಕ್ಷ ಬಿ.ಅಮೀನುದ್ದೀನ್ ಬಂಡಿ (ಅಮ್ಮಿ), ಹಟ್ಟಿಘಟಕದ ಉಪಾಧ್ಯಕ್ಷ ಖಾಜಾಹುಸೇನ್ ಬಂಗಾರಿ ಸೇರಿ ಇತರರಿದ್ದರು.

# ಕಾರ್ಮಿಕ ಇಲಾಖೆಯಲ್ಲಿ ಬಹುಕೋಟಿ ಹಗರಣ ಬಯಲು, ತನಿಖೆಗೆ ಕಾರ್ಮಿಕರ ಒಕ್ಕೂಟ ಆಗ್ರಹ




**ಮಲ್ಲಮ್ಮ ನುಡಿ ವಾರ್ತೆ**

**ಬಳ್ಳಾರಿ:** ಕಾರ್ಮಿಕ ಇಲಾಖೆಯಲ್ಲಿ ಬಹುಕೋಟಿ ಹಗರಣ ನಡೆದಿದ್ದು, ಕೂಡಲೇ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಕರ್ನಾಟಕ ರಾಜ್ಯ ಕಟ್ಟಡ ನಿರ್ಮಾಣ ಮತ್ತು ಅಸಂಘಟಿತ ಕಾರ್ಮಿಕರ ಒಕ್ಕೂಟದ ರಾಜ್ಯಾಧ್ಯಕ್ಷ ಬಿ.ದೇವರಾಜ್ ಅವರು ಒತ್ತಾಯಿಸಿದರು. ನಗರದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಕಾರ್ಮಿಕರ ಆರೋಗ್ಯ ತಪಾಸಣೆ ಸಂಚಾರಿ ವಾಹನದಲ್ಲಿ ಬೇಕಾಬಿಟ್ಟಿಯಾಗಿ ಸಂಖ್ಯೆಯನ್ನು ನಮೂದಿಸಿ ಕೋಟ್ಯಂತರ ಹಣ ಲೂಟಿ ಹೊಡೆಯಲಾಗಿದೆ, ಕಟ್ಟಡ ಕಾರ್ಮಿಕರ ಕಿಟ್, ಎಲೆಕ್ಟ್ರೀಶನ್ ಕಿಟ್, ಪ್ಲಂಬರ್ ಕಿಟ್, ಪೇಂಟರ್ ಕಿಟ್ ಖರೀದಿಯಲ್ಲಿ 800ಕ್ಕೂ ಹೆಚ್ಚು ಕೋಟಿ ಹಗರಣ ನಡೆದಿದೆ. ಕಟ್ಟಡ ಕಾರ್ಮಿಕರಿಗೆ ವಿತರಿಸಿದ ಕಿಟ್ ಎಲ್ಲವೂ ಸೇರಿ 1400 ರೂ. ವೆಚ್ಚವಾದರೆ, ಅದನ್ನು 5 ರಿಂದ 6ಸಾವಿರ ನಮೂದಿಸಿ ಕೋಟ್ಯಂತರ ರೂ.ಹಣ ಲಪಟಾಯಿಸಲಾಗಿದೆ. ಕಾರ್ಮಿಕ ಸಚಿವ ಸಂತೋಷ್ ಲಾಡ್ ಅವರು ನೇರವಾಗಿ ಈ ಹಗರಣದಲ್ಲಿ ಭಾಗಿಯಾಗಿರುವ ಶಂಕೆಯಿದೆ, ಕೂಡಲೇ ತನಿಖೆ ನಡೆಸಿ, ಕಾರ್ಮಿಕರ ಹಿತ ಕಾಪಾಡಬೇಕು ಎಂದು ಒತ್ತಾಯಿಸಿದರು. ಆರೋಗ್ಯ ತಪಾಸಣೆಗೆ ನೂತನವಾಗಿ ಜಾರಿಗೊಳಿಸಿದ ಸಂಚಾರಿ ವಾಹನ ಅಧಿಕಾರಿಗಳಿಗೆ ವರದಾನವಾಗಿದೆ, ಇದರಲ್ಲೂ ಕೋಟ್ಯಂತರ ಲೂಟಿ ಹೊಡೆಯಲಾಗಿದೆ. ಬೇಕಾಬಿಟ್ಟಿಯಾಗಿ ಮಾಡಿದ ಕಾರ್ಮಿಕರ ತಪಾಸಣೆ ವರದಿ ಒಂದೂವರೆ ತಿಂಗಳ ಬಳಿಕ ಬರಲಿದೆ, ಅದರಲ್ಲಿ ಬಿಪಿ, ಶುಗರ್, ಎಚ್ ಐವಿ ರೋಗ ಪತ್ತೆ ಎಂದು ತೋರಿಸ್ತಾರೆ. ಆದರೆ, ಅವರಿಗೆ ಯಾವುದೂ ಖಾಯಿಲೆಗಳೇ ಇರೋಲ್ಲ ಇದು ಅತ್ಯಂತ ಬಹುದೊಡ್ಡ ದುರಂತ ಎಂದು ವಾಗ್ದಾಳಿ ನಡೆಸಿದರು. ರಾಜ್ಯ ಸಂಘಟನಾ ಕಾರ್ಯದರ್ಶಿ ಆರ್.ಶ್ರೀನಿವಾಸ್ ಅವರು ಮಾತನಾಡಿ, ಕಾರ್ಮಿಕರ ಮಕ್ಕಳ ಶಿಕ್ಷಣಕ್ಕೆ, ಸಮುದಾಯ ಭವನ, ಉದ್ಯೋಗಕ್ಕಾಗಿ ತರಬೇತಿ ನೀಡಿ ಎಂದರೆ, ಇದಕ್ಕೆ ಅನುದಾನವಿಲ್ಲ ಅಂತಾರೆ,

ನೂತನ ನಾನಾ ಯೋಜನೆಗಳನ್ನು ಜಾರಿಗೊಳಿಸಿ ಕಾರ್ಮಿಕರ ಹೆಸರಿನಲ್ಲಿ ಕೋಟ್ಯಂತರ ಹಣ ಲಪಟಾಯಿಸುತ್ತಿರುವುದು ದೊಡ್ಡ ದುರಂತ. ಕೂಡಲೇ ಈ ಅವ್ಯವಹಾರ ಕುರಿತು ತನಿಖೆ ನಡೆಸಿ, ಕಾರ್ಮಿಕರಿಗೆ ನ್ಯಾಯ ಒದಗಿಸಬೇಕು. ಜ.14ರ ಬಳಿಕ ಬೆಂಗಳೂರಿನ ಫ್ರೀಡಂ ಪಾರ್ಕ್ ಬಳಿ ಅಹೋರಾತ್ರಿ ಧರಣಿ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಘಟನೆ ಜಿಲ್ಲಾಧ್ಯಕ್ಷ ತಿಪ್ಪೇಸ್ವಾಮಿ ಸೇರಿದಂತೆ ಇತರರಿದ್ದರು.

# ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿ

**ಮಲ್ಲಮ್ಮ ನುಡಿ ವಾರ್ತೆ ಬೀದರ:** ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ಬೀದರ ಕೇಂದ್ರ ಗ್ರಂಥಾಲಯ ಹಿಂಭಾಗ ಬೀದರಿನಲ್ಲಿ ಡಿಸೆಂಬರ್.22 ಮತ್ತು 23 ರಂದು ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಆಯೋಜಿಸಲಾಗಿದೆ. ಆಸಕ್ತ ರೈತರು ತರಬೇತಿಗೆ ಹಾಜರಾಗುವ ಸಮಯದಲ್ಲಿ ಆಧಾರ ಕಾರ್ಡ್ ಪ್ರತಿ ಹಾಗೂ ಇತ್ತೀಚಿನ ಎರಡು ಭಾವಚಿತ್ರ ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಾಗಿದ್ದಲ್ಲಿ ಜಾತಿ ಪ್ರಮಾಣ ಪತ್ರದೊಂದಿಗೆ ಹಾಜರಾಗಬೇಕು. ಹೆಚ್ಚಿನ ಮಾಹಿತಿಗಾಗಿ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರ ಬೀದರ" ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ, ಕೇಂದ್ರ ಗ್ರಂಥಾಲಯ ಹಿಂದುಗಡೆ, ಬೀದರ ಅಥವಾ ದೂರವಾಣಿ ಸಂಖ್ಯೆ: 9902561957 ಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಐದು ವರ್ಷದೊಳಗಿನ ಪ್ರತಿ ಮಗುವಿಗೆ ಪೋಲಿಯೋ ಲಸಿಕೆ ನೀಡಿ: ಜಿಲ್ಲಾಧಿಕಾರಿ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲೆಯಲ್ಲಿ ಇದೇ ಡಿ.21 ರಿಂದ 24 ರವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಐದು ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ಪಲ್ಸ್ ಪೋಲಿಯೋ ಲಸಿಕೆ ನೀಡಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ನಗರದ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಿದ್ದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಎರಡನೇ ಹಂತದ ಜಿಲ್ಲಾ ಮಟ್ಟದ ಟಾಸ್ಕ್ ಫೋರ್ಸ್ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಇದೇ ಡಿಸೆಂಬರ್ 21 ರಂದು ಬೂತ್ ಮಟ್ಟದ ಪೋಲಿಯೋ ಲಸಿಕಾ ಕಾರ್ಯಕ್ರಮ ನಡೆಯಲಿದ್ದು, ಡಿ.22, 23 ರಂದು ಗ್ರಾಮೀಣ ಪ್ರದೇಶದಲ್ಲಿ ಹಾಗೂ ಡಿ.22 ರಿಂದ 24 ರವರೆಗೆ ಮನೆ ಮನೆಗೆ ಭೇಟಿ ನೀಡಿ ಪಲ್ಸ್ ಪೋಲಿಯೋ ಲಸಿಕೆ ನೀಡಲಾಗುತ್ತಿದೆ. ಯಾವುದೇ ಅರ್ಹ ಮಗು ಈ ಲಸಿಕೆಯಿಂದ ವಂಚಿತರಾಗದಂತೆ ನಿಗಾವಹಿಸಲು ಅವರು ಸೂಚಿಸಿದರು.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಬಗ್ಗೆ ಪಾಲಕರಲ್ಲಿ ಅರಿವು, ಶಾಲಾ ಮಕ್ಕಳಿಗೆ ಸೂಕ್ತ ಜಾಗೃತಿ ಕಾರ್ಯಕ್ರಮ, ಶಿಕ್ಷಕರ ಮೂಲಕ ಮಕ್ಕಳಿಗೆ ಲಸಿಕೆ ಹಾಕಿಸಲು, ಅವಶ್ಯಕ ಕ್ರಮ ಕೈಗೊಳ್ಳಬೇಕು. ಲಸಿಕಾ ಸಿಬ್ಬಂದಿಗಳಿಗೆ ಸೂಕ್ತ ವಾಹನಗಳ ವ್ಯವಸ್ಥೆ ಮಾಡಲು ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಸೂಚಿಸಿದರು.

ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮಕ್ಕೆ ಸಂಬಂಧಿಸಿದ ತಂಡಗಳು ಪರಸ್ಪರ ಸಮನ್ವಯತೆಯಿಂದ ಕಾರ್ಯನಿರ್ವಹಿಸಬೇಕು. ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಅಂಗನವಾಡಿ ಮತ್ತು ಆಶಾ ಕಾರ್ಯಕರ್ತೆಯರು, ಆರೋಗ್ಯ ಇಲಾಖೆ ಅಧಿಕಾರಿ ಹಾಗೂ ಸಿಬ್ಬಂದಿಗಳು, ವಿವಿಧ ಇಲಾಖೆಗಳ ಅಧಿಕಾರಿಗಳ ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಯಾವುದೇ ಮಗು ಪೋಲಿಯೋ ಲಸಿಕೆಯಿಂದ ವಂಚಿತರಾಗದಂತೆ ನಿಗಾವಹಿಸಬೇಕು. ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ, ಜನನಿಬೀಡ, ದೂರದ ಪ್ರದೇಶ, ವಲಸಿಗ ಕಾರ್ಮಿಕರ ಮಕ್ಕಳು, ಜಿಲ್ಲೆಗೆ ಆಗಮಿಸುವ ಕಾರ್ಮಿಕರ ಹಾಗೂ ವಿವಿಧ ಸಮುದಾಯ ವ್ಯಾಪ್ತಿಯಲ್ಲಿನ ಮಕ್ಕಳನ್ನು, ಗುರುತಿಸಿ ಲಸಿಕೆ ಹಾಕಿಸಬೇಕು ಎಂದರು.

ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ ಅವರು ಮಾತನಾಡಿ, ಜಿಲ್ಲೆಯಲ್ಲಿ ಈ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ 1,89,745 ಐದು ವರ್ಷದೊಳಗಿನ ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಲಾಗಿದೆ. ಇದಕ್ಕಾಗಿ ಒಟ್ಟು 920 ಬೂತ್ ಮಟ್ಟದ ಲಸಿಕಾ ತಂಡಗಳನ್ನು ರಚಿಸಲಾಗಿದ್ದು, 49 ಟ್ರಾನ್ಸಿಟ್(ಸಂಚಾರಿ) ತಂಡಗಳನ್ನು ನೇಮಿಸಲಾಗಿದೆ. 1,968 ಲಸಿಕಾ ಸಿಬ್ಬಂದಿಗಳು, 984 ತಂಡಗಳು ಮನೆ ಮನೆಗೆ ಭೇಟಿ ನೀಡಲಿವೆ, ಎಲ್ಲಾ ತಂಡಗಳಿಗೆ ಲಸಿಕೆ ನೀಡುವ ವಿಧಾನ ಕುರಿತು ತರಬೇತಿ ನೀಡಲಾಗಿದೆ ಎಂದು ಸಭೆಗೆ ತಿಳಿಸಿದರು. ನಗರಸಭೆ ಮತ್ತು ಇನ್ನಿತರೆ ಸ್ಥಳೀಯ ಸಂಸ್ಥೆಗಳ ವತಿಯಿಂದ ಪಲ್ಸ್ ಪೋಲಿಯೋ ಕಾರ್ಯಕ್ರಮದ ಕುರಿತು ಆಡಿಯೋ ಮೂಲಕ ಕಸ ವಿಲೇವಾರಿ ವಾಹನಗಳಲ್ಲಿ ಪ್ರಚುರಪಡಿಸಬೇಕು. ಸಾಮಾಜಿಕ ಜಾಲತಾಣಗಳ ಮೂಲಕ ಜಾಗೃತಿ ವಿಡೀಯೋ ಚಿತ್ರೀಕರಿಸಿ ಪ್ರಚಾರ ಕೈಗೊಳ್ಳಬೇಕು ಎಂದು ತಿಳಿಸಿದರು. ಲಸಿಕಾ ಕಾರ್ಯಕ್ಕೆ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ವಿದ್ಯಾರ್ಥಿಗಳು, ಎನ್‌ಸಿಸಿ, ಗೃಹರಕ್ಷಕ ದಳ, ಎನ್ ಜಿಓ ಸಂಸ್ಥೆಗಳ ಸಹಕಾರ ಪಡೆದುಕೊಳ್ಳಬೇಕು.




ಸಾಧ್ಯವಾದಲ್ಲಿ ಲಸಿಕೆ ಪಡೆದ ಮಕ್ಕಳ ಪೋಷಕರ ಮೊಬೈಲ್ ಸಂಖ್ಯೆ ಮಾಹಿತಿ ಪಡೆದುಕೊಳ್ಳಬಹುದು. ಇದರಿಂದ ಮುಂದಿನ ಅಭಿಯಾನಗಳಲ್ಲಿ ಸಹಾಯವಾಗಲಿದೆ ಎಂದು ನಿರ್ದೇಶನ ನೀಡಿದ ಜಿಲ್ಲಾಧಿಕಾರಿಯವರು ಲಸಿಕಾ ಕಾರ್ಯದ ತಂಡದವರಿಗೆ ಅಭಿಯಾನದ ಕ್ಯಾಪ್, ಊಟದ ವ್ಯವಸ್ಥೆ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಮುಖ್ಯವಾಗಿ ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳು, ಕಾರ್ಮಿಕರ ಮಕ್ಕಳು, ಗಣಿಗಾರಿಕೆ ಕಾರ್ಮಿಕರ ಮಕ್ಕಳು ಹಾಗೂ ಇತರೆ ವಲಸೆ ಪ್ರದೇಶಗಳಲ್ಲಿ ಹುಟ್ಟಿನಿಂದ 05 ವರ್ಷದೊಳಗಿನ ಮಕ್ಕಳನ್ನು ಗುರುತಿಸಿ ಲಸಿಕೆ ಹಾಕಿಸುವಂತೆ ಕ್ರಮವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿಇಒ ಮಹಮ್ಮದ್ ಹಾರೀಸ್ ಸುಮೇರ್ ಅವರು ಮಾತನಾಡಿ, ಸಂಡೂರು ಭಾಗದ ಎಲ್ಲಾ ಗ್ರಾಮಗಳೂ ಕೂಡ ಪಲ್ಸ್ ಪೋಲಿಯೋ ಲಸಿಕೆ ನೀಡಬೇಕು. ಅದರಲ್ಲೂ ಜೆಎಸ್ ಡಬ್ಲ್ಯೂ, ಎನ್‌ಎಂಡಿಸಿ ಕೈಗಾರಿಕಾ ಪ್ರದೇಶಗಳಲ್ಲಿ ವಾಸಿಸುತ್ತಿರುವ ಮತ್ತು ಹೊರ ರಾಜ್ಯದಿಂದ ಬಂದಂತಹ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಪ್ರತಿಯೊಂದು ಮಗುವಿಗೂ ಲಸಿಕೆ ನೀಡಬೇಕು ಎಂದು ತಾಕೀತು ಮಾಡಿದರು.

**ಪೋಷಕರಲ್ಲಿ ವಿನಂತಿ:**

ಪಲ್ಸ್ ಪೋಲಿಯೊ ಮಕ್ಕಳ ಭವಿಷ್ಯದ ರಕ್ಷಣೆಯಾಗಿದ್ದು, 5 ವರ್ಷಕ್ಕಿಂತ ಕಡಿಮೆ ವಯಸ್ಸಿನ ಎಲ್ಲಾ ಮಕ್ಕಳಿಗೂ ಅವಶ್ಯಕವಾಗಿದೆ. ಇದು ಉಚಿತ, ಸುರಕ್ಷಿತ ಮತ್ತು ಪರಿಣಾಮಕಾರಿಯಾಗಿದೆ. ಹಾಗಾಗಿ ಪೋಷಕರು ಹತ್ತಿರದ ಹತ್ತಿರದ ಆರೋಗ್ಯ ಕೇಂದ್ರ ಅಥವಾ ಬೂತ್ ಗೆ ತೆರಳಿ ತಮ್ಮ ಮಗುವಿಗೆ ಪಲ್ಸ್ ಪೋಲಿಯೊ ದಿನದಂದು ಮಿಸ್ ಮಾಡದೇ ಬಾಯಲ್ಲಿ 2 ಹನಿ ಪೋಲೀಯೋ ಲಸಿಕೆ ಹಾಕಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್ ಅವರು ಪೋಷಕರಲ್ಲಿ ಮನವಿ ಮಾಡಿದ್ದಾರೆ. ಈ ವೇಳೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಬಸರೆಡ್ಡಿ, ವಿಶ್ವ ಆರೋಗ್ಯ ಸಂಸ್ಥೆಯ ಎಸ್.ಎಮ್.ಓ ಡಾ.ಶ್ರೀಧರ್, ಜಿಲ್ಲಾ ಯೋಜನಾಭಿವೃದ್ಧಿ ಅಧಿಕಾರಿ ಡಾ.ಆರ್.ಅಬ್ದುಲ್ಲಾ, ಪ್ರಭಾರಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಖುರ್ಶಿದ್ ಬೇಗಮ್ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ತಾಲ್ಲೂಕು ಮಟ್ಟದ ಆರೋಗ್ಯಾಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಅಪರಾಧ ತಡೆಗೆ ಪೊಲೀಸರೊಂದಿಗೆ ಕೈ ಜೋಡಿಸಿ : ವೆಂಟೇಶ ಎಂ




**ಮಲ್ಲಮ್ಮ ನುಡಿ ವಾರ್ತೆ**

**ಮುದಗಲ್ ;** ಅಪರಾಧ ತಡಗೆ ಪೊಲೀಸರೊಂದಿಗೆ ಕೈ ಜೋಡಿಸಬೇಕು ಎಂದು ಸ್ಥಳೀಯ ಪೊಲೀಸ್ ಠಾಣಾ ಪಿಎಂ ವೆಂಕಟೇಶ ಮಾಡಗೇರಿ ಮಂಗಳವಾರ ಹೇಳಿದರು.

ಪಟ್ಟಣದ ಅಟೋ ನಿಲ್ದಾಣದಲ್ಲಿ ಅಟೋ ರಿಕ್ಷಾ ಚಾಲಕರಿಗೆ ಹಾಗೂ ಸಾರ್ವಜನಿಕರಿಗೆ ಅಪರಾಧ ತಡೆ ಮಾಸಾಚರಣೆ ಪ್ರಯುಕ್ತ ಪೊಲೀಸ್ ಇಲಾಖೆಯಿಂದ ಭಿತ್ತಿ ಚಿತ್ರ ವಿತರಣೆ ಮಾಡಿ ಮಾತನಾಡಿದ ಅವರು ಶಾಲಾ, ಕಾಲೇಜು ಹಾಗೂ ಜನ ದಟ್ಟಣೆ ಪ್ರದೇಶಗಳಲ್ಲಿ ವಾಹನಗಳನ್ನು ನಿಧಾನವಾಗಿ ಚಲಿಸಬೇಕು. ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಕಾರು ಚಲಾಯಿಸುವಾಗ ಸೀಟ ಬೆಲ್ಟ ಧರಿಸಿ ಜೀವ ಉಳಿಸಿಕೊಳ್ಳಬೇಕಾದ ಸಲಹೆಗಳನ್ನು ನೀಡಿದರು. ಸಾರ್ವಜನಿಕರು ಬೇರೆ ಊರುಗಳಿಗೆ ತೆರಳುವಾಗ ಅಪರಾಧಗಳನ್ನು ತಡೆಗಟ್ಟಲು ಪೊಲೀಸರಿಗೆ ಲಿಖಿತ ಮಾಹಿತಿ ನೀಡಬೇಕು. ಸಾರ್ವ ಜನಿಕರಿಗೆ ಜಾಗೃತಿ ಮೂಡಿಸಲು ಪ್ರತಿ ವರ್ಷ ಡಿಸೆಂಬರ ತಿಂಗಳನ್ನು ಮಾಸಾಚರಣೆ ಎಂದು ಆಚರಿಸಲಾಗುತ್ತದೆ. ಯಾವುದೇ ಅಪರಾಧ ಕಂಡಿದ್ದ ಸಂಧರ್ಬದಲ್ಲಿ ಧೈರ್ಯವಾಗಿ ಮುಂದೆ ಬಂದು ಸಾಕ್ಷೀ ಹೇಳಬೇಕು. ಸಾಕ್ಷ್ಯಾಧರಗಳ ಕೊರತೆಯಿಂದ ತಪ್ಪಿತಸ್ತರು ತಪ್ಪಿಸಿಕೊಂಡು ಪದೇ ಪದೇ ಅಪರಾಧಗಳು ತಡೆಗೆ ಸಾರ್ವಜನಿಕರ ಸಹಕಾರ ಅಗತ್ಯವಿದೆ. ಸೈಬರ್ ವಂಚನೆಗೆ ಕ್ಲಿಷ್ಟಕರ ಪಾಸವರ್ಡ ಬಳಸಬೇಕು, ಅಪರಿಚಿತ ಲಿಂಕಗಳನ್ನು ಕ್ಲಿಕ್ ಮಾಡಬಾರದು, ಪ್ರತಿಯೊಬ್ಬರು ಸಂಚಾರಿ ನಿಯಮ ಪಾಲಿಸಿ ಪೊಲೀಸರೊಂದಿಗೆ ಕೈ ಜೋಡಿಸಲು ಸಲಹೆ ನೀಡಿದರು.

ಎಎಂ ಚನ್ನಬಸವ, ಹೆಚ್ ಸಿ ಅಮರೇಶ, ಸುರೇಶ, ಹನುಮಂತ, ವೆಂಕೋಬ, ಅಟೋ ಡ್ರೈವರಗಳು ವಿವಿಧ ವಾಹನ ಚಾಲಕರು ಸೇರಿದಂತೆ ಸಾರ್ವಜನಿಕರು ಇದ್ದರು.

# ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಕಾರ್ಮಿಕರ ಭವಿಷ್ಯ ಸಂಸ್ಥೆ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಭವಿಷ್ಯ ನಿಧಿ ನಿಮ್ಮ ಹತ್ತಿರಕ್ಕೆ ಎಂಬ ಅಂಶದಡಿ ಡಿ.29 ರಂದು ಬೆಳಿಗ್ಗೆ 09 ರಿಂದ ಸಂಜೆ 06 ಗಂಟೆಯವರೆಗೆ ಮಹಾನಗರ ಪಾಲಿಕೆ ಸಭಾಂಗಣದಲ್ಲಿ 'ನಿಧಿ ಆಪ್ಕೆ ನಿಕಟ್' ಕಾರ್ಯಕ್ರಮ ಏರ್ಪಡಿಸಲಾಗಿದೆ. ಕಾರ್ಯಕ್ರಮದಲ್ಲಿ ಕಾರ್ಮಿಕರ, ಪಿಂಚಣಿದಾರರ ಮತ್ತು ಉದ್ಯೋಗದಾತರರ ಕುಂದು ಕೊರತೆ ಪರಿಹಾರ, ಮಾಹಿತಿ ವಿನಿಮಯ ಮಾಡಿಕೊಳ್ಳಬಹುದು. ಉದ್ಯೋಗದಾತರ ಕರ್ತವ್ಯ ಮತ್ತು ಜವಾಬ್ದಾರಿಗಳ ಕುರಿತು ಅರಿವು, ಕಾರ್ಮಿಕರಿಗೆ, ಉದ್ಯೋಗದಾತರಿಗೆ, ಪ್ರಧಾನ ಉದ್ಯೋಗದಾತರಿಗೆ ಮತ್ತು ಗುತ್ತಿಗೆದಾರರಿಗೆ ಲಭ್ಯವಿರು ಆನ್‌ಲೈನ್ ಸೇವೆಗಳ ಮಾಹಿತಿ, ಹೊಸ ಉಪಕ್ರಮಗಳು ಹಾಗೂ ಸುಧಾರಣೆ ಕ್ರಮಗಳ ಕುರಿತು ಮಾಹಿತಿ ಸಹ ಒದಗಿಸಲಾಗುತ್ತದೆ. ಹಾಗಾಗಿ ಕಾರ್ಮಿಕರು, ಪಿಂಚಣಿದಾರರು, ಉದ್ಯೋಗದಾತರು ಡಿ.29 ರಂದು ನಡೆಯುವ ನಿಧಿ ಆಪ್ಕೆ ನಿಕಟ್ ಕಾರ್ಯಕ್ರಮದಲ್ಲಿ ಭಾಗವಹಿಸಿ ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಪ್ರಾದೇಶಿಕ ಭವಿಷ್ಯ ನಿಧಿ ಬಳ್ಳಾರಿ ಪ್ರಾದೇಶಿಕ ಕಚೇರಿಯ ಆಯುಕ್ತ ಕೆ.ವಿ ಪ್ರವೀಣ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲಾಧಿಕಾರಿ ಡಾ. ಸುರೇಶ ಇಟ್ನಾಳ ಅಧಿಕಾರ ಸ್ವೀಕಾರ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕೊಪ್ಪಳ ನಗರಸಭೆ ಆಡಳಿತಾವಧಿ ಮುಕ್ತಾಯಗೊಂಡ ಕಾರಣ ಕೊಪ್ಪಳ ನಗರಸಭೆಯ ಆಡಳಿತಾಧಿಕಾರಿಯಾಗಿ ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಅವರು ಬುಧವಾರ ಅಧಿಕಾರ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಮಂಜುನಾಥ ಗುಂಡೂರು ಸೇರಿದಂತೆ ನಗರಸಭೆಯ ಇತರೆ ಅಧಿಕಾರಿ, ಸಿಬ್ಬಂದಿಗಳು ಹಾಗೂ ಮತ್ತಿತರರು.

# ಬಳ್ಳಾರಿಗೆ ಮಲತಾಯಿ ಧೋರಣೆ ಅನುಸರಣೆ ಸರಿಯಲ್ಲ: ನಾರಾ ಭರತ್ ರೆಡ್ಡಿ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:** ಉತ್ತರ ಕರ್ನಾಟಕದ ಬಳ್ಳಾರಿ ಜಿಲ್ಲೆಯಲ್ಲಿ ಅತಿ ಹೆಚ್ಚು ಕೈಗಾರಿಕೆಗಳು ಇದ್ದರೂ ಸ್ಥಳೀಯ ಯುವಕರಿಗೆ ಉದ್ಯೋಗಗಳು ಸಿಗುತ್ತಿಲ್ಲ. ಬದಲಾಗಿ ಉದ್ಯೋಗ ಅರಸಿ ಯುವಕರು ದೂರದ ಬೆಂಗಳೂರಿಗೆ ಗುಳೆ ಹೋಗುತ್ತಿದ್ದಾರೆ. ಅನ್ಯ ರಾಜ್ಯದವರು ಇಲ್ಲಿ ಕೈಗಾರಿಕೆ ಸ್ಥಾಪಿಸಿ ಸ್ಥಳೀಯರಿಗೆ ಅನ್ಯಾಯ ಮಾಡುತ್ತಿದ್ದಾರೆ. ಸರ್ಕಾರ ಕೂಡ ಬಳ್ಳಾರಿ ಜಿಲ್ಲೆಗೆ ಹಲವು ವಿಷಯಗಳಲ್ಲಿ ಮಲತಾಯಿ ಧೋರಣೆ ಅನುಸರಿಸುತ್ತಿರುವುದು ಸರಿಯಲ್ಲವೆಂದು ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ ಹೇಳಿದರು. ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಬಳ್ಳಾರಿ ಜಿಲ್ಲೆ ಅತಿ ಹಿಂದುಳಿದ ಜಿಲ್ಲೆಯಾಗಿದೆ. ಸರ್ಕಾರಿ ಅಧಿಕಾರಿಗಳು ಗ್ರೂಪ್ – ಎ ಅಡಿ ಶೇ 65ರಷ್ಟು ಉದ್ಯೋಗಾವಕಾಶ ನೀಡಲಾಗಿದೆ ಎಂದು ತಪ್ಪು ಮಾಹಿತಿ ನೀಡಿದ್ದಾರೆ. ಗ್ರೂಪ್ – ಬಿ ನಲ್ಲಿ ಶೇ 80, ಗ್ರೂಪ್ ಸಿ ಮತ್ತು ಡಿ–ನಲ್ಲಿ ಶೇ 100 ರಷ್ಟು ಉದ್ಯೋಗ ನೀಡಿರುವುದಾಗಿ ತಪ್ಪು ಮಾಹಿತಿಗಳನ್ನು ನೀಡುತ್ತಿದ್ದಾರೆ. ಇದರ ಬಗ್ಗೆ ತನಿಖೆ ಆಗಬೇಕು. ಹಾಗೆ ನೋಡಿದರೆ ಬೆಂಗಳೂರಿನ ಯಾವುದೇ ಗಲ್ಲಿಗೆ ಹೋದರೂ ನಮ್ಮ ಬಳ್ಳಾರಿ ಜಿಲ್ಲೆಯ ನಿರುದ್ಯೋಗಿ ಯುವಕರು ಉದ್ಯೋಗಕ್ಕಾಗಿ ಅಲೆದಾಡುತ್ತಿರುವುದನ್ನು ಕಾಣಬಹುದು. ನಾನು ಬೆಂಗಳೂರಿಗೆ ಹೋದಾಗ ಅಣ್ಣ, ನಾನು ನಿಮ್ಮ ಕ್ಷೇತ್ರದವನು, ಕೆಲಸ ಇಲ್ಲದ್ದಕ್ಕೆ ಇಲ್ಲಿಗೆ ಬಂದಿದ್ದೇನೆ ಎನ್ನುತ್ತಾರೆ. ಇದು ನನಗೆ ನಿಜಕ್ಕೂ ಅಳು ತರಿಸುವ ವಿಚಾರ ಎಂದು ಸಭಾಧ್ಯಕ್ಷರ ಗಮನ ಸೆಳೆದರು.

ಬೆಂಗಳೂರಿನಂತಹ ಮಹಾನಗರಗಳಲ್ಲಿ ನಮ್ಮ ಜಿಲ್ಲೆಯ ಯುವಕರು ಡೆಲಿವರಿ ಬಾಯ್ ಗಳಾಗಿ ಕೆಲಸ ಮಾಡುತ್ತಿದ್ದಾರೆ. ಇತ್ತ ನಮ್ಮ ಬಳ್ಳಾರಿ ಜಿಲ್ಲೆಯ ಭೂಮಿ, ನೆಲ, ನೀರು ಇತ್ಯಾದಿ ಭೌಗೋಳಿಕ ಸಂಪನ್ಮೂಲ ಬಳಸಿಕೊಂಡು ಸ್ಥಾಪನೆಯಾದ ಕೈಗಾರಿಕೆಗಳು ಅನ್ಯ ರಾಜ್ಯದ ಯುವಕರಿಗೆ ಪ್ರಾಧಾನ್ಯತೆ ನೀಡುತ್ತಿವೆ. 1 ಸಾವಿರ ಉದ್ಯೋಗಗಳಲ್ಲಿ ನೇರ ನೇಮಕಾತಿಯನ್ನು 100 ಯುವಕರಿಗೆ ನೀಡಿದರೆ, ಉಳಿದ ಉದ್ಯೋಗಗಳು ಗುತ್ತಿಗೆ ಆಧಾರದ ಮೇಲೆ ನೇಮಕವಾಗುತ್ತಿವೆ. ಧೂಳು ತಿಂದು ಅನಾರೋಗ್ಯಕ್ಕೆ ಈಡಾಗುವವರು ನಾವುಗಳಾದರೆ, ಕೈಗಾರಿಕೆ ಸ್ಥಾಪಿಸಿ ಜನರನ್ನು ಗೋಳು ಹೊಯ್ದುಕೊಳ್ಳುವುದು ಉದ್ಯಮಿಗಳ ಕೆಲಸವಾಗಿದೆ. ಬಳ್ಳಾರಿ ಜಿಲ್ಲೆಯ ಜನರಿಗೆ ಅನ್ಯಾಯವಾದರೆ ಸದನದಲ್ಲಿ ಯಾರೂ ಧ್ವನಿಯಾಗುವುದಿಲ್ಲ. ಅದೇ ಬೆಂಗಳೂರು–ಮೈಸೂರು ಭಾಗದಲ್ಲಿ ಅನ್ಯಾಯವಾದರೆ ಇಡೀ ಸದನವೇ ಕೋಲಾಹಲಗೊಳ್ಳುತ್ತದೆ. ಈ ತಾರತಮ್ಯ ಬಿಡಬೇಕು. ಯುವ ಜನತೆಗೆ ಅನ್ಯಾಯವಾಗಲು ಬಿಡಬಾರದು. ಎಲ್ಲರಿಗೂ ಉದ್ಯೋಗಾವಕಾಶಗಳು ಲಭಿಸಬೇಕು. ಈ ದಿಸೆಯಲ್ಲಿ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಸದನದ ಗಮನ ಸೆಳೆದರು.

# ಮಹನೀಯರ ಜಯಂತಿ ಪೂರ್ವಭಾವಿ ಸಭೆ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ:**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಜಿಲ್ಲಾ ಕೇಂದ್ರದಲ್ಲಿ ಡಿ.29 ರಂದು ಕುವೆಂಪು ಜನ್ಮದಿನ ವಿಶ್ವಮಾನವ ದಿನಾಚರಣೆ ಹಾಗೂ ಜ.01 ರಂದು ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿಯ ಸಂಸ್ಮರಣಾ ದಿನಾಚರಣೆ ಅಚ್ಚುಕಟ್ಟಾಗಿ ಆಯೋಜಿಸುವ ಕುರಿತು ಚರ್ಚಿಸಲು ಡಿ.20 ರಂದು ಸಂಜೆ 04 ಗಂಟೆಗೆ ನಗರದ ಹಳೆಯ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಿದ್ಧತಾ ಸಭೆ ಏರ್ಪಡಿಸಲಾಗಿದೆ. ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಅವರು ತಿಳಿಸಿದ್ದಾರೆ.

# ಅಂಬೇಡ್ಕರ ಕಲಮ್ ಪುರಾಣಿಕರು ಆದರ್ಶವಾಗಲಿ: ಪ್ರೊ.ಎಸ್.ವಿ.ಡಾಣಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ವಿದ್ಯಾರ್ಥಿಗಳಿಗೆ ದಮನಿತ ಸಮುದಾಯದ ಪಾಲಿನ ಸೂರ್ಯರಾದ ಡಾ. ಬಿ.ಆರ್. ಅಂಬೇಡ್ಕರ್, ಮಹಾನ್ ಕನಸುಗಾರ ಎ.ಪಿ.ಜೆ ಅಬ್ದುಲ್ ಕಲಮ್, ಮೊದಲು ಮಾನವನಾಗು ಎಂಬ ಸಂದೇಶ ಸಾರಿದ ಸಿದ್ದಯ್ಯ ಪುರಾಣಿಕರಂಥವರು ಆದರ್ಶವಾಗಬೇಕೆಂದು ಕೊಪ್ಪಳ ವಿಶ್ವವಿದ್ಯಾಲಯದ ಕುಲಸಚಿವರಾದ ಪ್ರೊ.ಶರಣಪ್ಪ ವಿ.ಡಾಣಿಯವರು ಅಭಿಪ್ರಾಯಪಟ್ಟರು.

ಅವರು ಕೊಪ್ಪಳ ವಿಶ್ವವಿದ್ಯಾಲಯ ವ್ಯಾಪ್ತಿಯ ಯಲಬುರ್ಗಾ ಪಿ.ಜಿ ಸೆಂಟರ್ ನ ಗಣಿತ ಶಾಸ್ತ್ರ ವಿಭಾಗದಲ್ಲಿ ದ್ವಿತೀಯ ವರ್ಷದ ವಿದ್ಯಾರ್ಥಿಗಳಿಂದ ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತಕ್ಕಾಗಿ ಆಯೋಜಿಸಿದ್ದ ಅಭ್ಯುದಯ–2025 ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡುತ್ತಿದ್ದರು. ಏಕಾಗ್ರತೆಯಿಂದ ಅದ್ಯಯನ ಮಾಡದೇ ಯಶಸ್ಸು ಸಾಧ್ಯವಿಲ್ಲವಾದ್ದರಿಂದ ವಿದ್ಯಾರ್ಥಿಗಳು ನಿರಂತರ ಪರಿಶ್ರಮದ ಮೂಲಕ ಸಾಧನೆ ಮಾಡಬೇಕು,

ಜಾಗತಿಕ ಸಂಗತಿಗಳನ್ನು ತಿಳಿಯುವಂತಾಗಲು ಅಂತರ್ಜಾಲ ಸೌಲಭ್ಯಗಳನ್ನು ಸಹ ಒದಗಿಸುವುದಾಗಿ ಅವರು ಭರವಸೆ ನೀಡಿದರಲ್ಲದೇ, ಮರು ಭೂಮಿಯಲ್ಲಿ ಸಿಕ್ಕ ಓಯಸ್ಸಿಸ್ ನಂತೆ ಕಲ್ಯಾಣ ಕರ್ನಾಟಕ ಭಾಗದಲ್ಲಿ ಸ್ಥಾಪಿಸಲಾಗಿರುವ ಕೊಪ್ಪಳ ವಿಶ್ವವಿದ್ಯಾಲಯದ ಸದುಪಯೋಗ ಪಡೆದು ಜೀವನದಲ್ಲಿ ಮುಂದೆ ಬರಬೇಕೆಂದರು.

ಪ್ರೊ.ಕೆ.ಎಸ್ ಛತ್ರದ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ ವಿದ್ಯಾರ್ಥಿಗಳಿಗೆ ಅಧ್ಯಯನದ ಮಹತ್ವದ ಬಗ್ಗೆ ತಿಳಿಸಿದರು.

ಈ ವೇಳೆ ಡಾ.ರವೀಂದ್ರ ಬಟಗೇರಿ ಹಾಗೂ ನಾಗಪ್ಪ ಹೂವಿನಭಾವಿ ವಿದ್ಯಾರ್ಥಿಗಳಿಗೆ ಹಲವು ಮಾರ್ಗದರ್ಶನ ನೀಡಿದರು. ಮಹಮದ ಮನ್ಸೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ಗಣಿತಶಾಸತ್ರ ವಿಭಾಗದ ಉಪನ್ಯಾಸಕರಾದ ಕು.ಅಂಬಿಕಾ, ಮುತ್ತಪ್ಪ ದೇವರಮನಿ ಸೇರಿದಂತೆ ವಿವಿಧ ವಿಭಾಗಗಳ ಬೋಧಕ ಸಿಬ್ಬಂಧಿ ವಿದ್ಯಾರ್ಥಿಗಳು ಈ ವೇಳೆ ಉಪಸ್ಥಿರಿದ್ದರು.

# ಯಲಬುರ್ಗಾ ಶಿಕ್ಷಣ ಕಾಶಿಯಾಗಿ ನಿರ್ಮಾಣಗೊಳ್ಳುತ್ತಿದೆ : ಗುತ್ತಿ



**ಮಲ್ಲಮ್ಮ ನುಡಿ ವಾರ್ತೆ**

**ಕುಕನೂರ:** ರಾಜ್ಯದಲ್ಲಿಯೇ ಅಭಿವೃದ್ಧಿ ಹರಿಕಾರರು ಎಂದು ಖ್ಯಾತಿಪಡೆದಿರುವ ಬಸವರಾಜ ರಾಯರೆಡ್ಡಿ ಅವರ ದೂರ ದೃಷ್ಟಿಯ ಕಾರ್ಯವೈಕರಿಯಿಂದ ಯಲಬುರ್ಗಾ ವಿಧಾನಸಭಾ ಕ್ಷೇತ್ರ ಶಿಕ್ಷಣ ಕಾಶಿಯಾಗಿ ನಿರ್ಮಾಣಗೊಳ್ಳುತ್ತಿದೆ ಎಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಕುಕನೂರು ತಾಲೂಕ ಅಧ್ಯಕ್ಷ ಸಂಗಮೇಶ್ ಗುತ್ತಿ ಹೇಳಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಆಯೋಜಿಸಿದ್ದ ಪತ್ರಿಕಾಗೋಷ್ಠಿ ಉದ್ದೇಶಿಸಿ ಸಂಗಮೇಶ ಗುತ್ತಿ ಮಾತನಾಡುತ್ತಾ ಸುಮಾರು 30 ತಿಂಗಳ ಅವಧಿಯಲ್ಲಿ ಕ್ಷೇತ್ರದಲ್ಲಿ ಅಭಿವೃದ್ಧಿ ಪರ್ವವೇ ಜರುಗಿದ್ದು ವಿಶೇಷವಾಗಿ ಯಲಬುರ್ಗಾ ಕ್ಷೇತ್ರಕ್ಕೆ 2025–26ನೇ ಸಾಲಿಗೆ 11 ಕರ್ನಾಟಕ ಪಬ್ಲಿಕ್ ಶಾಲೆ ಮಂಜುರಾಗಿರುವುದು ಅಭಿವೃದ್ಧಿಯ ಪರ್ವ ಎಂದರೆ ತಪ್ಪಾಗಲಾರದು.

ಕುಕನೂರು ಮತ್ತು ಯಲಬುರ್ಗಾ ತಾಲೂಕುಗಳನ್ನು ಒಳಗೊಂಡ ವಿಧಾನಸಭಾ ಕ್ಷೇತ್ರದಲ್ಲಿ 2018ರಲ್ಲಿ ಎರಡು ಕೆಪಿಎಸ್ ಶಾಲೆ ಮಂಜೂರಾಗಿದ್ದು ಅವುಗಳ ನಂತರ ಇದೀಗ 11 ನೂತನ ಕೆಪಿಎಸ್ ಮಾದರಿ ಶಾಲೆಗೆ ಅನುಮೋದನೆ ದೊರೆತಿದ್ದು ಜೊತೆಗೆ ಇದೆ ಅವಧಿಯಲ್ಲಿ 18 ಪ್ರೌಢಶಾಲೆ ಮತ್ತು 7 ಪದವಿ ಪೂರ್ವ ವಿದ್ಯಾಲಯಗಳನ್ನು ಮಂಜೂರ ಮಾಡಿಸಿ ಕ್ಷೇತ್ರದ ಬಡ ವಿದ್ಯಾರ್ಥಿಗಳ ಪಾಲಿಗೆ ವರದಾನ ನಿರ್ಮಾಣವಾಗಿದೆ ಎಂದು ಹೇಳಿದರು. ರಾಜ್ಯಾದ್ಯಂತ ಒಟ್ಟು 900 ಕೆಪಿಎಸ್ ಶಾಲೆಗಳನ್ನು ಮಂಜೂರು ಮಾಡಿದ್ದು ಅದರಲ್ಲಿ ಯಲಬುರ್ಗಾ ವಿಧಾನಸಭಾ ಕ್ಷೇತ್ರಕ್ಕೆ ಸಿಂಹ ಪಾಲು ದೊರೆತಿದ್ದು 11 ನೂತನ ಕೆಪಿಎಸ್ ಶಾಲೆಗಳು ಇದೇ ವರ್ಷದಿಂದ ಕಾರ್ಯರಂಭಗೊಳ್ಳಲಿದೆ. ಪ್ರತಿ ಶಾಲೆಗೂ ವಾರ್ಷಿಕವಾಗಿ ನಾಲ್ಕು ಕೋಟಿ ರೂಪಾಯಿಗಳನ್ನು ಅನುದಾನವಾಗಿ ನೀಡಲಿದ್ದು ಶಾಲೆಗಳು ದಿಭಾಷ ನೀತಿಯಲ್ಲಿ ಪಠ್ಯಗಳು ಇರಲಿದ್ದು ಪೂರ್ವ ಪ್ರಾಥಮಿಕ ಶಾಲೆಯಿಂದ ಪದವಿ ಪೂರ್ವ ವಿದ್ಯಾಲಯಗಳ ವರೆಗೆ ವ್ಯಾಸಂಗವನ್ನು ಒಳಗೊಂಡಿರುತ್ತದೆ. ಕೆಕೆಆರ್‌ಡಿಬಿ ಇಂದ ಎಂಟು ಶಾಲೆಗಳು ಹಾಗೂ ಏಷ್ಯನ್ ಡೆವಲಪ್ಮೆಂಟ್ ಬ್ಯಾಂಕ್ ಅನುದಾನದಲ್ಲಿ ಆರು ಶಾಲೆಗಳು ಪ್ರಾರಂಭಗೊಳ್ಳಲಿದ್ದು ಕುಕನೂರು ತಾಲೂಕಿಗೆ ಆರು ಹಾಗೂ ಯಲಬುರ್ಗಾ ತಾಲೂಕಿನಲ್ಲಿ 8 ಶಾಲೆಗಳು ಕಾರ್ಯನಿರ್ವಹಿಸಲಿವೆ ಜೊತೆಗೆ ಎಲ್ಲಾ ಮೂಲಭೂತ ಸೌಲಭ್ಯದೊಂದಿಗೆ ವಿದ್ಯಾರ್ಥಿಗಳಿಗೆ ಖಾಸಗಿ ಶಾಲೆಗಳಂತೆ ಬಸ್ ಸೌಲಭ್ಯಗಳನ್ನು ಕೂಡ ಅಳವಡಿಸಲಾಗುವುದು. ಉಳ್ಳವರು ಮಾತ್ರ ಖಾಸಗಿ ಶಾಲೆಯಲ್ಲಿ ಪ್ರವೇಶ ಪಡೆಯುವುದನ್ನು ಮನಗಂಡ ರಾಜ್ಯ ಸರ್ಕಾರ ರಾಜ್ಯಾದ್ಯಂತ ಖಾಸಗಿ ಶಾಲೆಗಳಿಗೆ ಪೈಪೋಟಿನ್ ನೀಡುವ ದೃಷ್ಟಿಯಿಂದ ಬಡ ವಿದ್ಯಾರ್ಥಿಗಳು ಸಹ ಖಾಸಗಿ ವಿದ್ಯಾರ್ಥಿಗಳೊಂದಿಗೆ ಪೈಪೋಟಿಯಾಗಿ ಶಿಕ್ಷಣ ಪಡೆಯಲಿ ಎಂಬ ಮುಂದಾಲೋಚನೆಯನ್ನು ಸರಕಾರ ಹೊಂದಿರುವ ಸಿದ್ದರಾಮಯ್ಯನವರ ಸರ್ಕಾರದಲ್ಲಿ ಬಸವರಾಜ ರಾಯರೆಡ್ಡಿ ಅವರ ಪಾತ್ರ ಅಮೋಘವಾಗಿದೆ ಜೊತೆಗೆ ಕ್ಷೇತ್ರದಲ್ಲಿ ಪೂರ್ವ ಪ್ರಾಥಮಿಕದಿಂದ ಸ್ನಾತಕೋತ್ತರ ಪದವಿಯವರೆಗೆ ವಿದ್ಯಾಭ್ಯಾಸದ ಸೌಲಭ್ಯ ಕಲ್ಪಿಸಿರುವ ರಾಯ–ರೆಡ್ಡಿ ಅವರಿಗೆ ಕುಕನೂರು ಬ್ಲಾಕ್ ಕಾಂಗ್ರೆಸ್ ವತಿಯಿಂದ ಕೃತಜ್ಞತೆಯನ್ನು ಸಲ್ಲಿಸಲಾಗುವುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪ್ರಾಥಮಿಕ ಕೃಷಿಪತ್ತಿನ ಅಧ್ಯಕ್ಷರಾದ ಸಿದ್ದಯ್ಯ ಕಳ್ಳಿಮತ, ರೈಮನ್ ಸಾಬ್ ಮಕಪ್ಪನವರ್, ಗಗನ ನೋಟಗಾರ, ಯಮನೂರಪ್ಪ ಕಟ್ಟಿಮನಿ, ಕಾರ್ತಿಕ್ ಜಾದವ್ ಮತ್ತು ಮುತ್ತು ವಾಲ್ಮೀಕಿ ಪಾಲ್ಗೊಂಡಿದ್ದರು.

# ರೈತರ ನೆಲಮೂಲ ಸಂಸ್ಕೃತಿಯ ಹಬ್ಬ ಎಳ್ಳು ಅಮಾವಾಸ್ಯೆ

**ಉತ್ತರ ಕರ್ನಾಟಕದ ಗ್ರಾಮೀಣ ಪರಿಸರದ ಸಾಂಸ್ಕೃತಿಕ ಸಂಭ್ರಮ ಹೆಚ್ಚಿಸಿರುವ ನೆಲಮೂಲ ಸಂಸ್ಕೃತಿಯ ಹಬ್ಬ ಎಳ್ಳ ಅಮವಾಸ್ಯೆ. ರೈತ ಕುಟುಂಬ ಪರಿವಾರಗಳಲ್ಲಿ ಪಾರಂಪರಿಕ ಸಂಪ್ರದಾಯದಿಂದ, ಸಂಸ್ಕೃತಿಯಿಂದ ಆಚರಿಸಿಕೊಂಡು ಬಂದಿರುವ ವಿಶೇಷ ಹಬ್ಬವೇ ಈ ಎಳ್ಳು ಅಮವಾಸ್ಯೆ.**

ಈ ಹಬ್ಬ ದಕ್ಷಿಣಾಯನದ ಮಾರ್ಗಶಿರಮಾಸದ ಅಮಾವಾಸ್ಯೆಯ ದಿನವಾಗಿದ್ದು, ಉತ್ತರ ಕರ್ನಾಟಕದಲ್ಲಿ ಹಿಂಗಾರು ಹಂಗಾಮಿನಲ್ಲಿ ಭೂತಾಯಿಗೆ ಚರಗ ಚೆಲ್ಲುವ ಮೂಲಕ ಆಚರಿಸುತ್ತಾರೆ. ಕರ್ನಾಟಕ ಮತ್ತು ಆಂಧ್ರ ಪ್ರದೇಶದಲ್ಲಿಯ ರೈತರು ಈ ದಿನವನ್ನು ಅರ್ಥಪೂರ್ಣವಾಗಿ ಆಚರಿಸುತ್ತಾರೆ. ಉತ್ತರ ಕರ್ನಾಟಕ ಹಾಗೂ ದಕ್ಷಿಣ ಕನ್ನಡ ಪ್ರದೇಶದಲ್ಲಿ ವಿಭಿನ್ನ ರೀತಿಯಲ್ಲಿ ಇದನ್ನು ಆಚರಿಸುತ್ತಾರೆ. ಎಳ್ಳು ಅಮಾವಾಸ್ಯೆ ಹಬ್ಬದ ದಿನವು ನಮ್ಮ ಆಹಾರ ಸಂಸ್ಕೃತಿಯ ಪ್ರತೀಕವಾಗಿದೆ.




ಎಳ್ಳು ಅಮಾವಾಸ್ಯೆ ರೈತರ ಬದುಕಿನ ಸಂಭ್ರಮ, ಭೂಮಿತಾಯಿಯ ಪೂಜೆ, ಹಿಂಗಾರು ಬೆಳೆಗಳ ಸಮೃದ್ಧಿ, ಮತ್ತು ಎಳ್ಳು ಬೆಲ್ಲದ ಮಹತ್ವವನ್ನು ವರ್ಣಿಸುತ್ತದೆ. ಭೂಮಿಗೆ ಪೂಜೆ ಸಲ್ಲಿಸಿ, ಚರಗ ಚೆಲ್ಲಿ, ಕುಟುಂಬ ಸಮೇತ ಬಗೆಬಗೆಯ ಆಹಾರ ಖಾದ್ಯಗಳೊಂದಿಗೆ ಸಹಭೋಜನ ಮಾಡಲಾಗುತ್ತದೆ, ಇದು ಕೃಷಿಕರ ತಮ್ಮ ಕಷ್ಟಕಾರ್ಪಣ್ಯಗಳ ನಡುವೆಯೂ ಸಂತೋಷವನ್ನು ಹಂಚಿಕೊಳ್ಳುವ ಸಂಭ್ರಮದ ಹಬ್ಬವಾಗಿದೆ.

ಇದೊಂದು ರೈತರ ಹಬ್ಬ. ರೈತರು ಅವರ ಜಮೀನಿನಲ್ಲಿ ಎಳ್ಳು ಹಾಗೂ ಬೆಲ್ಲವನ್ನು ನೈವಿಧ್ಯ ಸ್ವರೂಪದಲ್ಲಿ ಚಿಮ್ಮುತ್ತಾರೆ. ಇವುಗಳು ಭೂಮಿಯ ಫಲವತ್ತತೆಯನ್ನು ಕಾಪಾಡುವ ಎರೆಹುಳಗಳಿಗೆ ಆಹಾರವಾಗುತ್ತದೆಯೆಂಬ ಉದ್ದೇಶದಿಂದ ಚಿಮ್ಮಲಾಗುತ್ತದೆ. ಅವರ ಹೊಲದಲ್ಲಿ ಬೆಳೆದ ಹಿಂಗಾರು ಪೈರುಗಳ ನಡುವೆ ಬನ್ನಿಮರಕ್ಕೆ ಪೂಜೆ ಮಾಡಿ ಭೂಮಿತಾಯಿಗೆ ಚರಗ ಚೆಲ್ಲುವುದು ಈ ಹಬ್ಬದ ವಿಶೇಷವಾಗಿದೆ.

ಕೆಲವರು ಪಾಂಡವರ ಸ್ವರೂಪವಾಗಿ ಐದು ಕಲ್ಲುಗಳಿಗೆ ಪೂಜೆ ಸಲ್ಲಿಸುತ್ತಾರೆ. ಈ ದಿನಕ್ಕೆ ಮೂರು ನಾಲ್ಕು ದಿನವಿರುವಾಗಲೇ ರೈತರ ಮನೆಗಳಲ್ಲಿ ನಾನಾ ರೀತಿಯ ಅಗಸಿಚಟ್ನಿ, ಶೇಂಗಾಚಟ್ನಿ, ಗುರೆಳ್ಳು ಚಟ್ನಿ, ಹೆಸರು ಕಾಳು, ಮಡಿಕೆಕಾಳು, ಎಣ್ಣೆಗಾಯಿ, ಎಳ್ಳು ಹಾಗೂ ಸೇಂಗಾ ಹೋಳಿಗೆ, ಎಳ್ಳು ಹಚ್ಚಿದ ಸಜ್ಜೆ, ಜೋಳದ ರೊಟ್ಟಿ, ಚಿಕ್ಕಿ, ಗಜ್ಜರಿ, ಸೌತಿಕಾಯಿ, ಮೆಂತ್ಯೆ ಪಲ್ಯಗಳು, ಉಪ್ಪಿನ ಕಾಯಿ, ಹುರಣದ ಹೋಳಿಗೆ, ಅನ್ನ ಸಾಂಬಾರು, ವಿವಿಧ ರೀತಿಯಲ್ಲಿ ಊಟಕ್ಕೆ ಆಹಾರ ತಯಾರಿಸುತ್ತಾರೆ, ಹೀಗೆ ನಾನಾ ಬಗೆಯ ಖಾದ್ಯಗಳನ್ನು ತಯಾರಿಸಿ ನಂತರ ರೈತಾಪಿ ವರ್ಗದವರು ಕುಟುಂಬ ಸಮೇತರಾಗಿ ಸಹಭೋಜನ ಮಾಡಿ ಸಂಭ್ರಮಿಸುತ್ತಾರೆ.

**ವೈಜ್ಞಾನಿಕ ಕಾರಣ** : ಎಳ್ಳು ಅಮಾವಾಸ್ಯೆಯ ಸಮಯದಲ್ಲಿ ಹಿಂಗಾರು ಪೈರುಗಳು ಬೆಳೆದಿರುತ್ತವೆ. ಉತ್ತರ ಕರ್ನಾಟಕದಲ್ಲಿ ಹೆಚ್ಚಾಗಿ ಜೋಳ, ಕುಸುಬಿ ಮತ್ತು ಕಡಲೆಯನ್ನು ಬೆಳೆಯುತ್ತಾರೆ. ಹಾಗಾಗಿ ಜೋಳದ ಮಧ್ಯೆ ಕಡಲೆ ಬೆಳೆಗೆ ಕಾಯಿಕೊರಕ ಹುಳುವು ಬಿದ್ದು ಬೆಳೆಯ ನಾಶಕ್ಕೆ ಕಾರಣವಾಗುತ್ತದೆ. ಆದ್ದರಿಂದ ನಾನಾ ಬಗೆಯ ಖಾದ್ಯಗಳನ್ನು ಚರಗ ಚೆಲ್ಲಿದಾಗ ಅವುಗಳನ್ನು ತಿನ್ನುವ ಸಲುವಾಗಿ ಹಕ್ಕಿಗಳು ಹೊಲಕ್ಕೆ ಬಂದಾಗ ಈ ಹುಳಗಳನ್ನು ಕಂಡು ಅವುಗಳನ್ನು ತಿನ್ನುತ್ತವೆ. ಇದರಿಂದ ಕಾಯಿಕೊರಕದ ಹುಳುಗಳ ನಿಯಂತ್ರಣವಾಗುತ್ತದೆ. ಈ ಕಾರಣಕ್ಕಾಗಿ ಚರಗ ಚೆಲ್ಲುವ ಹಬ್ಬವನ್ನು ಆಚರಿಸಿಕೊಂಡು ಬರಲಾಗುತ್ತದೆ ಎಂದು ಹಿರಿಯ ರೈತರು ಹೇಳುತ್ತಾರೆ. ಈ ವೈಜ್ಞಾನಿಕ ಕಾರಣವು ನಮ್ಮ ಪ್ರಾಚೀನ ಸಾವಯವ ಕೃಷಿ ವ್ಯವಸಾಯ ಪದ್ಧತಿಗೆ ಪೂರಕವಾಗಿದೆ.



**ಎತ್ತಿನ ಬಂಡಿಯ ಅಲಂಕಾರ**: ಈ ದಿನ ರೈತರು ತಮ್ಮ ಎತ್ತುಗಳಿಗೆ ಜೂಲ ಹಾಕಿ ಕೊಂಬಣಸು, ಗೊಂಡೆ, ಹಣೆಕಟ್ಟುಗಳಿಂದ ಅಲಂಕಾರ ಮಾಡುತ್ತಾರೆ. ಅವುಗಳ ಕೊರಳಿಗೆ ಮತ್ತು ಹಣೆಗೆ ಕಟ್ಟಿದ ಗೆಜ್ಜೆಯನ್ನು ನುಡಿಸುತ್ತ ಹೊಲಗಳ ಕಡೆಗೆ ಎತ್ತಿನ ಬಂಡಿಯನ್ನು ಹೊಡದುಕೊಂಡು ಹೋಗುವ ರೀತಿಯು ಗ್ರಾಮೀಣ ಪರಿಸರದ ಸೊಗಡನ್ನು ಪರಿಚಯಿಸುತ್ತದೆ.

ರೈತರು ಕೃಷಿ ಕೆಲಸಕ್ಕೆ ವಿರಾಮ ನೀಡಿ ಬಂಧು ಬಾಂಧವರನ್ನು ಆಹ್ವಾನಿಸಿ, ಕುಟುಂಬದ ಸದಸ್ಯರೊಂದಿಗೆ ಶೇಂಗಾ ಹೋಳಿಗೆ, ರೊಟ್ಟಿ, ಕಡುಬು ಮುಂತಾದ ವಿಶೇಷ ಖಾದ್ಯಗಳನ್ನು ಸವಿದು, ಸಂಭ್ರಮದಿಂದ ಆಚರಿಸುವ ಎಳ್ಳ ಅಮವಾಸ್ಯೆ ರೈತರ ನೆಲಮೂಲ ಸಂಸ್ಕೃತಿಯ ಹಬ್ಬವಾಗಿದೆ.

**ಡಾ.ಚಂದ್ರಶೇಖರ ಕಾಳನ್ನವರ**
ಉಪನ್ಯಾಸಕರು
ಬಾಗಲಕೋಟೆ

# ಇನಾಂ ಹಂಚಿನಾಳದಲ್ಲಿ ಇಂದು ಕನ್ನಡ ಜಾನಪದ ಸಮ್ಮೇಳನ

**ಮಲ್ಲಮ್ಮ ನುಡಿ ಬಾಗಲಕೋಟೆ:**
ಜಿಲ್ಲೆಯ ಬೀಳಗಿ ತಾಲೂಕಿನ ಪ್ರಥಮ ಕನ್ನಡ ಜಾನಪದ ಸಮ್ಮೇಳನ ಡಿ.19 ರಂದು ಬಾಡಗಿ ಗ್ರಾಮದ ಬಕ್ಕೇಶ್ವರ ಮಠದಲ್ಲಿ ನಡೆಯಲಿದೆ.

ಕನ್ನಡ ಜಾನಪದ ಪರಿಷತ್ ಜಿಲ್ಲಾ ಘಟಕ, ತಾಲೂಕು ಘಟಕ ಮತ್ತು ಬಾಡಗಿ ವಲಯ ಘಟಕದ ಆಶ್ರಯದಲ್ಲಿ ಜಾನಪದ ಹಿರಿಯ ಕಲಾವಿದ ಪುಂಡಲೀಕಪ್ಪ ಗುಂಡಪ್ಪ ಗಾಣಗೇರ ಸರ್ವಾಧ್ಯಕ್ಷತೆಯಲ್ಲಿ ಜರುಗಲಿದೆ.

ಶುಕ್ರವಾರ ಬೆಳಿಗ್ಗೆ 7–30 ಗಂಟೆಗೆ ಧ್ವಜಾರೋಹಣ, 8–30ಕ್ಕೆ ಸಮ್ಮೇಳನಾಧ್ಯಕ್ಷರ ಮೆರವಣಿಗೆ ಬಕ್ಕೇಶ್ವರ ಮಠದ ಪೀಠಾಧಿಕಾರಿಗಳ ನೇತೃತ್ವದಲ್ಲಿ ಬಾಲಕಿಯರ ಮತ್ತು ಪುರುಷರ ಡೊಳ್ಳು, ಕರಡಿ ಮಜಲು, ಹಲಗಿ ಮಜಲು, ಸಂಬಾಳ ವಾದನ, ಕೊಂಬು ಕಹಳೆ, ಭಜನಾ ತಂಡ ಸೇರಿದಂತೆ ವಿವಿಧ ಕಲಾ ತಂಡದೊಂದಿಗೆ ಜರುಗಲಿದೆ.

ಮುಂಜಾನೆ 9–30 ಗಂಟೆಗೆ ಉದ್ಘಾಟನಾ ಸಮಾರಂಭ ನಡೆಯಲಿದ್ದು, ಸಾನ್ನಿಧ್ಯವನ್ನು ಗಿರಿಸಾಗರದ ರುದ್ರಮುನಿ ಸ್ವಾಮೀಜಿ, ಬಕ್ಕೇಶ್ವರ ಮಠದ ಬಕ್ಕಯ್ಯ ಸ್ವಾಮೀಜಿ ವಹಿಸುವರು. ಕನ್ನಡ ಜಾನಪದ ಪರಿಷತ್ ರಾಜ್ಯಾಧ್ಯಕ್ಷ ಡಾ.ಎಸ್. ಬಾಲಾಜಿ ಸಮ್ಮೇಳನ ಉದ್ಘಾಟಿಸುವರು. ಜಿಲ್ಲಾಧ್ಯಕ್ಷ ಡಿ.ಎಂ.ಸಾವಕಾರ ಅಧ್ಯಕ್ಷತೆ ವಹಿಸುವರು.

ರಾಜ್ಯ ಕಾರ್ಯದರ್ಶಿ ಪ್ರೊ.ಕೆ.ಎಸ್. ಕೌಜಲಗಿ ಮೇಲಪ್ಪ ಕೆಂಪಲಿಂಗಣ್ಣವರ ರಚಿತ 'ಶಿವಶರಣೆ ಹೇಮರಡ್ಡಿ ಮಲ್ಲಮ್ಮ' ಕೃತಿ ಲೋಕಾರ್ಪಣೆಗೊಳಿಸುವರು. ಕಸಾಪ ರಾಜ್ಯ ಕಾರ್ಯಕಾರಿಣಿ ಸದಸ್ಯ ಜಿ.ಕೆ.ತಳವಾರ ಗಂಗಾ ನುಚ್ಚಿನ ಏಕವ್ಯಕ್ತಿ ಚಿತ್ರಕಲಾ ಪ್ರದರ್ಶನಕ್ಕೆ ಚಾಲನೆ ನೀಡುವರು. ಕಜಾಪ ತಾಲೂಕಾಧ್ಯಕ್ಷ ಬಸವರಾಜ ನಾಯ್ಕ ಪ್ರಾಸ್ತಾವಿಕ ನುಡಿ ಹೇಳುವರು. ಕನ್ನಡ ಜಾನಪದ ಪರಿಷತ್ ತಾಲೂಕು ಮತ್ತು ಮಹಿಳಾ ಘಟಕಗಳ ಪದಾಧಿಕಾರಿಗಳು ಅಧಿಕಾರ ಸ್ವೀಕರಿಸುವರು.

ಮುಖ್ಯ ಅತಿಥಿಗಳಾಗಿ ಪ್ರಗತಿಪರ ರೈತ ಎಸ್.ಟಿ.ಪಾಟೀಲ, ಇನಾಂಹಂಚಿನಾಳ ಪಿಕೆಪಿಎಸ್ ಅಧ್ಯಕ್ಷ ಶ್ರೀಶೈಲ ನಿರಾಣಿ, ತಹಶೀಲ್ದಾರ ವಿನೋದ ಹತ್ತಳ್ಳಿ, ಸಿಪಿಐ ಹನಮಂತ ಸಣಮನಿ, ಜಾನಪದ ಆಶುಕವಿ ಸಿದ್ದಪ್ಪ ಬಿದರಿ, ಕಜಾಪ ಜಿಲ್ಲಾ ಕಾರ್ಯದರ್ಶಿ ಆರ್.ಬಿ.ನಬಿವಾಲೆ, ಪಿಕಾರ್ಡ ಬ್ಯಾಂಕ್ ನಿರ್ದೇಶಕ ಹನಮಂತ ಸಿಂಗರಡ್ಡಿ, ಮುಖಂಡರಾದ ವೆಂಕಣ್ಣ ದ್ಯಾವಣ್ಣವರ, ಸತ್ಯಪ್ಪ ಕುರಿ, ರವೀಂದ್ರ ಜಕರಡ್ಡಿ, ಶಿವಾನಂದ ಹಿರೇಮಠ, ಚಂದ್ರಶೇಖರ ನಡುವಿನಮನಿ, ಮಂಜುನಾಥ ಧೂಪದ, ಸುಭಾಸ ರಾಠೋಡ ಆಗಮಿಸುವರು.

11–30 ಗಂಟೆಗೆ ನಡೆಯುವ ಗೋಷ್ಠಿಯ ಸಾನ್ನಿಧ್ಯವನ್ನು ಬಕ್ಕೇಶ್ವರ ಮಠದ ಶಿವಾನಂದ ಸ್ವಾಮೀಜಿ ವಹಿಸುವರು. ಸಾಹಿತಿ ವೀರೇಂದ್ರ ಶೀಲವಂತ ಅಧ್ಯಕ್ಷತೆ ವಹಿಸುವರು. ಸರ್ವಾಧ್ಯಕ್ಷ ಪುಂಡಲೀಕಪ್ಪ ಗಾಣಗೇರ ಅವರ ಬದುಕು–ಸಾಧನೆ ಕುರಿತು ಡಾ.ಎಸ್.ಕೆ.ಬಂಗಾರಿ ಮಾತನಾಡುವರು. ಮುಖ್ಯ ಅತಿಥಿಗಳಾಗಿ ಎಲ್. ಬಿ.ಕುರ್ತಕೋಟಿ, ಬಿ.ಆರ್.ಸೊನ್ನದ, ಜಿ.ಆರ್.ಹವೇಲಿ ಆಗಮಿಸುವರು. ಬಳಿಕ ವಿವಿಧ ಗ್ರಾಮಗಳಿಂದ ಆಗಮಿಸುವ 30ಕ್ಕೂ ಹೆಚ್ಚು ಕಲಾತಂಡಗಳ ಪ್ರದರ್ಶನ ನಡೆಯಲಿದೆ.

ಮಧ್ಯಾಹ್ನ 3–30ಕ್ಕೆ ಡಿ.ಎಂ.ಸಾವಕಾರ ಉಪಸ್ಥಿಯಲ್ಲಿ ಬಹಿರಂಗ ಅಧಿವೇಶನ ನಡೆಯಲಿದೆ. ಬಸವರಾಜ ನಾಯ್ಕ ಅಧ್ಯಕ್ಷತೆ ವಹಿಸುವರು. ಎಂ.ಬಿ.ತಾಂಬೋಳಿ, ಗೋದಾವರಿ ಮೂರಜಾವದಮಠ ನಿರ್ಣಯ ಮಂಡಿಸುವರು. ಎಚ್.ಬಿ. ಮಾಳಗೊಂಡ, ದಯಾನಂದ ಪೂಜಾರಿ ಮತ್ತು ಪದಾಧಿಕಾರಿಗಳು ಉಪಸ್ಥಿತರಿರುವರು. ಸಾಯಂಕಾಲ 4 ಗಂಟೆಗೆ ನಡೆಯುವ ಸನ್ಮಾನ ಮತ್ತು ಸಮಾರೋಪ ಸಮಾರಂಭದ ಸಾನಿಧ್ಯವನ್ನು ಕಲ್ಮಠದ ಗುರುಪಾದ ಶಿವಾಚಾರ್ಯ ಸ್ವಾಮೀಜಿ, ಬಕ್ಕೇಶ್ವರ ಮಠದ ಸಂಗಯ್ಯ ಸಾಮೀಜಿ ವಹಿಸುವರು. ಮಾಜಿ ಸಚಿವ ಎಸ್. ಆರ್.ಪಾಟೀಲ ಅಧ್ಯಕ್ಷತೆ ವಹಿಸುವರು. ಚಂದ್ರಶೇಖರ ದೇಸಾಯಿ ಅಭಿನಂದನಾ ನುಡಿ, ಸಿದ್ದು ದಿವಾಣ ಸಮಾರೋಪ ನುಡಿ ಹೇಳುವರು.

ಮುಖ್ಯ ಅತಿಥಿಗಳಾಗಿ ಕ್ಷೇತ್ರ ಶಿಕ್ಷಣಾಧಿಕಾರಿ ಆರ್.ಎಸ್.ಆದಾಪೂರ, ಸಿದ್ದಪ್ಪ ಕಡಪಟ್ಟಿ, ಅಶೋಕ ಲೆಂಕೆನ್ನವರ, ಶಿವಪ್ಪ ಅವಟಿ, ಎಚ್.ಬಿ.ಸಿಂಗರಡ್ಡಿ, ಗೌಡಪ್ಪಗೌಡ ಪಾಟೀಲ, ರಮೇಶ ಜಕರಡ್ಡಿ, ವಿರೂಪಾಕ್ಷಯ್ಯ ಹಿರೇಮಠ, ಎ.ಐ. ಮುಲ್ಲಾ ಆಗಮಿಸುವರು. ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಅರುಣ ದೇಸಾಯಿ, ಶಾಹೀರ ಬೀಳಗಿ, ರಾಯಪ್ಪ ಗುರಾಣಿ, ಮಹಾದೇವ ಆಸೋದಿ, ಆನಂದ ಮೋಖಾಶಿ, ಗಂಗಪ್ಪ ಮಾದರ, ಗೂಳಪ್ಪ ಬಿದರಿ, ಪ್ರಭಯ್ಯ ಹಿರೇಮಠ, ಯಲ್ಲಪ್ಪ ಸುಳಕೋಡ, ಸೋಮಲಿಂಗ ಬೇಡರ, ಶ್ರೀಶೈಲಪ್ಪ ಜತ್ತಿ ಸೇರಿದಂತೆ 40ಕ್ಕೂ ಹೆಚ್ಚು ಸಾಧಕರನ್ನು ಸನ್ಮಾನಿಸಲಾಗುತ್ತದೆ.

## ಮಂಗಲ ಭವನ ನಿರ್ಮಾಣಕ್ಕೆ ದೇಣಿಗೆ



ಮಲ್ಲಮ್ಮ ನುಡಿ ವಾರ್ತೆ
**ಬಾಗಲಕೋಟೆ:**–ತಾಲೂಕಿನ ಹಳ್ಳೂರ ಗ್ರಾಮದ ಸುಪ್ರಸಿದ್ಧ ಬಸವೇಶ್ವರ ದೇವಸ್ಥಾನದ ಮಂಗಲ ಭವನ ನಿರ್ಮಾಣಕ್ಕೆ ಕೊಪ್ಪಳ ಜಿಲ್ಲೆಯ ಕುಕನೂರಿನ ಆಕಾಶ್ ಗ್ರೈನೆಟ್ಸ್ ಮಾಲಿಕ ಸಿದ್ದು ವಿರುಪಾಕ್ಷಪ್ಪ ಹಳ್ಳೂರ ಒಂದು ಲಾರಿ ಗ್ರೈನೆಟ್ಸ ಸ್ಲ್ಯಾಬ್ಸ್ ಹಾಗೂ 51 ಸಾವಿರ ರೂಪಾಯಿ ದೇಣಿಗೆ ನೀಡಿದ್ದಾರೆ.

ಮಂಗಳವಾರ ಬಸವಣ್ಣನ ದರ್ಶನಕ್ಕೆ ಆಗಮಿಸಿದ್ದ ಸಿದ್ದು ಹಾಗೂ ಅವರ ಪತ್ನಿ ಭಾಗ್ಯವತಿ ದೇವಸ್ಥಾನದ ಅಧ್ಯಕ್ಷ ಮಹಾಂತೇಶ ಮನಿನಾಗರ ಅವರಿಗೆ ದೇಣಿಗೆಯ ಚೆಕ್ ನೀಡಿದರು. ಈ ಸಂದರ್ಭದಲ್ಲಿ ಸಿದ್ದು ದಂಪತಿಗಳನ್ನು ಸನ್ಮಾನಿಸಲಾಯಿತು. ಶಂಭಯ್ಯ ಪೂಜಾರಿ, ಮಲ್ಲು ಕೊಟ್ನಳ್ಳಿ ಇದ್ದರು.

## ಮಹಾಸಭಾದ ಅಧ್ಯಕ್ಷರಾಗಿ ಖಂಡ್ರೆ ಅಧಿಕಾರ : ಹರ್ಷ

**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**
ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರಾಗಿ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಅಧಿಕಾರ ವಹಿಸಿ ಕೊಂಡಿರುವುದು ಹರ್ಷ ತರಿಸಿದೆ ಎಂದು ತಾಲೂಕು ವೀರಶೈವಲಿಂಗಾಯತ ಮಹಾಸಭಾದ ಅಧ್ಯಕ್ಷ ಮಲ್ಲಿಕಾರ್ಜುನ ಹಲ್ಮಂಡಗೆ, ಪ್ರಾಥಮಿಕ ಶಾಲಾ ವಿವಿಧೋದ್ದೇಶ ಬ್ಯಾಂಕ್ ನ ಕಾರ್ಯದರ್ಶಿ ನಾಗಭೂಷಣ ಮಾಮಡಿ ಹರ್ಷ ವ್ಯಕ್ತ ಪಡಿಸಿದ್ದಾರೆ.



ಈ ಹಿಂದೆಯು ಈಶ್ವರ ಖಂಡ್ರೆ ಅವರು ಮಹಾಸಭಾದ ಉಪಾಧ್ಯಕ್ಷ, ಪ್ರಧಾನ ಕಾರ್ಯದರ್ಶಿಯಾಗಿ ಉತ್ತಮವಾಗಿ ಕಾರ್ಯನಿರ್ವಹಿಸಿದ್ದಾರೆ.

ಹೊಸ ಜವಾಬ್ದಾರಿ ವಹಿಸಿ ಕೊಂಡಿರುವ ಖಂಡ್ರೆ ಅವರ ಅವಧಿಯಲ್ಲಿ ಮುಂದೆಯು ಸಮುದಾಯ ಸಂಘಟನೆ, ಪ್ರಗತಿ ಕಾಣಲಿದೆ ಎಂದು ಪ್ರಕಟಣೆಯಲ್ಲಿ ವಿಶ್ವಾಸ ವ್ಯಕ್ತ ಪಡಿಸಿದ್ದಾರೆ.

## ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ ನಿಮಿತ್ಯ ವಾಹನಗಳ ರ್‍ಯಾಲಿ ಡಿ.20ಕ್ಕೆ

**ಮಲ್ಲಮ್ಮ ನುಡಿ ವಾರ್ತೆ ಬೀದರ;**
ಡಿ.21 ರಿಂದ 24 ರವರೆಗೆ "ರಾಷ್ಟ್ರೀಯ ಪಲ್ಸ್ ಪೋಲಿಯೊ ಕಾರ್ಯಕ್ರಮ ನಿಮಿತ್ಯ ಡಿಸೆಂಬರ್.20 ರಂದು ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಛೇರಿ ಬೀದರದಿಂದ ವಾಹನಗಳ ರ್‍ಯಾಲಿ ಆಯೋಜಿಸಲಾಗಿದೆ.

ಈ ರ್‍ಯಾಲಿಯು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಛೇರಿ ಬೀದರದಿಂದ ಪ್ರಾರಂಭವಾಗಿ ನಗರದ ಚೌಬಾರಾ, ಮಂಗಲಪೇಟ್, ಅಬ್ದುಲ್ ಫೈಜ್ ದರ್ಗಾ, ಲಾಡಗೇರಿ, ಕುಂಬರವಾಡಾ, ಸಿದ್ಧಾರೂಢ ಮಠ, ಮೈಲೂರ, ಚಿದ್ರಿ, ಆದರ್ಶ ಕಾಲೋನಿ, ನೌಬಾದ ಮಾರ್ಗವಾಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ಬೀದರಗೆ ಮುಕ್ತಾಯಗೊಳ್ಳಲಿದೆ ಎಂದು ಬೀದರ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನಾಳೆ ವಿದ್ಯುತ್ ವ್ಯತ್ಯಯ

**ಮಲ್ಲಮ್ಮ ನುಡಿ ವಾರ್ತೆ ಬೀದರ:**
110ಕೆ.ವಿ ಉಪ–ವಿತರಣ ಕೇಂದ ಕ.ವಿ.ಪ್ರ.ನಿ.ನಿ. ಹುಮನಾಬಾದ (ಹುಮನಾಬಾದ ಕಾರ್ಯ ಮತ್ತು ಪಾಲನೆ ವಿಭಾಗ) ವ್ಯಾಪ್ತಿಯ ಬರುವ 110ಕೆ.ವಿ ಹುಮನಾಬಾದ, ವಿದ್ಯುತ್ ಉಪ–ಕೇಂದ್ರಗಳಲ್ಲಿ ತುರ್ತು ಕೆಲಸದ ಪ್ರಯುಕ್ತ ಡಿಸೆಂಬರ್.20 ರಂದು ಬೆಳಗ್ಗೆ 9 ರಿಂದ ಸಂಜೆ 5 ಗಂಟೆವರೆಗೆ 33ಕೆವಿ ಹುಡಗಿ, ಘಾಟಬೊರಳ, 33ಕೆ.ವಿ ಕೆ.ಪಿ.ಮೀಲ ಮತ್ತು 11ಕೆವಿ ಹುಮನಾಬಾದ ನಗರ, ಮೊಳಕೇರಾ, ಕಲ್ಲೂರಾ, ಸೇಡೊಳ, ಹಣಕುಣಿ, ಕನಕಟ್ಟಾ, ಮಾಣಿಕನಗರ, ನಂದಗಾವ, ಕೆ.ಎಚ್.ಬಿ. ಕಾಲೋನಿ, ಶಿವನಗರ ಮತ್ತು ಜೆಸ್ಕಾಂ ಮಾರ್ಗದ ಗ್ರಾಮಿಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗುತ್ತದೆ. ಕಾರಣ ಗ್ರಾಹಕರು ಸಹಕರಿಸಬೇಕೆಂದು ಹುಮನಾಬಾದ 220ಕೆವಿ ಸ್ವೀಕರಣ ಕೇಂದ್ರದ ಕಾರ್ಯನಿರ್ವಾಹಕ ಅಭಿಯಂತರರು(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆ

**ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ:**
ಪ್ರಸಕ್ತ ಸಾಲಿನ ಅಂತರಾಷ್ಟ್ರೀಯ ವಾಣಿಜ್ಯಮೇಳ–2026ರ ಅಂಗವಾಗಿ ಜಿಲ್ಲಾ ಮಟ್ಟದ ಸಿರಿಧಾನ್ಯಗಳ ಪ್ರಚಾರ ಮತ್ತು ಅರಿವು ಮೂಡಿಸುವ ಕಾರ್ಯಕ್ರಮದಡಿ ಸಿರಿಧಾನ್ಯ ಮತ್ತು ಮರೆತು ಹೋದ ಖಾದ್ಯಗಳ ಪಾಕ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಡಿಸೆಂಬರ 21 ರಂದು ಬೆಳಿಗ್ಗೆ 10 ಗಂಟೆಗೆ ಷರತ್ತುಗೊಳಪಟ್ಟು ಜಿಲ್ಲಾ ಮಟ್ಟದ ಸಿರಿಧಾನ್ಯ ಪಾಕ ಸ್ಪರ್ಧೆಯನ್ನು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಉದ್ಯಾನಗಿರಿ, ಸೀಮಿಕೇರಿ ಬೈಪಾಸ್, ಬಾಗಲಕೋಟೆಯಲ್ಲಿ ಆಯೋಜಿಸಲಾಗಿದೆ. ಜಿಲ್ಲಾ ಮಟ್ಟದ ಸ್ಪರ್ಧೆಯಲ್ಲಿ ಬಾಗಲಕೋಟೆ ಜಿಲ್ಲೆಯ ಎಲ್ಲ ಸಾರ್ವಜನಿಕರು ಭಾಗವಹಿಸಲು ಅವಕಾಶವಿರುತ್ತದೆ. ವಿದ್ಯಾರ್ಥಿಗಳು, ಕೃಷಿ ಇಲಾಖೆಯ ಅಧಿಕಾರಿ, ಸಿಬ್ಬಂದಿಗಳಿಗೆ ಭಾಗವಹಿಸಲು ಅವಕಾಶ ಇರುವುದಿಲ್ಲ.

ತೀರ್ಪುಗಾರರ ನಿರ್ಧಾರವೇ ಅಂತಿಮವಾಗಿರುತ್ತದೆ. ತಯಾರಿಸಿದ ತಿನಿಸುಗಳ ಪ್ರದರ್ಶನ, ತಯಾರಿಕೆಗೆ ಬಳಸಿದ ಪದಾರ್ಥಗಳು, ತೋರಿಕೆ, ರುಚಿ, ಸುವಾಸನಗಳ ಮೇಲೆ ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ಪ್ರಥಮ, ದ್ವಿತೀಯ ಹಾಗೂ ತೃತೀಯ ಬಹುಮಾನ ತಿನಿಸಿಗೆ ಕ್ರಮವಾಗಿ ತಲಾ ರೂ. 5000/–, ರೂ. 3000/– ಹಾಗೂ ರೂ. 2000/– ಗಳ ಬಹುಮಾನಗಳನ್ನು ನೀಡಲಾಗುವುದು. ಭಾಗವಹಿಸಲು ಇಚ್ಛೆಪಡುವವರು ತಮ್ಮ ಹೆಸರನ್ನು ಡಿಸೆಂಬರ 20 ರಂದು ಸಂಜೆ 5 ಗಂಟೆಯೊಳಗಾಗಿ ತಮ್ಮ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿ, ರೈತ ಸಂಪರ್ಕ ಕೇಂದ್ರಗಳಲ್ಲಿ ಆಧಾರ ಕಾರ್ಡನ ನಕಲು ಪ್ರತಿಯೊಂದಿಗೆ ನಿಗಧಿತ ನಮೂನೆಯಲ್ಲಿ ಅರ್ಜಿ ಸಲ್ಲಿಸಿ ನೋಂದಾಯಿಸಲು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೆಲವಾಡ: ಪೋಡಿ ಮುಕ್ತ ಗ್ರಾಮ ಅಭಿಯಾನ



**ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ:**
ತಾಲ್ಲೂಕಿನ ನೆಲವಾಡ ಗ್ರಾಮದಲ್ಲಿ ಭೂಮಾಪನ ಕಂದಾಯ ವ್ಯವಸ್ಥೆ, ಭೂದಾಖಲೆಗಳ ಇಲಾಖೆ, ಚಳಕಾಪೂರ ಗ್ರಾಮ ಪಂಚಾಯಿತಿ ಸಂಯುಕ್ತಾಶ್ರಯದಲ್ಲಿ ನಡೆದ ಪೋಡಿ ಮುಕ್ತ ಗ್ರಾಮ ಅಭಿಯಾನ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಭೂದಾಖಲೆಗಳ ಅಧಿಕಾರಿ ದಿಲೀಪಕುಮಾರ ತಪಾಸಕರ್, ಹಳ್ಳಿ ಪ್ರದೇಶಗಳಲ್ಲಿ ಇನ್ನೂ ಪೋಡಿ ಜಮಿನು ಹೊಂದಿರುವ ರೈತರು ಅನೇಕ ಯೋಜನೆಗಳಿಂದ ವಂಚಿತರಾಗುತಿದ್ದಾರೆ. ಈ ವಿಶೇಷ ಅಭಿಯಾನದ ಮೂಲಕ ರೈತರ ಜಮೀನುಗಳನ್ನು ಫಾರ್ಮ್ ನಂಬರ್ 10 (ಡಿಜಿಟಲ್) ಡಿಜಿಟಲ್ ಖಾತೆಯ ವ್ಯಾಪ್ತಿಯಲ್ಲಿ ತರುವ ಹಿನ್ನೆಲೆಯಲ್ಲಿ ಸರ್ಕಾರ ಈ ಅಭಿಯಾನ ಕೈಗೊಂಡಿದ್ದು, ಅನ್ನದಾತರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಮುಖಂಡರಾದ ವಿಶ್ವನಾಥ್ ಬಾಯಪನೋರ್, ರಾಜಕುಮಾರ ತೊಗರೆ, ರೇವಣಸಿದ್ದ ಜಾಡರ್, ತಬ್ಸುಮ್ ಮಾತನಾಡಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಗ್ರಾಮ ಪಂಚಾಯಿತಿ ಅಧ್ಯಕ್ಷ ಶ್ರೀಮಂತ ಕಲ್ಲೂರೆ ವಹಿಸಿದ್ದರು. ಅಭಿವೃದ್ಧಿ ಅಧಿಕಾರಿ ದೇವಿಂದ್ರಕುಮಾರ ಪಂಚಾಯಿತಿ ಸದಸ್ಯರಾದ ಬಲಭೀಮ ಬಸಲಾಪೂರೆ, ಮುಖ್ಯಶಿಕ್ಷಕ ಧೂಳಪ್ಪ ಹೂಗಾರ, ವಿಜಯಕುಮಾರ, ಶಶಿಕಾಂತ ಇದ್ದರು.

# ತೊಗರಿ ಪ್ರತಿ ಕ್ವಿಂಟಲ್‌ಗೆ 8 ಸಾವಿರ ಬೆಂಬಲ ಬೆಲೆಯಲ್ಲಿ ತೊಗರಿ ಖರೀದಿ ಪ್ರಕ್ರಿಯೆ ಪ್ರಾರಂಭ

ಬಾಗಲಕೋಟೆ: ಡಿಸೆಂಬರ 18 (ಕರ್ನಾಟಕ ವಾರ್ತೆ) : ಪ್ರಸಕ್ತ ಸಾಲಿನ ಕೇಂದ್ರ ಸರಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್.ಎ.ಕ್ಯೂ ಗುಣಮಟ್ಟದ ತೊಗರಿ ಖರೀದಿ ಪ್ರಕ್ರಿಯೆಯನ್ನು ಜಿಲ್ಲೆಯಲ್ಲಿ ಪ್ರಾರಂಭಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಂಗಪ್ಪ ಹೇಳಿದರು.



ಜಿಲ್ಲಾ ಟಾಸ್ಕಫೋರ್ಸ ಸಮಿತಿ ಸಭೆ।

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡ ಜಿಲ್ಲಾ ಟಾಸ್ಕಫೋರ್ಸ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ಪ್ರತಿ ಕ್ವಿಂಟಲ್‌ಗೆ 8 ಸಾವಿರ ರೂ.ಗಳಂತೆ ಪ್ರತಿ ಎಕರೆಗೆ 4 ಕ್ವಿಂಟಲ್‌ನಂತೆ ಫ್ರುಟ್ಸ್ ತಂತ್ರಾಂಶದಲ್ಲಿ ಲಭ್ಯವಾಗುವ ರೈತರು ತೊಗರಿ ಬೆಳೆದ ವಿಸ್ತೀರ್ಣಕ್ಕೆ ಅನುಗುಣವಾದ ಪ್ರಮಾಣದಲ್ಲಿ ತೊಗರಿಯನ್ನು ಖರೀದಿಸಲಾಗುತ್ತಿದೆ. ನೋಂದಣಿ ಕಾರ್ಯ 80 ದಿನಗಳ ವರೆಗೆ ನಡೆಯಲಿದ್ದು, ಖರೀದಿ ಪ್ರಕ್ರಿಯೆ 90 ದಿನಗಳವರೆಗೆ ನಡೆಯಲಿದೆ. ಖರೀದಿ ಪ್ರಕ್ರಿಯೆಗೆ ಎಲ್ಲ ಅಗತ್ಯ ಸಿದ್ದತೆ ಮಾಡಿಕೊಳ್ಳಲು ಸೂಚಿಸಿದರು.

ತೊಗರಿ ಖರೀದಿಯಲ್ಲಿ ಎಫ್.ಎ.ಕ್ಯೂ ಗುಣಮಟ್ಟದ ಪರೀಕ್ಷೆವಿವರ ಹೀಗಿದೆ. ಶೇ.2 ರಷ್ಟು ಅನ್ಯವಸ್ತುಗಳು (ಧೂಳು, ಹರಳು, ಹೊಟ್ಟು), ಶೇ.3 ರಷ್ಟು ಬೇರಿಕೆ ಮಿಶ್ರಣ,

ಹಾಳಾದ ಕಾಳುಗಳು, ಅಪೂರ್ಣ ಮತ್ತು ಕುಗ್ಗಿದ ಕಾಳುಗಳು, ಶೇ.4 ರಷ್ಟು ಒಡೆದ ಕಾಳುಗಳು, ಹುಳುಕಾದ ಕಾಳುಗಳು ಹಾಗೂ ಶೇ.12 ರಷ್ಟು ತೇವಾಂಶ ಪರೀಕ್ಷೆ ಮಾಡಲಾಗುತ್ತದೆ. ಜಿಲ್ಲೆಯ ಎಲ್ಲ ರೈತರು ಖರೀದಿ ಕೇಂದ್ರಗಳ ಸ್ಥಳಗಳಲ್ಲಿ ನೋಂದಣಿ ಸಮಯದಲ್ಲಿ ಆಧಾರ ಕಾರ್ಡ,

ಪಹಣಿ ಪತ್ರಿಕೆ, ಆಧಾರ ಲಿಂಕ ಆಗಿರುವ ರಾಷ್ಟ್ರೀಕೃತ ಬ್ಯಾಂಕನ ಪಾಸಬುಕ್ ಝರಾಕ್ಸ್ ಪ್ರತಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಶಾಖಾ ವ್ಯವಸ್ಥಾಪಕರು, ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳಿ, ಬಾಗಲಕೋಟೆ (9449864458, 8904315339, 7676951445) ಹಾಗೂ ಆಯಾ ತಾಲೂಕಿನ ಎ.ಪಿ.ಎಂ.ಸಿ ಕಾರ್ಯದರ್ಶಿಯವರನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಆಹಾರ ಇಲಾಖೆಯ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ಜಂಟಿ ಕೃಷಿ ನಿರ್ದೇಶಕ ರುದ್ರೇಶ, ಸಹಕಾರ ಇಲಾಖೆಯ ಉಪನಿಬಂಧಕ ದಾನಯ್ಯ ಹಿರೇಮಠ, ಕೃಷಿ ಮಾರಾಟ ಇಲಾಖೆಯ ಸಹಾಯಕ ನಿರ್ದೇಶಕರು ವಿ.ಡಿ.ಪಾಟೀಲ, ಕರ್ನಾಟಕ ರಾಜ್ಯ ಸಹಕಾರ ಮಹಾ ಮಂಡಳಿ ಜಿಲ್ಲಾ ವ್ಯವಸ್ಥಾಪಕಿ ಸುಪ್ರೀಯಾ ಸೇರಿದಂತೆ ಆಯಾ ತಾಲೂಕಿನ ಎಪಿಎಂಸಿ ಕಾರ್ಯದರ್ಶಿಗಳು ಉಪಸ್ಥಿತರಿದ್ದರು.

**ಖರೀದಿ ಕೇಂದ್ರಗಳ ವಿವರ**

**ಬಾಗಲಕೋಟೆ ತಾಲೂಕಿನಲ್ಲಿ ಪಿ.ಕೆ.ಪಿ.ಎಸ್ (ಎಪಿಎಂಸಿ ಪ್ರಾಂಗಣ, ಬಾಗಲಕೋಟೆ) ಹಳ್ಳೂರು (9901325201) ಬೆನಕಟ್ಟಿ (9740406918), ಬಾದಾಮಿ ತಾಲೂಕಿನ ಟಿಎಪಿಸಿಎಂಎಸ್ ಬಾದಾಮಿ (9008116746), ಪಿಕೆಪಿಎಸ್ ಬಾದಾಮಿ (9611358837), ಕೆರೂರು (9972301729), ಮುಧೋಳ ತಾಲೂಕಿನ ಎಫ್‌ಪಿಓ ಸರ್ವಬಂದು ಎಪಿಎಂಸಿ ಪ್ರಾಂಗಣ ಮುಧೋಳ (9844474344), ಇಳಕಲ್ಲ ತಾಲೂಕಿನ ಜಿಎಫ್‌ಪಿಸಿಎಲ್ ಎಪಿಎಂಸಿ ಪ್ರಾಂಗಣ ಇಳಕಲ್ಲ (8660203311), ಪಿಕೆಪಿಎಸ್ ನಂದವಾಡಗಿ (9902377067), ಬೂದಿಹಾಳ (7019825319), ಕರಡಿ (9110402689), ಇಳಕಲ್ಲ (9148365831), ಚಿಕ್ಕಸಿಂಗನಗುತ್ತಿ (9611667464), ಹುನಗುಂದ ತಾಲೂಕಿನ ಟಿಎಪಿಸಿಎಂಎಸ್ ಎಪಿಎಂಸಿ ಪ್ರಾಂಗಣ ಹುನಗುಂದ (9480262655), ಎಫ್‌ಪಿಓ ಸುಳೇಭಾವಿ (9449762433, 9008215922), ಅಮರಾವತಿ (8217558509), ಪಿಕೆಪಿಎಸ್ ಮುಗನೂರು (8310324070), ನಾಗೂರ (911873862), ಕೂಡಲಸಂಗಮ (6362364707), ಟಿಎಪಿಸಿಎಂಎಸ್ ಜಮಖಂಡಿ (7019445935), ಎಫ್‌ಪಿಓ ತೊದಲಬಾಗಿ (9741998771), ಟಿಎಪಿಸಿಎಂಎಸ್ ಬೀಳಗಿ (7019682890), ಪಿಕೆಪಿಎಸ್ ತೆಗ್ಗಿ-ಎಪಿಎಂಸಿ ಆವರಣ ಬೀಳಗಿ (9902088689).**

## ಶ್ರೀ ಮಾಣಿಕಪ್ಪಾ ಗಾದಾ ನಿಧನಕ್ಕೆ ಮಾಜಿ ಸಚಿವ ಪಾಟೀಲ ಸಂತಾಪ

**ಹುಮನಾಬಾದ್:** ಹುಮನಾಬಾದ್‌ನ ಶಿಕ್ಷಣ ಪ್ರೇಮಿ, ಅಜಾತಶತ್ರು ಎಂದು ಹೆಸರು ಪಡೆದಿದ್ದ ಶ್ರೀ ಮಾಣಿಕಪ್ಪಾ ಗಾದಾ ರವರ ನಿಧನಕ್ಕೆ ಮಾಜಿ ಸಚಿವ ರಾಜಶೇಖರ ಪಾಟೀಲ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.



ಶ್ರೀ ಮಾಣಿಕಪ್ಪಾ ಗಾದಾ ಅವರು ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಮಹನೀಯರು. ಗ್ರಾಮೀಣ ಭಾಗದ ಬಡ ಹಾಗೂ ಮಧ್ಯಮ ವರ್ಗದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ದೊರೆಯಬೇಕು ಎಂಬ ಧ್ಯೇಯದೊಂದಿಗೆ ಅವರು ಜೀವನವಿಡೀ ಶ್ರಮಿಸಿದ್ದಾರೆ ಎಂದು ಮಾಜಿ ಸಚಿವರು ಸ್ಮರಿಸಿದ್ದಾರೆ.

ಸರಳತೆ, ಸೌಜನ್ಯ ಮತ್ತು ಎಲ್ಲರನ್ನು ಒಂದೇ ದೃಷ್ಟಿಯಿಂದ ಕಾಣುವ ಗುಣಗಳಿಂದ ಮಾಣಿಕಪ್ಪಾ ಗಾದಾ ಅವರು ಸಮಾಜದಲ್ಲಿ ಅಪಾರ ಗೌರವ ಪಡೆದಿದ್ದರು. ಅವರ ಅಗಲಿಕೆ ಹುಮನಾಬಾದ್ ಭಾಗದ ಶಿಕ್ಷಣ ಹಾಗೂ ಸಾಮಾಜಿಕ ಕ್ಷೇತ್ರ-ಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ರಾಜಶೇಖರ ಪಾಟೀಲ ಅವರು ತಿಳಿಸಿದ್ದಾರೆ.

ಮೃತರ ಆತ್ಮಕ್ಕೆ ಚಿರಶಾಂತಿ ಸಿಗಲಿ, ಕುಟುಂಬದ ಸದಸ್ಯರು ಹಾಗೂ ಅಭಿಮಾನಿಗಳಿಗೆ ಈ ದುಃಖವನ್ನು ಭರಿಸುವ ಶಕ್ತಿ ನೀಡಲಿ ಎಂದು ಅವರು ಪ್ರಾರ್ಥಿಸಿದ್ದಾರೆ.

## ರೈಲು ಮಾರ್ಗದ ಅಂತಿಮ ಸ್ಥಳ ಸಮೀಕ್ಷೆಗೆ ಟೆಂಡರ್ ಸ್ವಾಗತಾರ್ಹ: ಮಹಾಂತೇಶ

**ತಾಳಿಕೋಟಿ:** ಆಲಮಟ್ಟಿ-ಯಾದಗಿರಿ(162 ಕಿ.ಮೀ.) ರೈಲು ಮಾರ್ಗದ ಅಂತಿಮ ಸ್ಥಳ ಸಮೀಕ್ಷೆಗೆ ಟೆಂಡರ್ ಕರೆದಿರುವ ಕ್ರಮವನ್ನು ತಾಳಿಕೋಟಿ



ರೈಲು ಮಾರ್ಗ ಹೋರಾಟ ಸಮಿತಿ ಸಂಚಾಲಕ ಮಹಾಂತೇಶ ಮುರಾಳ ಸ್ವಾಗತಿಸಿ ಕೇಂದ್ರ ಸರ್ಕಾರಕ್ಕೆ ಅಭಿನಂದಿಸಿದ್ದಾರೆ. ಪತ್ರಿಕೆಯೊಂದಿಗೆ ಮಾತನಾಡಿದ ಅವರು ಈ ಭಾಗದ ಜನರ ಬಹು ದಿನಗಳ ಬೇಡಿಕೆಯಾದ ಆಲಮಟ್ಟಿ ಯಾದಗಿರಿ ರೈಲು ಮಾರ್ಗದ ಅಂತಿಮ ಸ್ಥಳ ಸಮೀಕ್ಷೆಗೆ ನೈರುತ್ಯ ರೈಲ್ವೆ ವಿಭಾಗವು ಟೆಂಡರ್ ಕರೆದಿರುವ ಕ್ರಮ ಅತ್ಯಂತ ಸಂತೋಷದ ವಿಷಯವಾಗಿದೆ. ನಮ್ಮ ಈ ಬೇಡಿಕೆಯನ್ನು ಕೇಂದ್ರ ರೈಲ್ವೆ ಸಚಿವರಾದ ಅಸ್ವಿನ್ ವೈಷ್ಣವ್ ಅವರಿಗೆ ತಲುಪಿಸಿ ಕಾರ್ಯರೂಪಕ್ಕೆ ತರುವಲ್ಲಿ ರೈಲ್ವೇ ರಾಜ್ಯ ಸಚಿವರಾದ ವಿ.ಸೋಮಣ್ಣ, ವಿಜಯಪುರ ಸಂಸದ ರಮೇಶ ಜಿಗಜಿಣಗಿ ಹಾಗೂ ರಾಯಚೂರ ಸಂಸದ ಬಿ.ವಿ. ನಾಯಕ ಅವರು ವಿಶೇಷ ಆಸಕ್ತಿ ವಹಿಸಿದ ಫಲವಾಗಿ ಇಂದು ಈ ಕಾರ್ಯ ಆರಂಭವಾಗಿದೆ ಅವರಿಗೆ ನಾನು ಹೋರಾಟ ಸಮಿತಿಗಳಿಂದ ಕೃತಜ್ಞತೆ ಸಲ್ಲಿಸುತ್ತೇನೆ ಎಂದಿರುವ ಅವರು ಆದಷ್ಟು ಬೇಗ ಸದರಿ ಕೆಲಸ ಮುಗಿಸಿ ನಮ್ಮ ಭಾಗದಲ್ಲೂ ರೈಲು ಓಡಾಟ ಆರಂಭಿಸಲು ಕೇಂದ್ರ ಸರ್ಕಾರ ನೆರವಾಗಬೇಕು, ಇದು ಆಲಮಟ್ಟಿ, ನಿಡಗುಂದಿ, ಮುದ್ದೇಬಿಹಾಳ, ತಾಳಿಕೋಟಿ ಹಾಗೂ ಹುಣಸಗಿ ರೈಲು ಮಾರ್ಗ ಹೋರಾಟ ಸಮಿತಿಗಳ ಪರಿಶ್ರಮ ಹಾಗೂ ಸಾರ್ವಜನಿಕರ ಸಹಕಾರಕ್ಕೆ ಸಿಕ್ಕ ಆರಂಭಿಕ ಯಶಸ್ಸು ಆಗಿದೆ ಎಂದು ಅವರು ತಿಳಿಸಿದ್ದಾರೆ.

## ಮಾಣಿಕಪ್ಪಾ ಗಾದಾ ನಿಧನಕ್ಕೆ ಮಾಜಿ ಶಾಸಕ ಸುಭಾಷ ಕಲ್ಲೂರ ಸಂತಾಪ

**ಹುಮನಾಬಾದ್:** ಹಿರಿಯ ಸಮಾಜಸೇವಕ ಹಾಗೂ ಶಿಕ್ಷಣ ಪ್ರೇಮಿ ಶ್ರೀ ಮಾಣಿಕಪ್ಪಾ ಗಾದಾ ಅವರ ನಿಧನಕ್ಕೆ ಮಾಜಿ ಶಾಸಕ ಸುಭಾಷ ಕಲ್ಲೂರ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.




ಮಾಣಿಕಪ್ಪಾ ಗಾದಾ ಅವರು ಸರಳ, ಸಜ್ಜನ ವ್ಯಕ್ತಿತ್ವ ಹೊಂದಿದ್ದು, ಸಮಾಜದ ಅಭಿವೃದ್ಧಿಗೆ ಹಾಗೂ ಶಿಕ್ಷಣ ಕ್ಷೇತ್ರಕ್ಕೆ ನೀಡಿದ ಕೊಡುಗೆ ಸ್ಮರಣೀಯವಾಗಿದೆ. ಅವರ ಅಗಲಿಕೆ ಕುಟುಂಬಕ್ಕೆ ಮಾತ್ರವಲ್ಲದೆ ಸಮಗ್ರ ಸಮಾಜಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಅವರು ತಿಳಿಸಿದ್ದಾರೆ. ಪರಮಾತ್ಮರು ಅಗಲಿದ ಆತ್ಮಕ್ಕೆ ಶಾಂತಿ ನೀಡಲಿ ಹಾಗೂ ದುಃಖತಪ್ತ ಕುಟುಂಬ ಸದಸ್ಯರಿಗೆ ಈ ನೋವನ್ನು ಸಹಿಸುವ ಶಕ್ತಿ ನೀಡಲಿ ಎಂದು ಮಾಜಿ ಶಾಸಕ ಸುಭಾಷ ಕಲ್ಲೂರ ಪ್ರಾರ್ಥಿಸಿದ್ದಾರೆ.

## ಶ್ರೀ ಮಾಣಿಕಪ್ಪಾ ಗಾದಾ ಪಂಚಭೂತಗಳಲ್ಲಿ ಲೀನ

**ಹುಮನಾಬಾದ್:** ಹುಮನಾಬಾದ್‌ನ ಶಿಕ್ಷಣ ಪ್ರೇಮಿ, ಅಜಾತಶತ್ರು ಎಂದು ಜನಪ್ರಿಯರಾಗಿದ್ದ ಶ್ರೀ ಮಾಣಿಕಪ್ಪಾ ಗಾದಾ ರವರು ಇಹಲೋಕ ತ್ಯಜಿಸಿ, ಗುರುವಾರ ಪಂಚಭೂತಗಳಲ್ಲಿ ಲೀನರಾದರು.

ಶ್ರೀ ವಿವೇಕಾನಂದ ಶಿಕ್ಷಣ ಸಂಸ್ಥೆಯ ಮೂಲಕ ಶಿಕ್ಷಣ ಕ್ಷೇತ್ರಕ್ಕೆ ಅಪಾರ ಸೇವೆ ಸಲ್ಲಿಸಿದ ಅವರು, ತಮ್ಮ ಜೀವನವನ್ನೇ ವಿದ್ಯಾರ್ಥಿಗಳ ಭವಿಷ್ಯ ನಿರ್ಮಾಣಕ್ಕೆ ಅರ್ಪಿಸಿದ್ದರು. ಸರಳತೆ, ಸೌಜನ್ಯ ಹಾಗೂ ಮಾನವೀಯ ಮೌಲ್ಯಗಳೇ ಅವರ ಬದುಕಿನ ಮೂಲ ತತ್ವಗಳಾಗಿದ್ದವು.



ಅವರ ಅಂತ್ಯಕ್ರಿಯೆ ಹುಮನಾಬಾದ್‌ನಲ್ಲಿ ಕುಟುಂಬದ ಸದಸ್ಯರು, ಬಂಧುಬಳಗ, ಶಿಷ್ಯವೃಂದ, ಶಿಕ್ಷಣ ಪ್ರೇಮಿಗಳು ಹಾಗೂ ಸಾರ್ವಜನಿಕರ ಉಪಸ್ಥಿತಿಯಲ್ಲಿ ನೆರವೇರಿತು. ಈ ವೇಳೆ ಸಾವಿರಾರು ಜನರು ಅಂತಿಮ ದರ್ಶನ ಪಡೆದು ಕಂಬನಿ ಮಿಡಿದರು.

ಶಿಕ್ಷಣ ಹಾಗೂ ಸಮಾಜ ಸೇವೆಯಲ್ಲಿ ಅಳಿಸದ ಗುರುತು ಬಿಟ್ಟಿರುವ ಮಾಣಿಕಪ್ಪಾ ಗಾದಾ ರವರ ಅಗಲಿಕೆ ಹುಮನಾಬಾದ್ ಭಾಗಕ್ಕೆ ತುಂಬಲಾರದ ನಷ್ಟ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

# 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ

### ಡಿ.21 ರಿಂದ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ




ಜಿಲ್ಲೆಯಲ್ಲಿ ಪಲ್ಸ್ ಪೋಲಿಯೊ ಲಸಿಕೆ ಅಭಿಯಾನದಡಿ ಡಿ.21 ರಿಂದ 24ರವರೆಗೆ 5 ವರ್ಷದೊಳಗಿನ ಎಲ್ಲ ಮಕ್ಕಳಿಗೆ ತಪ್ಪದೇ ಪೋಲಿಯೊ ಲಸಿಕೆ ಹಾಕಿಸುವಂತೆ ನೋಡಿಕೊಳ್ಳಬೇಕೆಂದು ಜಿಲ್ಲಾಧಿಕಾರಿ ಡಾ.ಆನಂದ.ಕೆ ಅವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಪಲ್ಸ್ ಪೋಲಿಯೊ ಲಸಿಕಾ ಅಭಿಯಾನ ಕುರಿತು ಕೈಗೊಂಡಿರುವ ಪೂರ್ವಸಿದ್ಧತೆಯ ಸಭೆಯ ಅಧ್ಯಕ್ಷತೆ ವಹಿಸಿದ್ದ ಅವರು, ಪ್ರಸಕ್ತ ಸಾಲಿನ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಅತ್ಯಂತ ಯಶಸ್ವಿಗೊಳಿಸುವ ನಿಟ್ಟಿನಲ್ಲಿ ನಿಯೋಜನಗೊಂಡ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿ, ಅಂಗನವಾಡಿ, ಆಶಾ ಕಾರ್ಯಕರ್ತೆಯರು ತಮಗೆ ವಹಿಸಿದ ಕೆಲಸ ಅಚ್ಚುಕಟ್ಟಾಗಿ ನಿರ್ವಹಿಸುವಂತೆ ಸೂಚಿಸಿದರು. ತಮ್ಮ ವ್ಯಾಪ್ತಿಯಲ್ಲಿನ 5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಎರಡು ಹನಿ ಪೋಲಿಯೋ ಲಸಿಕೆ ಹಾಕಿಸುವ ಕುರಿತು, ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಸೂಚಿಸಲಾಯಿತು. ರೈಲ್ವೆ ನಿಲ್ದಾಣ ಹಾಗೂ ಬಸ್ ನಿಲ್ದಾಣಗಳಲ್ಲಿ ದಿನದ 24 ಗಂಟೆಯೂ ಲಸಿಕಾ ಕೇಂದ್ರಗಳನ್ನು ತೆರೆಯುವಂತೆ ವ್ಯವಸ್ಥೆ ಮಾಡಿಕೊಳ್ಳಬೇಕು. ಈ ಕುರಿತು ನಿರಂತರವಾಗಿ ಕಾರ್ಯಕ್ರಮದ ಬಗ್ಗೆ ಪ್ರಚಾರ ಮಾಡಬೇಕು. ಗ್ರಾಮ ಹಾಗೂ ನಗರ ವ್ಯಾಪ್ತಿಗಳಲ್ಲಿ ಪ್ರಾಮುಖ್ಯತೆ ನೀಡಿ, ಯಾವುದೇ ಮಗು ಲಸಿಕೆಯಿಂದ ವಂಚಿತವಾಗದಂತೆ ನೋಡಿಕೊಳ್ಳಬೇಕು. ಸ್ಥಳೀಯ ವೈದ್ಯಾಧಿಕಾರಿಗಳಿಗೆ ಮೇಲುಸ್ತುವಾರಿ ವಹಿಸುವಂತೆ ಸೂಚಿಸಲಾಯಿತು. ಯಾವುದೇ ಸಮಸ್ಯೆಯಾಗದಂತೆ ಅಗತ್ಯ ಎಚ್ಚರಿಕೆ ವಹಿಸಿ ಸಿದ್ಧತೆ ಮಾಡಿಕೊಳ್ಳಬೇಕು. ಅಭಿಯಾನದ ಕುರಿತು ಪೋಷಕರಿಗೆ ಮೊದಲೇ ಮಾಹಿತಿ ನೀಡುವಂತೆ ಸೂಚಿಸಿದರು.

ನಗರದಲ್ಲಿರುವ ಕೊಳಚೆ ಪ್ರದೇಶಗಳಲ್ಲಿ, ಕಟ್ಟಡ ಕಾರ್ಮಿಕ ಪ್ರದೇಶಗಳು, ಹೊಸದಾಗಿ ಸೃಜನವಾಗಿರುವ ಪ್ರದೇಶಗಳಲ್ಲಿ ಹಾಗೂ ಇತರೆ ಹೈರಿಸ್ಕ್ ಪ್ರದೇಶಗಳನ್ನು ಗುರುತಿಸಿ ಅಲ್ಲಿ 0-5 ವರ್ಷದೊಳಗಿನ ಎಲ್ಲಾ ಮಕ್ಕಳಿಗೆ ಪೋಲಿಯೋ ಲಸಿಕೆ ಕಡ್ಡಾಯವಾಗಿ ಹಾಕಲು ತಾಲೂಕಾ ಮಟ್ಟದ ಅಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಗ್ರಾಮ ಪಂಚಾಯತಿ ಅಧಿಕಾರಿಗಳು, ಸಾರಿಗೆ ಇಲಾಖೆ, ಆಶಾ ಕಾರ್ಯಕರ್ತೆರು ಹಾಗೂ ಆರೋಗ್ಯ ಇಲಾಖೆಯ ಸಿಬ್ಬಂದಿಗಳೊಂದಿಗೆ ಸಮನ್ವಯದಿಂದ ಕಾರ್ಯ ನಿರ್ವಹಿಸಲು ಈಗಾಗಲೇ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಕರಪತ್ರ, ಬ್ಯಾನರ್‌ಗಳ ಮೂಲಕ ಪ್ರಚಾರ ಕೈಗೊಳ್ಳಲು, ಅವಶ್ಯಕತೆ ಇರುವ ಶುಶ್ರೂಷಕ ವಿದ್ಯಾರ್ಥಿಗಳನ್ನು ಕಾರ್ಯಕ್ರಮಕ್ಕೆ ನಿಯೋಜಿಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳಾದ ಸಂಪತ್ ಗುಣಾರಿ ಹೇಳಿದರು. ಜಿಲ್ಲೆಯಲ್ಲಿ 0-5 ವರ್ಷದೊಳಗಿನ ಮಕ್ಕಳ ಗುರಿ-296119 ಇದ್ದು, ಅದಕ್ಕಾಗಿ ಪೋಲಿಯೋ ಲಸಿಕಾ ಭೂತಗಳ ಸಂಖ್ಯೆ-1331 ರಚಿಸಿದ್ದು, ಇದರಲ್ಲಿ 31 ಸಂಚಾರಿ ತಂಡಗಳು ಮತ್ತು ಟ್ರಾಂಜಿಟ್-40 ತಂಡಗಳನ್ನು ಒಳಗೊಂಡಿದೆ ಎಂದು ಸಭೆಗೆ ಮಾಹಿತಿ ನೀಡಲಾಯಿತು.

ಈ ಸಭೆಯಲ್ಲಿ ವಿವಿಧ ಇಲಾಖೆಗಳ ಪಾತ್ರ ಹಾಗೂ ಪಾಲಿಕೆಯ ಮಹತ್ವದ ಬಗ್ಗೆ ಸಂಕ್ಷಿಪ್ತವಾಗಿ ವಿವರಿಸಿ ಕಾರ್ಯಕ್ರಮದ ಯಶಸ್ವಿಗೆ ಸಂಬಂಧಿಸಿದಂತೆ ಸಹಕಾರ ಅಗತ್ಯವಾಗಿದ್ದು, ಈ ನಿಟ್ಟಿನಲ್ಲಿ ಕಾರ್ಯ ಪ್ರವೃತ್ತರಾಗುವಂತೆ ಹಾಗೂ ಪಲ್ಸ್ ಪೋಲಿಯೊ ಲಸಿಕೆ ಕಾರ್ಯಕ್ರಮಕ್ಕೆ ಸಹಕಾರ ನೀಡುವಂತೆ ಕೋರಲಾಯಿತು. ಸಭೆಯಲ್ಲಿ ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಶಿವಾನಂದ ಮಾಸ್ತಿಹೊಳಿ, ಹೆಚ್.ಓ ಅಧಿಕಾರಿಗಳಾದ ಡಾ. ಮುಕಂದ ಗಲಗಲಿ, ಪರಸುರಾಮ ಹಿಟ್ನಳ್ಳಿ, ಜಾನ್ ಕಟವಟೆ, ಅಪ್ಪಾಸಾಹೇಬ ಇನಾಮದಾರ, ರಾಜೇಶ್ವರಿ ಗೋಲಗೇರಿ, ಕೆ ಡಿ ಗುಂಡಬಾವಡಿ, ಎಲ್ಲಾ ತಾಲೂಕು ಆರೋಗ್ಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

## ಚಿಕ್ಕ ವಯಸ್ಸಿನಿಂದಲೇ ಬೇಕು ವಿಜ್ಞಾನ ಮನೋಭಾವ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ವಿಜ್ಞಾನವು ದೇಶದ ಅಭಿವೃದ್ಧಿಗೆ ಮೂಲಭೂತ ಶಕ್ತಿಯಾಗಿದ್ದು, ತಂತ್ರಜ್ಞಾನ ಯುಗದಲ್ಲಿ ವಿಜ್ಞಾನ ತಿಳುವಳಿಕೆ ಅತ್ಯಂತ ಅಗತ್ಯವಾಗಿದೆ. ಚಿಕ್ಕವಯಸ್ಸಿನಿಂದಲೇ ಸಂಶೋಧನಾ ಮನೋಭಾವ ಬೆಳೆಸಿಕೊಂಡರೆ ಭವಿಷ್ಯದಲ್ಲಿ ಉತ್ತಮ ವಿಜ್ಞಾನಿಗಳು ಹಾಗೂ ಇಂಜಿನಿಯರ್‌ಗಳು ರೂಪುಗೊಳ್ಳುತ್ತಾರೆ ಎಂದು ಜಿಲ್ಲಾ ಬಿಜೆಪಿ ಮಾಜಿ ಜಿಲ್ಲಾಧ್ಯಕ್ಷ ಚಂದ್ರಶೇಖರಗೌಡ ಮಾಗನೂರ ಹೇಳಿದರು.

ನಗರದ ಮಾಣಿಕೇಶ್ವರಿ ಕಾಲೋನಿಯ ಶ್ರೀ ರಕ್ಷಾ ವಿದ್ಯಾ ಮಂದಿರ ಶಾಲೆಯಲ್ಲಿ ಆಯೋಜಿಸಿದ್ದ ವಿಜ್ಞಾನ ವಸ್ತು ಪ್ರದರ್ಶನವನ್ನು ಉದ್ಘಾಟಿಸಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ಪಠ್ಯಪುಸ್ತಕಗಳಿಗೆ ಮಾತ್ರ ಸೀಮಿತವಾಗದೇ ಪ್ರಾಯೋಗಿಕ ಜ್ಞಾನಕ್ಕೆ ಒತ್ತು ನೀಡಬೇಕು. ಶಿಕ್ಷಕರು ವಿದ್ಯಾರ್ಥಿಗಳಲ್ಲಿನ ಪ್ರತಿಭೆಯನ್ನು ಗುರುತಿಸಿ ಪ್ರೋತ್ಸಾಹ ನೀಡಬೇಕು ಎಂದರು. ಗ್ರಾಮೀಣ ವಿದ್ಯಾರ್ಥಿಗಳಲ್ಲಿಯೂ ವಿಜ್ಞಾನ ಕ್ಷೇತ್ರದಲ್ಲಿ ರಾಷ್ಟಮಟ್ಟದ ಸಾಧನೆ ಮಾಡುವ ಸಾಮರ್ಥ್ಯವಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಪತ್ರಕರ್ತ ಶಂಕ್ರಪ್ಪ ಅರುಣಿ ಮಾತನಾಡಿ, ವಿಜ್ಞಾನ ವಸ್ತು ಪ್ರದರ್ಶನಗಳು ವಿದ್ಯಾರ್ಥಿಗಳಲ್ಲಿ ಪ್ರಶ್ನಿಸುವ ಮನೋಭಾವ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದು ಹೇಳಿದರು. ಶಾಲಾ ಹಂತದಲ್ಲೇ ವಿಜ್ಞಾನಕ್ಕೆ ಉತ್ತೇಜನ ನೀಡಿದರೆ ಗ್ರಾಮೀಣ ಪ್ರದೇಶಗಳಿಂದಲೂ ಪ್ರತಿಭೆಗಳು ಹೊರಹೊಮ್ಮುತ್ತವೆ ಎಂದರು.





ನಗರಸಭೆ ಸದಸ್ಯ ಸ್ವಾಮಿದೇವ ದಾಸನಕೇರಿ ಹಾಗೂ ಪ್ರಥಮ ದರ್ಜೆ ಗುತ್ತಿಗೆದಾರ ಶಾಂತಗೌಡ ಪಗಲಾಪೂರ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು. ಶಾಲೆಯ ಮುಖ್ಯಸ್ಥ ಡಾ. ಕೃಷ್ಣಮೂರ್ತಿ ಕುಲಕರ್ಣಿ ಅಧ್ಯಕ್ಷತೆ ವಹಿಸಿದ್ದರು.

ಈ ಸಂದರ್ಭದಲ್ಲಿ ಮುಖ್ಯಗುರು ಶಶಿಕಲಾ ಕೃಷ್ಣಮೂರ್ತಿ, ಶಿಕ್ಷಕರಾದ ಕ್ರಿಸ್ಟಿನಾ, ಭಾವನಾ ಬೆಳಕೇರಿ, ಭೀಮರೆಡ್ಡಿ ಕುರಕುಂದಿ, ಸಿದ್ದಲಿಂಗರೆಡ್ಡಿ ಮುನಗಾಲ, ಪತ್ರಕರ್ತ ಕುದಾನ್ ಸಾಬ್, ಶ್ವೇತಾ ಸಿಂಗೆ, ರೇಣುಕಾ, ಸುಧಾ, ಪ್ರಭಾ, ರೂಪಾಲಿ, ಕಾವ್ಯಾ, ಮಮತಾ, ರೂಪಾ ಪುಲ್ಲೆ, ಮಹೇಶ ಶಿರವಾಳ ಹಾಗೂ ಸಿಬ್ಬಂದಿ ಲಕ್ಷ್ಮಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ನದಿಗಳನ್ನು ಪುನರುಜ್ಜೀವನಗೊಳಿಸಲು ಯೋಜನೆ: ಸಚಿವ

• ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ / ಬೆಂಗಳೂರು



ನದಿಯ ಪಾತ್ರದಲ್ಲಿರುವ ನಗರಸಭೆ, ಪುರಸಭೆ, ಹಳ್ಳಿಗಳ ಜನವಸತಿ ಪ್ರದೇಶಗಳಿಂದ ಉತ್ಪತ್ತಿಯಾಗುತ್ತಿರುವ ಗೃಹ ತ್ಯಾಜ್ಯ ನೀರು ನೇರವಾಗಿ ಅಥವಾ ಪರೋಕ್ಷವಾಗಿ ಕರ್ನಾಟಕ ರಾಜ್ಯದ 12 ನದಿಗಳಿಗೆ ಸೇರುತ್ತಿದ್ದು, ಇದರಿಂದ ನದಿ ನೀರು ಮಾಲಿನ್ಯವಾಗುತ್ತಿರುವುದನ್ನು ಸರ್ಕಾರವು ಗಮನಿಸಿ, ಮಲಿನಗೊಂಡಿರುವ ನದಿ ನೀರಿನ ಬಳಕೆಯಿಂದ ಸಾರ್ವಜನಿಕರ ಆರೋಗ್ಯ ಹದಗೆಟ್ಟು ಜೀವಹಾನಿ ಉಂಟಾಗದಂತೆ ಮಲಿನಗೊಂಡಿರುವ ನದಿಗಳನ್ನು ಪುನರುಜ್ಜೀವನಗೊಳಿಸಲು ಸಮಯಾಧಾರಿತ ಕ್ರಿಯಾ ಯೋಜನೆಯನ್ನು ತಯಾರಿಸಿ ಕೇಂದ್ರ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಮಂಜೂರಾತಿ ಪಡೆದು 2019-2020 ರಿಂದ ಕ್ರಿಯಾ ಯೋಜನೆಯನ್ನು ಜಾರಿಗೊಳಿಸಲಾಗುತ್ತಿದೆ ಎಂದು ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರಾದ ಈಶ್ವರ್ ಬಿ.ಖಂಡ್ರೆ ಹೇಳಿದರು.

ಇಂದು ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ನಡೆಯುತ್ತಿರುವ ಚಳಿಗಾಲದ ವಿಧಾನಮಂಡಲದ ಅಧಿವೇಶನದಲ್ಲಿ ವಿಧಾನಸಭೆಯ ಪ್ರಶ್ನೋತ್ತರ ಕಲಾಪದಲ್ಲಿ ಶಾಸಕರಾದ ದರ್ಶನ್ ಪುಟ್ಟಣ್ಣಯ್ಯ ಅವರು ರಾಜ್ಯದಲ್ಲಿ ಸುಮಾರು 12 ನದಿಗಳಿಗೆ ಒಳಚರಂಡಿ ನೀರು, ಕಾರ್ಖಾನೆ ನೀರು ಸೇರುತ್ತಿರುವ ಹಾಗೂ ಸರ್ಕಾರ ಇದರ ಬಗ್ಗೆ ತೆಗೆದುಕೊಂಡ ಮುಂಜಾಗ್ರತ ಕ್ರಮಗಳ ಕುರಿತು ಕೇಳಿದ ಪ್ರಶ್ನೆಗೆ ಉತ್ತರಿಸಿ ಮಾತನಾಡಿದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಜಲ ಮಾಲಿನ್ಯ (ನಿಯಂತ್ರಣ ಮತ್ತು ನಿವಾರಣಾ) ಕಾಯ್ದೆ -1974 ಅನ್ನು ಪರಿಣಾಮಕಾರಿಯಾಗಿ ಜಾರಿ ಮಾಡುತ್ತಿದ್ದು, ಕೈಗಾರಿಕೆಗಳಿಂದ ಉತ್ಪತ್ತಿಯಾಗುತ್ತಿರುವ ತ್ಯಾಜ್ಯಯುಕ್ತ ನೀರನ್ನು ಸಂಸ್ಕರಿಸಿ, ಪುನರ್ಬಳಕೆ ಮಾಡಬೇಕೆಂದು ಸೂಚಿಸಿ, ಜಲ ಮಾಲಿನ್ಯ (ನಿಯಂತ್ರಣ ಮತ್ತು ನಿವಾರಣಾ) ಕಾಯ್ದೆ-1974 ಅಡಿಯಲ್ಲಿ ಸೆಕ್ಷನ್ 25 ಮತ್ತು 26 ಅಡಿಯಲ್ಲಿ ಸ್ಥಾಪನಾ ಅನುಮತಿ ಪತ್ರ ಮತ್ತು ಕಾರ್ಯಾಚರಣ ಸಮ್ಮತಿ ಪತ್ರಗಳನ್ನು ನೀಡುತ್ತಿದೆ. ಸಮ್ಮತಿ ಪತ್ರದಲ್ಲಿ ಇರುವ ಅನುಬಂಧಗಳ ಪ್ರಕಾರ ಎಲ್ಲಾ ಕೈಗಾರಿಕೆಗಳು ತ್ಯಾಜ್ಯ ನೀರನ್ನು ಸಂಸ್ಕರಿಸುವ ಸಲುವಾಗಿ ತ್ಯಾಜ್ಯ ನೀರಿನ ಸಂಸ್ಕರಣ ಘಟಕಗಳನ್ನು ಅಳವಡಿಸಿಕೊಂಡು ನಿಗದಿತ ಗುಣಮಾನಕಗಳಿಗೆ ಸಂಸ್ಕರಿಸಿ/ಶುದ್ಧೀಕರಿಸಿ ಮರುಬಳಕೆ ಮಾಡುವುದು ಕೈಗಾರಿಕೆಗಳ ಕರ್ತವ್ಯವಾಗಿರುತ್ತದೆ ಎಂದರು.

ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಚರಂಡಿಗಳ ಮುಖಾಂತರ ನದಿಗೆ ಸೇರುತ್ತಿರುವ ರೊಚ್ಚು ನೀರಿನ ಸಂಸ್ಕರಣೆಗಾಗಿ Wetland Treatment System ಅನ್ನು ಅಳವಡಿಸಿಕೊಳ್ಳಲು ಸಹ ಸೂಚಿಸಿದೆ. ಈ ನಿಟ್ಟಿನಲ್ಲಿ ನದಿಗಳ ಮಾಲಿನ್ಯಕ್ಕೆ ಮುಖ್ಯವಾಗಿ ಕಾರಣವಾಗಿರುವ ಜನವಸತಿ ಪ್ರದೇಶಗಳಿಂದ ಉತ್ಪತ್ತಿಯಾಗುತ್ತಿರುವ ರೊಚ್ಚು ನೀರನ್ನು ನದಿಗೆ ಬಿಡುತ್ತಿರುವುದನ್ನು ತಡೆಗಟ್ಟಿ, ಸಂಪೂರ್ಣವಾಗಿ ಸಂಸ್ಕರಿಸಿ ಪುನರ್ಬಳಕೆಯ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ ಎಂದು ಸದನದಲ್ಲಿ ತಿಳಿಸಿದರು.

## ಗಜಯೋಗ ಮೂಲಕ ಡೈರೆಕ್ಟರ್ ಕುರ್ಚಿ ಅಲಂಕರಿಸಲು ಹೊರಟ ರಾಮ್ ಪವಾರ್

• ಮಲ್ಲಮ್ಮ ನುಡಿ ವಾರ್ತೆ ಪೀಣ್ಯ,ದಾಸರಹಳ್ಳಿ




ರಾಮ್ ಪವಾರ್ ನಿರ್ದೇಶನದಲ್ಲಿ ಗೋಪಿ ಫಿಲಂಸ್ ಬ್ಯಾನರ್ ಮೂಲಕ ಪತ್ರಕರ್ತ ಗೋಪಿ ನಿರ್ಮಿಸುತ್ತಿರುವ "ಗಜಯೋಗ" ಚಿತ್ರದ ಟೈಟಲ್ ಪೋಸ್ಟರ್ ಅನ್ನು ಕೆಂಗೇರಿ ಉಪನಗರದ ಬಂಡೆ ಮಠದ ಬಂಡೇಶ್ವರ ಸ್ವಾಮಿ ದೇವಸ್ಥಾನದಲ್ಲಿ ಬಿಡುಗಡೆ ಮಾಡಲಾಯಿತು.

ಗಜಯೋಗ ಚಿತ್ರದ ಪೋಸ್ಟರ್ ಸಾಮಾಜಿಕ ಜಾಲತಾಣದಲ್ಲಿ ಸಾಕಷ್ಟು ಸದ್ದು ಮಾಡುತ್ತಿದ್ದು ಟೈಟಲ್ ಹಾಗೂ ಪೋಸ್ಟರ್ ಮೂಲಕ ಕುತೂಹಲ ಮೂಡಿಸಿರುವ ಗಜಯೋಗ ಚಿತ್ರವನ್ನು ವೃತ್ತಿಯಲ್ಲಿ ಟೈಲರ್ ಆಗಿರುವ ರಾಮ್ ಪವಾರ್ ಚೊಚ್ಚಲ ಪ್ರಯತ್ನದಲ್ಲೇ ವಿಭಿನ್ನ ಪೋಸ್ಟರ್ ಮೂಲಕ ತಮ್ಮ ಪ್ರತಿಭೆಯ ಅನಾವರಣ ಮಾಡಲು ಹೊರಟಿದ್ದಾರೆ. ಸಿನಿಮಾದಲ್ಲಿ ಚಿತ್ರತಂಡವು ಹೊಸತರದ ವಿಷಯವನ್ನು ಆಡಿಯನ್ಸ್ ಮುಂದೆ ಹೇಳಲು ಹೊರಟಿರುವಂತೆ ಕಾಣಿಸುತ್ತಿದೆ. ಸಿನಿಮಾದ ಟೈಟಲ್ ಪೋಸ್ಟರ್ ನಲ್ಲಿ ಇರುವಂತಹ ಕುತೂಹಲಕ್ಕೆ ಜನರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿವೆ.

ಚಿತ್ರದ ಸಂಭಾಷಣೆಯನ್ನು ವಿನಾಯಕ್ ಅಂಬಿಗೇರ್ ಹಾಗೂ ದತ್ತಾತ್ರೇಯ(ದತ್ತು) ರವರು ಬರೆಯಲಿದ್ದಾರೆ. ಚಿತ್ರದ ಛಾಯಾಗ್ರಹಣದ ಹೊಣೆಯನ್ನು ದತ್ತಾತ್ರೇಯ ರವರು ವಹಿಸಿಕೊಂಡಿದ್ದಾರೆ. ಹಲವಾರು ಚಿತ್ರಗಳಿಗೆ ಸಾಹಸ ನೀಡಿರುವ ಬಂಡೆ ಚಂದ್ರು ರವರು ತಮ್ಮ ಸಾಹಸದ ಝಲಕ್ ಅನ್ನು ಈ ಚಿತ್ರದಲ್ಲಿ ತೋರಿಸಲಿದ್ದಾರೆ. ಪ್ರಚಾರ ಕಲೆಯ ಜವಾಬ್ದಾರಿಯನ್ನು ಕಿರಣ್ ರೇಕುಲ್ ವಹಿಸಿಕೊಂಡಿದ್ದು ಸಹ ನಿರ್ದೇಶಕರಾಗಿ ರಾಜ್ ಕುಮಾರ್ ಹಿರೋಳ್ ಹಾಗೂ ವಾಸುದೇವ್ ಶೆಟ್ಟಿ ನಿರ್ದೇಶನದ ತಂಡದಲ್ಲಿದ್ದಾರೆ. ಚಿತ್ರಕ್ಕೆ ತರುಣ್ ಮನ್ನೇಕೋಟೆ ಸಾಹಿತ್ಯ ನೀಡಲಿದ್ದಾರೆ.

ಟೈಟಲ್ ಪೋಸ್ಟರ್ ಬಿಡುಗಡೆ ಕಾರ್ಯಕ್ರಮದಲ್ಲಿ ಕುಮಾರ ಸೀಟಿ, ಪುರುಷೋತ್ತಮ್ ಕೆ.ಪಿ, ದಾವಣಗೆರೆ ಮಂಜುನಾಥ್, ಶಬೀರ್ ರಹಮತ್ ಸೇರಿದಂತೆ ಹಲವಾರು ಗಣ್ಯರು, ಚಿತ್ರದ ತಾಂತ್ರಿಕ ವರ್ಗ ಉಪಸ್ಥಿತರಿದ್ದರು.

# ಜಾತಿ ದ್ವೇಷಕ್ಕೆ ಬಸವ ವಚನವೇ ಮದ್ದು

### ಇವ ನಮ್ಮವ ಎಂದೆನಿಸಯ್ಯ ಸಾಲು ಸದನದಲ್ಲಿ ಪ್ರಸ್ತಾಪಿಸಿದ ಶಾಸಕ ಬೆಲ್ದಾಳೆ

• ಮಲ್ಲಮ್ಮ ನುಡಿ ವಾರ್ತೆ ಬೀದರ್



ಜಾತಿ, ಧರ್ಮ, ವರ್ಗದ ಹೆಸರಿನಲ್ಲಿ ನಡೆಯುವ ದ್ವೇಷ ಹಾಗೂ ಸಂಘರ್ಷಗಳಿಗೆ ಮಹಾತ್ಮ ಬಸವಣ್ಣನವರ ವಚನದ ಒಂದೇ ಸಾಲು ಪರಿಹಾರ ನೀಡುತ್ತದೆ ಎಂದು ಬೀದರ್ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಹೇಳಿದರು.

ಬೆಳಗಾವಿ ಅಧಿವೇಶನದಲ್ಲಿ ಗುರುವಾರ ಸಮಾಜಕಲ್ಯಾಣ ಇಲಾಖೆ ಸಚಿವ ಡಾ.ಎಚ್.ಸಿ.ಮಹಾದೇವಪ್ಪ ಅವರು ವಿಧಾನಸಭೆಯಲ್ಲಿ ಮಂಡಿಸಿದ "ಕರ್ನಾಟಕ ಸಾಮಾಜಿಕ ಬಹಿಷ್ಕಾರ ಪ್ರತಿಬಂಧ, ನಿಷೇಧ ಹಾಗೂ ಪರಿಹಾರ ವಿಧೇಯಕ-2025" ರ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಪರಿಶಿಷ್ಟರ ಹಿತವನ್ನು ಕಾಪಾಡುವ ಸಾಮಾಜಿಕ ಬಹಿಷ್ಕಾರದಂಥ ಅನಿಷ್ಟ, ಸಾಮಾಜಿಕ ಪಿಡುಗಿಗೆ ಕಡಿವಾಣ ಹಾಕುವ ನಿಟ್ಟಿನಲ್ಲಿ ಸರ್ಕಾರ ಜಾರಿಗೆ ತರುತ್ತಿರುವ ಈ ವಿಧೇಯಕ ಉತ್ತಮವಾಗಿದೆ ಎಂದರು.

ಹಳ್ಳಿಯಿಂದ ಹಿಡಿದು ದಿಲ್ಲಿವರೆಗೆ ಎಲ್ಲ ಜಾತಿ, ಧರ್ಮ, ವರ್ಗದವರು ಸೌಹಾರ್ದ ಹಾಗೂ ಸಮನ್ವಯತೆಯಿಂದ ಇರಬೇಕು. ಡಾ.ಅಂಬೇಡ್ಕರ್ ಅವರು ಕೊಟ್ಟ ಸಂವಿಧಾನದ ನೆಲೆಗಟ್ಟಿನಲ್ಲೇ ನಾವೆಲ್ಲರೂ ಇಂದು ವಿವಿಧ ಸ್ಥಾನಕ್ಕೇರಲು ಸಾಧ್ಯವಾಗಿದೆ. ಮಹಾತ್ಮ ಬಸವಣ್ಣನವರ "ಇವನಾರವ, ಇವನಾರವ ಎಂದೆನಿಸದಿರಯ್ಯ, ಇವ ನಮ್ಮವ, ಇವ ನಮ್ಮವ, ಇವ ನಮ್ಮ ಮನೆಯ ಮಗನೆಂದೆನಿಸಯ್ಯ" ಎಂಬ ಏಕೈಕ ವಚನ ಪ್ರತಿಯೊಬ್ಬರೂ ಜೀವನದಲ್ಲಿ ಅನುಸರಿಸಿದರೆ ಸಮಾಜದಲ್ಲಿ ಎಲ್ಲೂ ಜಾತಿ, ಧರ್ಮದ ಜಗಳವೇ ಆಗುವುದಿಲ್ಲ. ಜಾತಿ ದ್ವೇಷವೇ ಇರುವುದಿಲ್ಲ ಎಂದು ಸದನದ ಗಮನ ಸೆಳೆದರು.

ಎಸ್ಸಿ, ಎಸ್ಟಿ ಮೇಲಿನ ದೌರ್ಜನ್ಯ ನಿಯಂತ್ರಣ ಹಾಗೂ ಈ ಪ್ರಕರಣಗಳ ತನಿಖೆಗೆ ವೇಗ ನೀಡಲು ರಾಜ್ಯದಲ್ಲಿ 33 ನಾಗರಿಕ ಹಕ್ಕು ಜಾರಿ ನಿರ್ದೇಶನಾಲಯ ( ಡಿಸಿಆರ್ ಇ) ಠಾಣೆಗಳು ಸ್ಥಾಪಿಸಲಾಗಿದೆ. ಈ ಪೈಕಿ 12 ಠಾಣೆಗಳಿಗೆ ಡಿವೈಎಸ್ ಪಿ ನೇಮಕ ಮಾಡಲಾಗಿದೆ. ಬಾಕಿ ಉಳಿದ ಇನ್ನೂ 21 ಠಾಣೆಗಳಿಗೆ ವಿಳಂಬ ಮಾಡದೆ ಡಿವೈ ಎಸ್ ಪಿ ನೇಮಿಸಿ ಪರಿಶಿಷ್ಟರ ಮೇಲಿನ ದೌರ್ಜನ್ಯ ನಿಯಂತ್ರಣ, ಈ ಪ್ರಕರಣಗಳ ತನಿಖೆ ಚುರುಕುಗೊಳಿಸುವಂತೆ ಡಾ.ಬೆಲ್ದಾಳೆ ಆಗ್ರಹಿಸಿದರು.

ಡಿವೈಎಸ್ ಪಿ ನೇಮಕದ ಅಗತ್ಯತೆ ಕುರಿತು ಗೃಹ ಇಲಾಖೆ ಹಿರಿಯ ಅಧಿಕಾರಿಗಳು ಸಮಾಜ ಕಲ್ಯಾಣ ಇಲಾಖೆ ಪ್ರಧಾನ ಕಾರ್ಯದರ್ಶಿಗಳಿಗೆ ಪತ್ರ ಬರೆದು ಕೋರಿದರೂ ಸಮಾಜ ಕಲ್ಯಾಣ ಇಲಾಖೆ ಸ್ಪಂದಿಸುತ್ತಿಲ್ಲ. ಪರಿಶಿಷ್ಟರ ದೌರ್ಜನ್ಯ ತಡೆ, ಹಿತದ ಈ ವಿಷಯವನ್ನು ಸಚಿವರಾದ ಡಾ.ಪರಮೇಶ್ವರ, ಡಾ.ಮಹಾದೇವಪ್ಪ ಹಾಗೂ ಪ್ರಿಯಾಂಕ್ ಖರ್ಗೆ ಅವರು ಗಂಭೀರವಾಗಿ ಪರಿಗಣಿಸಬೇಕು ಎಂದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)